23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 248 | ನವದೆಹಲಿ | ₹ಬೆಲೆ 10 | ಮಾರ್ಚ್ 13 2026, ಶುಕ್ರವಾರ

## ಒಳಪುಟಗಳಲ್ಲಿ

ಪ್ರಜಾಪ್ರಭುತ್ವದಲ್ಲಿ ಬಲವಾದ ವಿರೋಧ ಪಕ್ಷ ಅತ್ಯಗತ್ಯ - ಪು.4

ಗೃಹಬಳಕೆ ವಿದ್ಯುತ್ ಅನ್ಯ ಉದ್ದೇಶಕ್ಕೆ ಬಳಸದಂತೆ ಜನತೆಗೆ ಬೆಸ್ಕಾಂ ಮನವಿ - ಪು.5

ವಿವಾದ ಹುಟ್ಟುಹಾಕಿರುವ ಬೀದರ್‌ನ ಫುಟ್‌ಪಾತ್‌ನಲ್ಲಿ ಫುಡ್‌ಕೋರ್ಟ್ - ಪು.6

# ಅವಿಶ್ವಾಸಕ್ಕೆ ಸೋಲು: ಮತ್ತೆ ಸ್ಪೀಕರ್ ಪೀಠವೇರಿದ ಓಂ ಬಿರ್ಲಾ

**ನವದೆಹಲಿ, ಮಾ.12:** ಲೋಕಸಭಾ ಸ್ಪೀಕರ್ ಓಂ ಬಿರ್ಲಾ ವಿರುದ್ಧ ವಿರೋಧ ಪಕ್ಷಗಳು ಮಂಡಿಸಿದ್ದ ಅವಿಶ್ವಾಸ ನಿರ್ಣಯವನ್ನು ಸದನವು ಗುರುವಾರ ಧ್ವನಿಮತದ ಮೂಲಕ ತಿರಸ್ಕರಿಸಿದೆ. ಇದರೊಂದಿಗೆ ಓಂ ಬಿರ್ಲಾ ಅವರು ಮತ್ತೆ ಸ್ಪೀಕರ್ ಪೀಠವನ್ನೇರಿದ್ದಾರೆ.

ಸದನದಲ್ಲಿ ಕಾನೂನು ಮತ್ತು ನಿಯಮಗಳನ್ನು ಗಾಳಿಗೆ ತೂರಿ, ಕೇವಲ ಆಡಳಿತ ಪಕ್ಷದ ಪರವಾಗಿ (ಪಕ್ಷಪಾತ) ಕಾರ್ಯನಿರ್ವಹಿಸುತ್ತಿದ್ದಾರೆ ಎಂಬ ಗಂಭೀರ ಆರೋಪ ಹೊರಿಸಿ 118 ವಿರೋಧ ಪಕ್ಷದ ಸಂಸದರು ಓಂ ಬಿರ್ಲಾ ಅವರ ವಿರುದ್ಧ ಅವಿಶ್ವಾಸ ನಿರ್ಣಯವನ್ನು ತಂದಿದ್ದರು. ಎರಡು ದಿನಗಳ ಕಾಲ 12 ಗಂಟೆಗಳವರೆಗೆ ಸದನದಲ್ಲಿ ದೀರ್ಘ ಹಾಗೂ ಬಿಸಿಬಿಸಿ ಚರ್ಚೆ ನಡೆಯಿತು. ಆದರೆ, ಸರ್ಕಾರವು ತನ್ನ ಬಹುಮತದ ಬಲದಿಂದ ವಿರೋಧ ಪಕ್ಷಗಳ ಗಂಭೀರ ಕಾಳಜಿಗಳನ್ನು ಕಡೆಗಣಿಸಿ, ಈ ನಿರ್ಣಯವನ್ನು ಸೋಲಿಸಿದೆ. ಅವಿಶ್ವಾಸ ನಿರ್ಣಯ ಬಿದ್ದುಹೋದ ನಂತರ ಸದನವನ್ನು ಉದ್ದೇಶಿಸಿ ಮಾತನಾಡಿದ ಓಂ ಬಿರ್ಲಾ ಅವರು, ತಮ್ಮ ನಡೆಯನ್ನು ಸಮರ್ಥಿಸಿಕೊಂಡರು. ಸ್ವತಂತ್ರ ಭಾರತದ ಸಂಸದೀಯ ಇತಿಹಾಸದಲ್ಲಿ ಸ್ಪೀಕರ್ ವಿರುದ್ಧ ಅವಿಶ್ವಾಸ

**ನಿಯಮಗಳಿಗಿಂತ ಯಾರೂ ಮೇಲಲ್ಲ, ಪ್ರತಿಯೊಬ್ಬರಿಗೂ ನಿಯಮಗಳ ಪ್ರಕಾರವೇ ಅವಕಾಶ: ಲೋಕಸಭಾಧ್ಯಕ್ಷರ ಸ್ಪಷ್ಟನೆ**

ನಿರ್ಣಯ ಚರ್ಚೆಗೊಳಗಾಗುತ್ತಿರುವುದು ಇದು ಮೂರನೇ ಬಾರಿ. ನಾನು ಯಾವಾಗಲೂ ನಿಷ್ಪಕ್ಷಪಾತವಾಗಿ ಹಾಗೂ ನಿಯಮಗಳ ಪ್ರಕಾರವೇ ಸದನವನ್ನು ನಡೆಸಲು ಪ್ರಯತ್ನಿಸಿದ್ದೇನೆ ಎಂದು ಹೇಳಿದ್ದಾರೆ.

ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಮಾತನಾಡಲು ಅವಕಾಶ ನೀಡುತ್ತಿಲ್ಲ ಎಂಬ ಆರೋಪಗಳಿಗೆ ಉತ್ತರಿಸಿದ ಅವರು, ನಿಯಮಗಳಿಗಿಂತ ಯಾರೂ ಮೇಲಲ್ಲ, ಪ್ರತಿಯೊಬ್ಬರಿಗೂ ಸಂಸದೀಯ ನಿಯಮಗಳ ಪ್ರಕಾರವೇ ಅವಕಾಶ ನೀಡಲಾಗುತ್ತದೆ ಎಂದರು. ಆದರೆ, ಅಸಲಿಗೆ ಸರ್ಕಾರದ ಕೈಗೊಂಬೆಯಂತೆ ವರ್ತಿಸುತ್ತಿರುವ ಸ್ಪೀಕರ್



ಅವರ ಈ ಮಾತುಗಳು ಕೇವಲ ತೋರಿಕೆಯ ಸಮರ್ಥನೆಯಂತೆ ಕಾಣುತ್ತಿವೆ ಎಂಬ ಅಸಮಾಧಾನ ಪ್ರತಿಪಕ್ಷಗಳಿಂದ ವ್ಯಕ್ತವಾಗಿದೆ.

ಅವಿಶ್ವಾಸ ನಿರ್ಣಯದ ಚರ್ಚೆಯ ಸಮಯದಲ್ಲಿ ಅಸಲಿ ವಿಚಾರವನ್ನು ಮರೆಮಾಚಲು ಕೇಂದ್ರ ಸರ್ಕಾರ ಸಾಕಷ್ಟು ಪ್ರಯತ್ನಪಟ್ಟಿತು. ಗೃಹ ಸಚಿವ ಅಮಿತ್ ಶಾ ಅವರು ಚರ್ಚೆಯಲ್ಲಿ ಭಾಗವಹಿಸಿ, ವಿರೋಧ ಪಕ್ಷಗಳ ಮೇಲೆಯೇ ವಾಗ್ದಾಳಿ ನಡೆಸಿದರು. ಭಾರತ–ಅಮೆರಿಕ ಹಂಗಾಮಿ ವ್ಯಾಪಾರ ಒಪ್ಪಂದದಿಂದ ರೈತರಿಗೆ ನಷ್ಟವಾಗಿದೆ ಎಂಬ ವಿಚಾರದಲ್ಲಿ ಕಾಂಗ್ರೆಸ್ ಸುಳ್ಳು ಹರಡುತ್ತಿದೆ ಎಂದು ಶಾ ಆರೋಪಿಸಿದರು.

2013ರ ಯುಪಿಎ ಸರ್ಕಾರದ ಅವಧಿಯ ವಿಶ್ವ ವ್ಯಾಪಾರ ಸಂಘಟನೆಯ ಚರ್ಚೆಗಳಲ್ಲೇ ಅಸಲಿ ನಷ್ಟವಾಗಿತ್ತು ಎಂದು ಹೇಳುವ ಮೂಲಕ, ಸ್ಪೀಕರ್ ಅವರ ಮೇಲಿದ್ದ ಪಕ್ಷಪಾತದ ಆರೋಪದಿಂದ ಜನರ ಗಮನವನ್ನು ಬೇರೆಡೆ ಸೆಳೆಯುವ ತಂತ್ರವನ್ನು ಸರ್ಕಾರ ಅನುಸರಿಸಿತು. ಈ ಸದನವು 140 ಕೋಟಿ ಭಾರತೀಯರ ಸಾರ್ವಭೌಮ ಇಚ್ಛೆಯನ್ನು ಪ್ರತಿನಿಧಿಸುತ್ತದೆ ಎಂದು ಬಿರ್ಲಾ ಅವರು ತಮ್ಮ ಭಾಷಣದಲ್ಲಿ ಹೇಳಿದರೂ, ವಾಸ್ತವದಲ್ಲಿ ವಿರೋಧ ಪಕ್ಷದ ಧ್ವನಿಯನ್ನು ಸರ್ಕಾರ ಮತ್ತು ಸ್ಪೀಕರ್ ನಿರಂತರವಾಗಿ ಕಡೆಗಣಿಸುತ್ತಿದ್ದಾರೆ. 42ಕ್ಕೂ ಹೆಚ್ಚು ಸಂಸದರು ಈ ಚರ್ಚೆಯಲ್ಲಿ ಭಾಗವಹಿಸಿ ತಮ್ಮ ಅಸಮಾಧಾನ ಹೊರಹಾಕಿದರು. ಆದರೆ, ಅಂತಿಮವಾಗಿ ಸರ್ಕಾರದ ದರ್ಪ ಹಾಗೂ ಏಕಾಧಿಪತ್ಯದ ಮುಂದೆ ವಿರೋಧ ಪಕ್ಷದ ನ್ಯಾಯಯುತ ಬೇಡಿಕೆಗಳು ವಿಫಲವಾಗಿವೆ.

# ಎಲ್‌ಪಿಜಿ ಕೊರತೆ ಬಗ್ಗೆ ಜನರಿಗೆ ಅಭಯ ನೀಡುವ ಮೋದಿ ಸ್ವತಃ ಭಯಭೀತ: ರಾಹುಲ್ ಗಾಂಧಿ ಲೇವಡಿ

**ನವದೆಹಲಿ, ಮಾ.12:** ಎಲ್‌ಪಿಜಿ ಕೊರತೆ ಕಾಣಿಸಿಕೊಂಡಿರುವ ಹಿನ್ನೆಲೆ ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಪ್ರಧಾನಿ ಜನರಲ್ಲಿ ಭಯಪಡಬೇಡಿ ಎಂದು ಹೇಳುತ್ತಾರೆ. ಆದರೆ ತಾವೇ ಭಯಭೀತರಾಗಿದ್ದಾರೆ ಎಂದು ಹೇಳಿದ್ದಾರೆ.

ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆಯ ಕುರಿತು ಸರ್ಕಾರ ಉತ್ತರಿಸಬೇಕು ಎಂದು ಆಗ್ರಹಿಸಿ ರಾಹುಲ್ ಗಾಂಧಿ, ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಹಲವು ವಿರೋಧ ಪಕ್ಷದ ಸಂಸದರು ಸಂಸತ್ ಭವನದ ಸಂಕೀರ್ಣದಲ್ಲಿ ಪ್ರತಿಭಟನೆ ನಡೆಸಿದ್ದಾರೆ. ಪ್ರತಿಭಟನೆ ನಂತರ ಮಾತನಾಡಿದ ರಾಹುಲ್ ಗಾಂಧಿ, ಎಪ್‌ಸ್ಟೀನ್ ಫೈಲ್ಸ್ ವಿಷಯ ಮತ್ತು ಅಮೆರಿಕದಲ್ಲಿ ನಡೆಯುತ್ತಿರುವ ಅದಾನಿ ಪ್ರಕರಣದಿಂದಾಗಿ ಪ್ರಧಾನಿ ಭಯಭೀತರಾಗಿದ್ದಾರೆ ಎಂದು ಆರೋಪಿಸಿದ್ದಾರೆ.

ಕಾಂಗ್ರೆಸ್, ಡಿಎಂಕೆ, ಟಿಎಂಸಿ ಮತ್ತು ಎಸ್‌ಪಿ ಸೇರಿದಂತೆ ಹಲವಾರು ವಿರೋಧ ಪಕ್ಷದ ಸಂಸದರು ಸಂಸತ್ತಿನ ಮಕರ ದ್ವಾರದ ಬಳಿ ಪ್ರತಿಭಟನೆ ನಡೆಸಿ, ನಾಮ್ ನರೇಂದರ್, ಕಾಮ್ ಸರೆಂಡರ್ (ಹೆಸರು ನರೇಂದ್ರ, ಆದರೆ ಸರೆಂಡರ್ ಅಂದರೆ ಆಗುವುದೇ ಕೆಲಸ) ಎಂದು ಘೋಷಣೆ ಕೂಗಿದ್ದಾರೆ. ಮೋದಿ ಜಿ, ಎಲ್‌ಪಿಜಿ ಮುಂತಾದ ಘೋಷಣೆಗಳನ್ನೂ ಕೂಗಿದರು. ಪ್ರಿಯಾಂಕಾ ಗಾಂಧಿ ಸೇರಿದಂತೆ ವಿರೋಧ ಪಕ್ಷದ ಮಹಿಳಾ ಸಂಸದರು ನಕಲಿ ಇಟ್ಟಿಗೆ ಅಡುಗೆ ಒಲೆಯ ಮುಂದೆ ಕುಳಿತು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಇನ್ನು ಪಶ್ಚಿಮ ಏಷ್ಯಾದ ಪರಿಸ್ಥಿತಿ ಮತ್ತು ಭಾರತದ ಮೇಲೆ ಅದರ ಪರಿಣಾಮದ ಬಗ್ಗೆ ಪೂರ್ಣ ಪ್ರಮಾಣದ ಚರ್ಚೆಗೆ ವಿರೋಧ ಪಕ್ಷಗಳು ಒತ್ತಾಯಿಸುತ್ತಿವೆ. ಇತ್ತ ಯುದ್ಧದ ನಡುವೆ ದೇಶದಲ್ಲಿ ಹಲವೆಡೆ ಎಲ್‌ಪಿಜಿ ಸಮಸ್ಯೆ ಉಂಟಾಗಿದೆ. ಪ್ರಧಾನಿ ಪ್ರಧಾನಿ ಮೋದಿ ಮಾತ್ರ ಬುಧವಾರ ಜನರು ಭಯಭೀತರಾಗದಂತೆ ಮನವಿ ಮಾಡಿದ್ದಾರೆ. ಸಾರ್ವಜನಿಕ ಹಿತಾಸಕ್ತಿಯನ್ನು ರಕ್ಷಿಸಲಾಗುವುದು ಎಂದು ಹೇಳಿದ್ದಾರೆ.




ಎಲ್‌ಪಿಜಿ ಪೂರೈಕೆ ಕೊರತೆ ವಿರೋಧಿಸಿ ದೆಹಲಿಯ ಸಂಸತ್ ಭವನದಲ್ಲಿ ವಿರೋಧ ಪಕ್ಷಗಳು ಗುರುವಾರ ಪ್ರತಿಭಟನೆ ನಡೆಸಿದವು. ರಾಜ್ಯಸಭೆ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್‌ಗಾಂಧಿ, ನಾಯಕರಾದ ಕೆ.ಸಿ. ವೇಣುಗೋಪಾಲ್, ಸಮಾಜವಾದಿ ಪಾರ್ಟಿಯ ರಾಮ್‌ಗೋಪಾಲ್ ಯಾದವ್, ಡಿಎಂಕೆಯ ಕನಿಮೊಳಿ ಮೊದಲಾದವರು ಭಾಗವಹಿಸಿದ್ದರು.

# ರಾಜ್ಯದಲ್ಲಿ ಅಡುಗೆ ಅನಿಲ ಸುಗಮ ಪೂರೈಕೆಗೆ ಕ್ರಮ

**ಬೆಂಗಳೂರು, ಮಾ.12:** ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆಯಲ್ಲಿ ವ್ಯತ್ಯಯವಾಗಬಹುದು ಎಂಬ ಆತಂಕ ಸಾರ್ವಜನಿಕರಲ್ಲಿ ಕಂಡುಬರುತ್ತಿರುವ ಹಿನ್ನೆಲೆಯಲ್ಲಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಸ್ಪಷ್ಟನೆ ನೀಡಿದೆ. ಸಾಕಷ್ಟು ದಾಸ್ತಾನು ಲಭ್ಯತೆ: ರಾಜ್ಯ ಸರ್ಕಾರವು ಪ್ರಮುಖ ತೈಲ ಕಂಪನಿಗಳಾದ ಐಓಸಿ, ಬಿಪಿಸಿ ಮತ್ತು ಎಚ್.ಪಿ.ಸಿ ಅಧಿಕಾರಿಗಳೊಂದಿಗೆ ಉನ್ನತ ಸಭೆ ನಡೆಸಿತು. ರಾಜ್ಯದಾದ್ಯಂತ ಎಲ್‌ಪಿಜಿ ಸಿಲಿಂಡರ್ ಪೂರೈಕೆಯಲ್ಲಿ ಯಾವುದೇ ಕೊರತೆಯಿಲ್ಲ ಮತ್ತು ಮುಂಬರುವ ದಿನಗಳಿಗೂ ಸರಿಹೊಂದುವಷ್ಟು ಸಾಕಷ್ಟು ದಾಸ್ತಾನು ಲಭ್ಯವಿದೆ ಎಂದು ತೈಲ ಕಂಪನಿಗಳು ದೃಢಪಡಿಸಿವೆ.

**ಆತಂಕ ಬೇಡ:** ಎಲ್‌ಪಿಜಿ ಸಿಲಿಂಡರ್ ಕೊರತೆಯ ಬಗ್ಗೆ ಹರಡುತ್ತಿರುವ ಯಾವುದೇ ವದಂತಿಗಳಿಗೆ

**■ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆ ವದಂತಿಗೆ ಕಿವಿಗೊಡಬೇಡಿ: ಆಹಾರ, ನಾಗರಿಕ ಸರಬರಾಜು ಇಲಾಖೆ ಸ್ಪಷ್ಟನೆ**

ಸಾರ್ವಜನಿಕರು ಕಿವಿಗೊಡಬಾರದು. ಸಿಲಿಂಡರ್ಗಳ ಕೊರತೆ ಯಾಗಬಹುದು ಎಂಬ ಆತಂಕದಿಂದ ಸಾರ್ವಜನಿಕರು ಅನಗತ್ಯವಾಗಿ ಸಿಲಿಂಡರ್ ಮುಂಗಡವಾಗಿ ಬುಕ್ ಮಾಡುವುದು ಅಥವಾ ಸಂಗ್ರಹಿಸಿಡಬಾರದು. ಕೃತಕ ಅಭಾವ ಸೃಷ್ಟಿಯಾಗದಂತೆ ಸಹಕರಿಸಬೇಕೆಂದು ಕೋರಿದೆ.

**ಆದ್ಯತಾ ವಲಯಗಳಿಗೆ ಪೂರೈಕೆ:** ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಅಗತ್ಯ ಸೇವೆಗಳಾದ ಸರ್ಕಾರಿ ಆಸ್ಪತ್ರೆಗಳು ಮತ್ತು ಖಾಸಗಿ ಆರೋಗ್ಯ ಕೇಂದ್ರಗಳು, ವಿದ್ಯಾರ್ಥಿ ನಿಲಯಗಳು ಮತ್ತು ಅಂಗನವಾಡಿ, ಶಾಲೆಗಳು ಮತ್ತು ಕಾರಾಗೃಹಗಳು ಮತ್ತು ಇತರ ಸರ್ಕಾರಿ ಸಂಸ್ಥೆಗಳಿಗೆ, ಎಲ್‌ಪಿಜಿ ಪೂರೈಕೆಯಲ್ಲಿ ಸಮಸ್ಯೆಯಾಗದಂತೆ ಕ್ರಮ ವಹಿಸಲು ತೈಲ ಕಂಪನಿಗಳಿಗೆ ಸೂಚಿಸಿದೆ. ಕಾನೂನು ಕ್ರಮದ ಅನಧಿಕೃತವಾಗಿ ಗ್ಯಾಸ್ ಸಿಲಿಂಡರ್‌ಗಳನ್ನು ಸಂಗ್ರಹಿಸಿಡುವುದು, ಕಾಳಸಂತೆಯಲ್ಲಿ ಮಾರಾಟ ಮಾಡುವುದು ಅಥವಾ ರೀಫಿಲ್ಲಿಂಗ್ ದಂಧೆಯಲ್ಲಿ ತೊಡಗುವುದು ಕಂಡುಬಂದಲ್ಲಿ ಕಾನೂನುಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದೆ.

**ಜಿಲ್ಲಾಡಳಿತಕ್ಕೆ ಸೂಚನೆ:** ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಎಲ್‌ಪಿಜಿ ವಿತರಣಾ ಕೇಂದ್ರಗಳ ಮೇಲೆ ನಿಗಾ ಇಡಲು ಮತ್ತು ಸುಗಮ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ನಿರ್ದೇಶನ ನೀಡಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.

# ಫಾರೂಕ್ ಅಬ್ದುಲ್ಲಾ ಮೇಲೆ ಗುಂಡಿನ ದಾಳಿ

**ನವದೆಹಲಿ, ಮಾ.12:** ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಹಾಗೂ ನ್ಯಾಷನಲ್ ಕಾನ್ಫರೆನ್ಸ್ ಅಧ್ಯಕ್ಷ ಫಾರೂಕ್ ಅಬ್ದುಲ್ಲಾ ಮೇಲೆ ಬುಧವಾರ ಗುಂಡಿನ ದಾಳಿ ನಡೆದಿದೆ. ಜಮ್ಮು ಮತ್ತು ಕಾಶ್ಮೀರದ ಉಪ ಮುಖ್ಯಮಂತ್ರಿ ಸುರೀಂದರ್ ಚೌಧರಿ ಅವರೂ ಜತೆಗಿದ್ದು ಇಬ್ಬರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಈ ದಾಳಿಯನ್ನು ಹಲವು ನಾಯಕರು ಖಂಡಿಸಿದ್ದು, ಝಡ್+ ಭದ್ರತಾ ರಕ್ಷಣೆ ಹೊಂದಿರುವ ಮಾಜಿ ಸಿಎಂ ಬಳಿ ದಾಳಿಕೋರರು ಬರಲು ಸಾಧ್ಯವಾಗಿದ್ದು ಹೇಗೆ ಎಂದು ಪ್ರತಿಪಕ್ಷಗಳು ಪ್ರಶ್ನಿಸಿದೆ. ಹಾಗೆಯೇ ಸಮಗ್ರ ತನಿಖೆ ನಡೆಸಬೇಕೆಂದು ನ್ಯಾಷನಲ್ ಕಾನ್ಫರೆನ್ಸ್ ನಾಯಕರು ಒತ್ತಾಯಿಸಿದ್ದಾರೆ.

ಜಮ್ಮುವಿನ ಹೊರವಲಯದ ಗ್ರೇಟರ್ ಕೈಲಾಶ್ ಪ್ರದೇಶದಲ್ಲಿ ಮದುವೆ ಸಮಾರಂಭವೊಂದರಲ್ಲಿ ಭಾಗವಹಿಸಿ ಹಿಂತಿರುಗುತ್ತಿದ್ದಾಗ ಈ ದಾಳಿ ನಡೆದಿದೆ.



**■ ಅಪಾಯದಿಂದ ಮಾಜಿ ಸಿಎಂ ಪಾರು**

**■ ತನಿಖೆಗೆ ಆಗ್ರಹ**

ಸರ್ಕಾರವು ಅಬ್ದುಲ್ಲಾ ಅವರ ಭದ್ರತಾ ವ್ಯಾಪ್ತಿಯನ್ನು ಹೆಚ್ಚಿಸಬೇಕು. ಭದ್ರತಾ ವ್ಯವಸ್ಥೆಗಳ ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಒತ್ತಾಯ ವ್ಯಕ್ತವಾಗಿದೆ. ಕೇಂದ್ರ ರಕ್ಷಣಾ ಪಟ್ಟಿಯಡಿಯಲ್ಲಿ, ವಿಐಪಿ ಭದ್ರತಾ ವ್ಯಾಪ್ತಿ ಅತ್ಯುನ್ನತ ಮಟ್ಟದ Z–ಪ್ಲಸ್ (ASL) ನಿಂದ Z–ಪ್ಲಸ್‌ವರೆಗೆ ಪ್ರಾರಂಭವಾಗುತ್ತದೆ, ನಂತರ Z, Y, Y–ಪ್ಲಸ್ ಮತ್ತು X ವರೆಗೆ ಇರುತ್ತದೆ. ಜಮ್ಮುವಿನ ಪುರಾಣಿ ಮಂಡಿಯ ನಿವಾಸಿ 63 ವರ್ಷದ ಕಮಲ್ ಸಿಂಗ್ ಜಮ್ವಾಲ್ ಎಂದು ಗುರುತಿಸಲಾದ ಆರೋಪಿಯನ್ನು ಸದ್ಯ ಬಂಧಿಸಲಾಗಿದೆ. ಕಳೆದ 20 ವರ್ಷಗಳಿಂದ ಅಬ್ದುಲ್ಲಾ ಅವರನ್ನು ಕೊಲ್ಲಲು ಅವಕಾಶಕ್ಕಾಗಿ ಕಾಯುತ್ತಿದ್ದೆ ಎಂದು ಪೊಲೀಸರಿಗೆ ತಿಳಿಸಿದ್ದಾನೆ. ದಾಳಿಯನ್ನು ತೀವ್ರವಾಗಿ ಖಂಡಿಸಿದ ಜಮ್ಮು ಮತ್ತು ಕಾಶ್ಮೀರ ಕಾಂಗ್ರೆಸ್, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಜವಾಬ್ದಾರಿಯನ್ನು ಹೊಂದಿರುವವರನ್ನು ಹೊಣೆಗಾರರನ್ನಾಗಿ ಮಾಡಬೇಕು ಎಂದು ಹೇಳಿದೆ. ಜಮ್ಮು ಮತ್ತು ಕಾಶ್ಮೀರ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ತಾರಿಕ್ ಹಮೀದ್ ಕರ್ರಾ ಈ ಘಟನೆಯನ್ನು ಆಘಾತಕಾರಿ ಎಂದು ಹೇಳಿದ್ದಾರೆ.

ಮಾಜಿ ಸಿಎಂ ಫಾರೂಕ್ ಅಬ್ದುಲ್ಲಾ ಮತ್ತು ಇತರ ಹಿರಿಯ ನಾಯಕರ ಮೇಲಿನ ಗುಂಡಿನ ದಾಳಿಯನ್ನು ಬಲವಾಗಿ ಖಂಡಿಸುತ್ತೇವೆ. ಇಂತಹ ಹಿಂಸಾಚಾರಗಳು ಪ್ರದೇಶದಲ್ಲಿನ ಪ್ರಸ್ತುತ ಭದ್ರತಾ ಸನ್ನಿವೇಶದ ಬಗ್ಗೆ ಗಂಭೀರ ಕಳವಳವನ್ನು ಹುಟ್ಟುಹಾಕುತ್ತವೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಗುಲಾಮ್ ಅಹ್ಮದ್ ಮೀರ್ ಖಂಡಿಸಿದ್ದಾರೆ. ಸಾರ್ವಜನಿಕ ಸ್ಥಳಗಳಲ್ಲಿ ಇಂತಹ ಘಟನೆಗಳು ದುರದೃಷ್ಟಕರ. ಇದು ಹೇಗೆ ಸಂಭವಿಸಿತು ಎಂಬುದರ ಬಗ್ಗೆ ತನಿಖೆಯಾಗಬೇಕು ಎಂದಿದ್ದಾರೆ.


ಬಿಜೆಪಿ ನಾಯಕ ವಕೀಲ ಸುನಿಲ್ ಸೇಥಿ ಬಿಜೆಪಿ ವಕ್ತಾರರ ಸಭೆಯಲ್ಲಿ ಮಾತನಾಡಿ, ಪ್ರಜಾಪ್ರಭುತ್ವ ಸಮಾಜದಲ್ಲಿ ಹಿಂಸಾಚಾರಕ್ಕೆ ಸ್ಥಾನವಿಲ್ಲ ಮತ್ತು ರಾಜಕೀಯ ಭಿನ್ನಾಭಿಪ್ರಾಯಗಳನ್ನು ಸಂವಾದ ಮತ್ತು ಸಾಂವಿಧಾನಿಕ ವಿಧಾನಗಳ ಮೂಲಕ ಪರಿಹರಿಸಬೇಕು ಎಂದು ಹೇಳಿದ್ದಾರೆ. ಜಾರ್ಖಂಡ್ ಮುಖ್ಯಮಂತ್ರಿ ಹೇಮಂತ್ ಸೊರೇನ್ ಕೂಡ ಕಳವಳ ವ್ಯಕ್ತಪಡಿಸಿದ್ದು, ಈ ಕೃತ್ಯ ಖಂಡನಾರ್ಹ, ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ರಾಜ್ಯದ ನೀರಾವರಿ ಯೋಜನೆಗಳಿಗಿರುವ ಸಮಸ್ಯೆ, ಮಂಜೂರಾತಿ ಕುರಿತು ಸಂಸದರ ಜತೆ ಚರ್ಚೆ

**ಬೆಂಗಳೂರು, ಮಾ.12:** ರಾಜ್ಯದ ನೀರಾವರಿ ಯೋಜನೆಗಳಿಗೆ ಸಂಬಂಧಿಸಿದಂತೆ ಮಂಗಳವಾರ ಸಂಸದರನ್ನು ಭೇಟಿಯಾಗಿ ಮಾಹಿತಿ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಪರಿಷತ್‌ಗೆ ತಿಳಿಸಿದರು.

ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ತಿಪ್ಪಣ್ಣಪ್ಪ ಕಮಕನೂರ ಅವರ ಪ್ರಶ್ನೆಗೆ ಉತ್ತರಿಸಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಕಾನೂನು ಸಚಿವ ಎಚ್.ಕೆ.ಪಾಟೀಲ್‌ರ ಜೊತೆಗೂಡಿ ನವದೆಹಲಿಯಲ್ಲಿ ಸಂಸದರನ್ನು ಭೇಟಿಯಾಗಿ ರಾಜ್ಯದ ನೀರಾವರಿ ಯೋಜನೆಗಳಿಗೆ ಇರುವ ಸಮಸ್ಯೆಗಳು, ಕೇಂದ್ರ ಸರ್ಕಾರದಿಂದ ದೊರೆಯಬೇಕಾದ ಮಂಜೂರಾತಿ ಮೊದಲಾದ ಮಾಹಿತಿ ನೀಡಿ ಅವರ ಸಹಕಾರ ಕೋರಲಾಗುವುದು ಎಂದರು. ಪ್ರಮುಖ ನೀರಾವರಿ ಯೋಜನೆಗಳಿಗೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಸಮರ್ಥ ವಾದ ಮಂಡಿಸಲು ಅನುಕೂಲವಾಗುವಂತೆ ಪ್ರತ್ಯೇಕ ವಕೀಲರ ತಂಡವನ್ನು ರಚಿಸಲಾಗುತ್ತದೆ ಎಂದು ತಿಳಿಸಿದರು.

ಜಲಸಂಪನ್ಮೂಲ ಇಲಾಖೆಯ ಕೃಷ್ಣ ಜಲಭಾಗ್ಯ ನಿಗಮ ಮತ್ತು ಕರ್ನಾಟಕ ನೀರಾವರಿ ನಿಗಮಗಳು ಸುಪ್ರೀಂಕೋರ್ಟ್‌ನಲ್ಲಿ ವಿಶೇಷ ಮೇಲನವಿಗಳನ್ನು ದಾಖಲಿಸಿವೆ. ಒಟ್ಟು 530 ಪ್ರಕರಣಗಳ ವಿಚಾರಣೆ ನಡೆಸಿ ಫೆ.9 ರಂದು ಅಂತಿಮ ಆದೇಶ ನೀಡಲಾಗಿದೆ. ಹೈಕೋರ್ಟ್‌ನಲ್ಲಿ ದಾಖಲಿಸಿದ್ದ ಎಲ್ಲಾ ಪ್ರಕರಣಗಳ ಡಿಲೇ ಕಂಡೋನೇಷನ್‌ನೊಂದಿಗೆ ಮೆರಿಟ್ ಆಧಾರದಲ್ಲಿ ವಾದ ಮಂಡಿಸಿ ಆದೇಶ ಪಡೆಯಲು ಅವಕಾಶ ಇರುತ್ತದೆ. ಹೀಗಾಗಿ ಪ್ರಮುಖ ನೀರಾವರಿ ಯೋಜನೆಗಳ ಭೂಸ್ವಾಧೀನ ಪ್ರಕರಣಗಳಲ್ಲಿ ಜಿಲ್ಲಾ ನ್ಯಾಯಾಲಯಗಳು ಹೆಚ್ಚುವರಿ ಪರಿಹಾರ ನೀಡಿ ಹೊರಡಿಸಿರುವ ಆದೇಶದ ಹಿನ್ನೆಲೆಯಲ್ಲಿ ಉಂಟಾಗಬಹುದಾದ ಆರ್ಥಿಕ ಹೊರೆಯನ್ನು ತಡೆಯಬಹುದು. ಅಲ್ಲದೆ ಯೋಜನೆಗಳ ತೀವ್ರ ಅನುಷ್ಠಾನಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು.



**■ ಮಾಹಿತಿ ನೀಡಿ ಅವರ ಸಹಕಾರ ಕೋರಲಾಗುವುದು: ಪರಿಷತ್‌ನಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್**

**ಪ್ರತ್ಯೇಕ ಶೌಚಾಲಯ:** ಜಿಬಿಎ ವ್ಯಾಪ್ತಿಯಲ್ಲಿ ತೃತೀಯ ಲಿಂಗಿಗಳಿಗೆ ಪ್ರತ್ಯೇಕ ಶೌಚಾಲಯ ನಿರ್ಮಿಸುವ ಚಿಂತನೆಯಿದೆ ಎಂದು ಮೇಲ್ಮನೆ ಸದಸ್ಯೆ ಡಾ. ಆರತಿಕೃಷ್ಣ ಅವರ ಪ್ರಶ್ನೆಗೆ ಉಪಮುಖ್ಯಮಂತ್ರಿ ಉತ್ತರಿಸಿದರು. ಜಿಬಿಎ ವ್ಯಾಪ್ತಿಯ 5 ನಗರಪಾಲಿಕೆ ವ್ಯಾಪ್ತಿಯಲ್ಲಿ ಯಾವುದೇ ಸ್ವಯಂಸೇವಾ ಸಂಸ್ಥೆಯು ಸಾರ್ವಜನಿಕ ಶೌಚಾಲಯಗಳ ವ್ಯವಸ್ಥೆಯನ್ನು ಸರಿಪಡಿಸುವ ಸಂಬಂಧ ವರದಿ ಸಲ್ಲಿಸಿಲ್ಲ, ದೂರುಗಳು ದಾಖಲಾಗಿಲ್ಲ, ಸಾರ್ವಜನಿಕ ಶೌಚಾಲಯಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಿಲ್ಲ, ಆ ಪ್ರಸ್ತಾವನೆಯೂ ಇಲ್ಲ ಎಂದು ಸ್ಪಷ್ಟಪಡಿಸಿದರು. ಮಹಿಳೆಯರ ಸುರಕ್ಷತೆಗಾಗಿ ಜಿಬಿಎ ಪ್ರತ್ಯೇಕವಾಗಿ 100 ಪಿ ಟಾಯ್ಲೆಟ್ ನಿರ್ಮಿಸಲು ಕ್ರಮ ವಹಿಸಲಾಗಿದೆ. ಇವುಗಳಲ್ಲಿ ಹಾಲುಣಿಸುವ ಕೊಠಡಿ, ಬಟ್ಟೆ ಬದಲಿಸುವ ಕೊಠಡಿ, ನೈರ್ಮಲ್ಯ ಕೊಠಡಿ ಸೇರಿ ಅಗತ್ಯ ಮೂಲಸೌಲಭ್ಯವನ್ನು ಕಲ್ಪಿಸಲಾಗಿದೆ ಎಂದು ತಿಳಿಸಿದರು.

# ದೇಶದ ರಕ್ಷಣೆ - ಕೈಗಾರಿಕಾ ಸಾಮರ್ಥ್ಯ ಬಲಪಡಿಸುವಲ್ಲಿ ಬಿಎಚ್‌ಇಎಲ್ ಅನನ್ಯ: ಎಚ್‌ಡಿಕೆ

**ಹರಿದ್ವಾರ (ಉತ್ತರಾಖಂಡ), ಮಾ.12:** ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಉತ್ತರಾಖಂಡದ ಹರಿದ್ವಾರದಲ್ಲಿರುವ ಭಾರತ್ ಹೆವಿ ಎಲೆಕ್ಟ್ರಿಕಲ್ಸ್ (ಬಿಎಚ್‌ಇಎಲ್) ಕಾರ್ಖಾನೆಗೆ ಭೇಟಿ ನೀಡಿದರು. ಈ ಸಂದರ್ಭದಲ್ಲಿ ಸಚಿವರು ಪ್ರಮುಖ ಮೂಲಸೌಕರ್ಯ ಯೋಜನೆಗಳನ್ನು ಲೋಕಾರ್ಪಣೆ ಮಾಡಿದರು ಹಾಗೂ ಖರೀದಿ ಆದೇಶ ನೀಡಿದ್ದ ಪ್ರಮುಖ ಕೈಗಾರಿಕಾ ಮತ್ತು ರಕ್ಷಣಾ ಉಪಕರಣಗಳ ಹಸ್ತಾಂತರಕ್ಕೆ ಚಾಲನೆ ನೀಡಿದರು. ಇದು ಭಾರತದ ಭಾರಿ ಎಂಜಿನಿಯರಿಂಗ್ ಪೂರಕ ವ್ಯವಸ್ಥೆಯ ಬೆಳೆಯುತ್ತಿರುವ ಸಾಮರ್ಥ್ಯಗಳನ್ನು ಎತ್ತಿತೋರಿಸುತ್ತದೆ ಎಂದು ಹೇಳಿದರು.

ವಿದ್ಯುತ್ ಉತ್ಪಾದನೆ, ಶುದ್ಧ ಇಂಧನ, ರಕ್ಷಣಾ ತಯಾರಿಕೆ ಮತ್ತು ಸುಧಾರಿತ ಭಾರಿ ಎಂಜಿನಿಯರಿಂಗ್‌ನಂತಹ ಕ್ಷೇತ್ರಗಳಲ್ಲಿ ಭಾರತದ ಕೈಗಾರಿಕಾ ಸಾಮರ್ಥ್ಯವನ್ನು ಬಲಪಡಿಸುವಲ್ಲಿ ಬಿಎಚ್‌ಇಎಲ್ ವಹಿಸಿದ ಪ್ರಮುಖ ಪಾತ್ರವನ್ನು ಸಚಿವರು ಮುಕ್ತಕಂಠದಿಂದ ಶ್ಲಾಘಿಸಿದರು. ಸಂಸ್ಥೆಯ ಅಧ್ಯಕ್ಷ, ವ್ಯವಸ್ಥಾಪಕ ನಿರ್ದೇಶಕ ಸಾಂಬಶಿವಮೂರ್ತಿ ಸೇರಿದಂತೆ ಹಿರಿಯ ಅಧಿಕಾರಿಗಳು ಸಚಿವರ ಜತೆಯಲ್ಲಿ ಇದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಕೇಂದ್ರ ಸಚಿವ ಕುಮಾರಸ್ವಾಮಿ ಅವರು; ಬಿಎಚ್‌ಇಎಲ್‌ನಂತಹ ಸಂಸ್ಥೆಗಳು ಕೇವಲ ಉತ್ಪಾದನಾ ಘಟಕಗಳು ಅಷ್ಟೇ ಅಲ್ಲ, ಅವು ರಾಷ್ಟ್ರೀಯ ಸಾಮರ್ಥ್ಯದ ಕಣಜಗಳಾಗಿವೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತ ಸರ್ಕಾರವು ಸ್ವಾವಲಂಬಿ ಮತ್ತು ಜಾಗತಿಕವಾಗಿ ಸ್ಪರ್ಧಾತ್ಮಕ ಕೈಗಾರಿಕಾ ಪೂರಕ ವ್ಯವಸ್ಥೆಯನ್ನು ನಿರ್ಮಿಸುವತ್ತ ಗಮನಹರಿಸಿದೆ ಮತ್ತು ಈ ದೃಷ್ಟಿಕೋನವನ್ನು ಸಾಧಿಸುವಲ್ಲಿ ಸಾರ್ವಜನಿಕ ವಲಯದ ಉದ್ಯಮಗಳು ಕೇಂದ್ರ ಪಾತ್ರ ವಹಿಸುತ್ತವೆ ಎಂದು ಕುಮಾರಸ್ವಾಮಿ ಹೇಳಿದರು.

## ಹರಿದ್ವಾರದಲ್ಲಿ ಪತ್ನಿ ಜತೆ ಗಂಗಾ ಪೂಜೆ ಮಾಡಿದ ಕೇಂದ್ರ ಸಚಿವ ಕುಮಾರಸ್ವಾಮಿ

**■ ನೌಕಾಪಡೆಗೆ ಸೂಪರ್ ರಾಪಿಡ್ ಗನ್ ಮೌಂಟ್ ಹಸ್ತಾಂತರ**

**■ ಸೌರ ವಿದ್ಯುತ್ ಸ್ಥಾವರಕ್ಕೆ ಚಾಲನೆ**



## ಶುದ್ಧ ಇಂಧನಕ್ಕೆ ಉತ್ತೇಜನ

ಕಾರ್ಖಾನೆಗೆ ಭೇಟಿ ನೀಡಿದ ಸಮಯದಲ್ಲಿ, ಕೇಂದ್ರ ಸಚಿವರು ಹರಿದ್ವಾರ ಕಾರ್ಖಾನೆಯಲ್ಲಿ 5 ಮೆಗಾವ್ಯಾಟ್ ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರವನ್ನು ರಾಷ್ಟ್ರಕ್ಕೆ ಅರ್ಪಿಸಿದರು. ಈ ಯೋಜನೆಯು ಸುಸ್ಥಿರ ಇಂಧನ ಪರಿಹಾರಗಳತ್ತ ಬಿಎಚ್‌ಇಎಲ್‌ನ ಪರಿವರ್ತನೆಯಲ್ಲಿ ಮಹತ್ವದ ಹೆಜ್ಜೆಯನ್ನು ತೋರಿಸುತ್ತದೆ ಎಂದು ಎಚ್.ಡಿ. ಕುಮಾರಸ್ವಾಮಿ ನುಡಿದರು. 11,000ಕ್ಕೂ ಹೆಚ್ಚು ಸೌರ ಮಾಡ್ಯೂಲ್‌ಗಳು ಮತ್ತು ವಾರ್ಷಿಕ ಸುಮಾರು 90 ಲಕ್ಷ ಕಿಲೋವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುತ್ತಿದೆ. ಈ ಯೋಜನೆಯು ಇಂಗಾಲದ ಹೊರಸೂಸುವಿಕೆಯನ್ನು ಕಡಿಮೆ ಮಾಡಿ ಶುದ್ಧ ಇಂಧನ ಉತ್ಪಾದನೆಗೆ ಕೊಡುಗೆ ನೀಡುತ್ತದೆ. ಈ ಉಪಕ್ರಮವು ಬಿಎಚ್‌ಇಎಲ್ ಹರಿದ್ವಾರದ ಶುದ್ಧ ಇಂಧನದ ಬಳಕೆಗೆ ಉತ್ತಮ ಉದಾಹರಣೆಯಾಗಿದೆ. 2070ರ ವೇಳೆಗೆ ಇಂಗಾಲ ಹೊರಸೂಸುವಿಕೆಯನ್ನು ಶೂನ್ಯಕ್ಕೆ ತರಬೇಕು ಎಂಬ ಪ್ರಧಾನಿ ನರೇಂದ್ರ ಮೋದಿಯವರ ದೃಷ್ಟಿಕೋನಕ್ಕೆ ಪೂರ್ಣವಾಗಿದೆ" ಎಂದು ಒತ್ತಿ ಹೇಳಿದರು. ಈ ಸ್ಥಾವರವು ವಾರ್ಷಿಕವಾಗಿ ಸುಮಾರು 90 ಲಕ್ಷ ಯೂನಿಟ್ ಸೌರ ವಿದ್ಯುತ್ ಉತ್ಪಾದಿಸುವ ನಿರೀಕ್ಷೆಯಿದೆ. ಇದು ಇಂಗಾಲದ ಹೊರಸೂಸುವಿಕೆಯನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ ಇದೇ ವೇಳೆ ಬಿಎಚ್‌ಇಎಲ್‌ನ ಸೆಂಟ್ರಲ್ ಫೌಂಡ್ರಿ ಮತ್ತು ಫೋರ್ಜ್ ಪ್ಲಾಂಟ್ ನಲ್ಲಿ 30 ಟನ್ ಸಾಮರ್ಥ್ಯದ ಎಲೆಕ್ಟ್ರಿಕ್ ಆರ್ಕ್ ಫರ್ನೇಸ್ (ಇಎಎಫ್) ಅನ್ನು ಉದ್ಘಾಟಿಸಿದರು, ಇದು ಕಂಪನಿಯ ಲೋಹ ಮತ್ತು ಉತ್ಪಾದನಾ ಸಾಮರ್ಥ್ಯಗಳನ್ನು ಹೆಚ್ಚಿಸುತ್ತದೆ. ಈ ಸೌಲಭ್ಯವನ್ನು ಪರಿಶೀಲಿಸಿದ ಸಚಿವರು; ಈ ಘಟಕದಲ್ಲಿರುವ ಕುಲುಮೆಯು ವಿದ್ಯುತ್, ಭಾರಿ ಎಂಜಿನಿಯರಿಂಗ್ ಮತ್ತು ಕಾರ್ಯತಂತ್ರದ ವಲಯಗಳಲ್ಲಿ ಬಳಸುವ ನಿರ್ಣಾಯಕ ಘಟಕಗಳಿಗೆ ಭಾರತದ ದೇಶೀಯ ಉತ್ಪಾದನಾ ಸಾಮರ್ಥ್ಯವನ್ನು ಬಲಪಡಿಸುತ್ತದೆ ಎಂದು ಹೇಳಿದರು.

## ಸ್ಥಳೀಯವಾಗಿಯೇ ತಯಾರಿಕೆ

ಇದೇ ಸಂದರ್ಭದಲ್ಲಿ ಭಾರತೀಯ ನೌಕಾಪಡೆಗಾಗಿ ನವೀಕರಿಸಿದ ಸೂಪರ್ ರ್‍ಯಾಪಿಡ್ ಗನ್‌ಮೌಂಟ್ ಅನ್ನು ಸಚಿವ ಎಚ್.ಡಿ.ಕುಮಾರಸ್ವಾಮಿ ಹಸ್ತಾಂತರಿಸಿ, ಅದರ ಸಾಗಣೆ ವಾಹನಕ್ಕೆ ಚಾಲನೆ ನೀಡಿದರು. ಈ ಮುಂದುವರಿದ ನೌಕಾ ಶಸ್ತ್ರಾಸ್ತ್ರ ವ್ಯವಸ್ಥೆಯು ವಿಮಾನ ವಿರೋಧಿ ಮತ್ತು ಮೇಲ್ಮೈ ವಿರೋಧಿ ಕಾರ್ಯಾಚರಣೆಗಳಿಗಾಗಿ ವಿನ್ಯಾಸಗೊಳಿಸಲಾದ 35 ಕಿ.ಮೀ.ವರೆಗೆ ದಾಳಿಯ ವ್ಯಾಪ್ತಿಯೊಂದಿಗೆ ನಿಮಿಷಕ್ಕೆ 120 ಸುತ್ತುಗಳವರೆಗೆ ಕ್ಷಿಪ್ರವಾಗಿ ಗುಂಡು ಹಾರಿಸುವ ಸಾಮರ್ಥ್ಯವನ್ನು ಹೊಂದಿದೆ. ಸೂಪರ್ ರ್‍ಯಾಪಿಡ್ ಗನ್ ಮೌಂಟ್ ಮೈಲಿಗಲ್ಲು ಭಾರತದ ರಕ್ಷಣಾ ಉತ್ಪಾದನಾ ವ್ಯವಸ್ಥೆ ಗಣನೀಯವಾಗಿ ಬೆಳೆಯುತ್ತಿರುವುದನ್ನು ಎತ್ತಿ ತೋರಿಸುತ್ತದೆ ಮತ್ತು ಪ್ರಧಾನಿ ಮೋದಿಯವರ ಆತ್ಮನಿರ್ಭರ ಭಾರತ ಮತ್ತು ಮೇಕ್ ಇನ್ ಇಂಡಿಯಾದ ದೃಷ್ಟಿಕೋನವನ್ನು ಮುನ್ನಡೆಸುತ್ತದೆ ಎಂದು ಸಚಿವರು ಹೇಳಿದರು.

ಟರ್ಬೊ ಜನರೇಟರ್‌ಗೆ ಚಾಲನೆ: ಈ ಸಮಯದಲ್ಲಿ, ಸಚಿವರು, ಬೃಹತ್ ಗಾತ್ರದ ಟರ್ಬೊ ಜನರೇಟರ್‌ನ ರವಾನೆಗೆ ಕೂಡ ಚಾಲನೆ ನೀಡಿದರು. ಇದು ಭಾರತದ ಭಾರೀ ವಿದ್ಯುತ್ ತಯಾರಿಕಾ ಸಾಮರ್ಥ್ಯಗಳ ಪ್ರಮಾಣ ಮತ್ತು ಅತ್ಯಾಧುನಿಕತೆಗೆ ಪ್ರತೀಕವಾಗಿದ್ದು, ಬೃಹತ್ ವಿದ್ಯುತ್ ಯೋಜನೆಗಾಗಿ ನಿರ್ಮಿಸಲಾದ ಈ ಜನರೇಟರ್, ಭಾರತದ ಇಂಧನ ಮೂಲಸೌಕರ್ಯಕ್ಕೆ ಅಗತ್ಯವಾದ ಹೆಚ್ಚಿನ ಸಾಮರ್ಥ್ಯದ ವಿದ್ಯುತ್ ಉಪಕರಣಗಳನ್ನು ತಯಾರಿಸುವಲ್ಲಿ ಬಿಎಚ್‌ಇಎಲ್‌ನ ಪರಿಣತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಅಧಿಕಾರಿಗಳು ಸಚಿವರಿಗೆ ವಿವರಿಸಿದರು.

## ನಿತ್ಯ ಪಂಚಾಂಗ 13.3.2026 ಶುಕ್ರವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯಣ ಶಿಶಿರ ಹೇಮಂತ ಋತು, ಚಾಂದ್ರಮಾನ, ಪಾಲ್ಗುಣ ಬಹುಳ

ದಶಮಿ,

ಪೂರ್ವಾಷಾಢ ನಕ್ಷತ್ರ

ಕಣ್ಣಾಗಾಲ ಮಹಾಲಕ್ಷ್ಮೀ ತಂಪು,

ಹೊನ್ನಾಳಿ|ಕುಂದೂರು ಆಂಜನೇಯ ರಥ,

ಮೃಗವಧೆ ಮಲ್ಲಿಕಾರ್ಜುನ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಸರ್ಕಾರದ ಆಡಳಿತದಲ್ಲಿ ಎಐ ಬಳಕೆಗೆ ಸಂಶೋಧನೆ ಅಗತ್ಯ: ಡಿಸಿಎಂ ಶಿವಕುಮಾರ್



**ಬೆಂಗಳೂರು, ಮಾ.12:** ಸರ್ಕಾರದ ಆಡಳಿತದಲ್ಲಿ ಎಐ ಬಳಕೆ ಮಾಡಿಕೊಳ್ಳಲು ಸಂಶೋಧನೆ ಆಗಬೇಕು. ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿಯ ಭಾರತಿ ಶೆಟ್ಟಿ ಪ್ರಶ್ನೆ. ಅಧ್ಯಯನದ ಬಳಿಕ ಎಐ ಬಳಕೆ ಬಗ್ಗೆ ನಿರ್ಧಾರ ಮಾಡೋದಾಗಿ ಡಿಸಿಎಂ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ. ರಾಜ್ಯದ ಆಡಳಿತ ಸುಧಾರಣೆ ಕುರಿತು ಹಾರನಹಳ್ಳಿ ರಾಮಸ್ವಾಮಿ ವರದಿ ಅನುಷ್ಠಾನ ಸರ್ಕಾರ ಮಾಡಿಲ್ಲ. ವರದಿಯಲ್ಲಿ 15%ನಷ್ಟು ಶಿಫಾರಸು ಅನುಷ್ಠಾನ ಮಾಡಿಲ್ಲ. ವರದಿ ಮೂಲೆ ಹಿಡಿದಿದೆ. ಸರ್ಕಾರದ ವ್ಯವಹಾರದಲ್ಲಿ ಎಐ ಅನುಷ್ಠಾನ ಆಗಬೇಕು. ಇದಕ್ಕೆ ಉತ್ತರಿಸಿದ ಡಿಸಿಎಂ ಡಿ.ಕೆ ಶಿವಕುಮಾರ್, ಪ್ರಸ್ತುತ ಎಐ ಯುಗವಾಗಿದೆ.

ಇಡೀ ವಿಶ್ವವೇ ಎಐ ಅಡಿ ಕೆಲಸ ಮಾಡುತ್ತಿದೆ. ಸರ್ಕಾರದ ಆಡಳಿತದಲ್ಲಿ ಎಐ ತರಬೇಕಾದರೆ ಸಂಶೋಧನೆ ಆಗಬೇಕು. ಇದಾದ ಬಳಿಕ ಅನುಷ್ಠಾನದ ಬಗ್ಗೆ ಚಿಂತನೆ ಮಾಡ್ತೀವಿ ಎಂದರು.

### ಅಸ್ಸಾಂ ಚುನಾವಣೆ ಗೆಲ್ಲುವುದು ಹೇಗೆ?

ನಾನೇ ಎಐ ಬಳಕೆ ಮಾಡಿದ್ದೇನೆ. ನಾನೇ ಚಾಟ್ ಜಿಪಿಟಿ ಬಳಸಿದ್ದೇನೆ. ನನ್ನ ಭಾಷಣದ ಬಗ್ಗೆ ಪಿಎಗೆ ಕೇಳ್ತಿದ್ದೆ. ನನ್ನ ಮಗಳು ಯಾಕೆ ಅವರಿಗೆ ಕೇಳ್ತಿರಾ ಚಾಟ್ ಜಿಪಿಟಿಯಲ್ಲಿ ಕೇಳಿ ಅಂತ ತೋರಿಸಿಕೊಟ್ಟಳು. ನಾನು ಅಸ್ಸಾಂಗೆ ಹೋದಾಗ How to win ಅಸ್ಸಾಂ ಎಲೆಕ್ಷನ್ ಅಂತ ಕೇಳಿದೆ. ಅದನ್ನೆಲ್ಲಾ ಇಟ್ಕೊಂಡು ನಾವು ಎಲೆಕ್ಷನ್ ಮಾಡೋಕೆ ಆಗುತ್ತಾ? ಬೇಕಾದರೆ ನೀವೂ ನನ್ನ ಜೊತೆ ಬನ್ನಿ ಇಲ್ಲೇ ಕೂರೋಣ ನಾನೇ ಮೊಬೈಲ್‌ನಲ್ಲಿ ತೋರಿಸ್ತೀನಿ ಎಂದರು. ಈ ಮೂಲಕ ಅಸ್ಸಾಂ ಚುನಾವಣೆ ಗೆಲ್ಲೋದು ಹೇಗೆ ಕರ್ನಾಟಕ ಮಾದರಿ ಪಾಲಿಸಿ ಎಂದು ತೋರಿಸುತ್ತದೆ.

# ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ವಜಾ ಮಾಡುವವರೆಗೂ ಇಲಾಖೆ ಸುಧಾರಿಸಲ್ಲ




**ಬೆಂಗಳೂರು, ಮಾ.12:** ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರನ್ನು ಸಂಪುಟದಿಂದ ವಜಾ ಮಾಡುವವರೆಗೂ ಆರೋಗ್ಯ ಇಲಾಖೆ ಸುಧಾರಿಸುವುದಿಲ್ಲ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಟೀಕಿಸಿದ್ದಾರೆ.

ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ದಿನೇಶ್ ಗುಂಡೂರಾವ್ ಅವರನ್ನು ಅನಾರೋಗ್ಯ ಸಚಿವ ಎಂದು ಜರಿದಿದ್ದಾರೆ. ದಿನಬೆಳಗಾದರೆ ಒಂದೊಂದು ಹೊಸ ಎಡವಟ್ಟುಗಳೊಂದಿಗೆ ಸುದ್ದಿ ಆಗುತ್ತಿರುವ ಆರೋಗ್ಯ ಇಲಾಖೆ, ಇವತ್ತು 230 ಸಮುದಾಯ ಆರೋಗ್ಯ ಕೇಂದ್ರಗಳನ್ನು ಕೆಳದರ್ಜೆಗಿಳಿಸುವ ಆಘಾತಕಾರಿ ನಡೆಗೆ ಸುದ್ದಿಯಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಸಿಎಚ್‌ಸಿಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡದೆ ಏಕಾಏಕಿ ತಜ್ಞ ವೈದ್ಯರನ್ನು ತಾಲ್ಲೂಕು ಆಸ್ಪತ್ರೆಗಳಿಗೆ ವರ್ಗಾವಣೆ ಮಾಡಿದರೆ, ಆರೋಗ್ಯ ಸೇವೆ ಅರಿಸಿ ಸಿಎಚ್‌ಸಿಗಳಿಗೆ ದಿನನಿತ್ಯ ಭೇಟಿ ನೀಡುವ ನೂರಾರು ಹೊರರೋಗಿಗಳ ಗತಿ ಏನು ಸ್ವಾಮಿ? ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಪ್ರಶ್ನಿಸಿದ್ದಾರೆ. ತಾಲ್ಲೂಕು ಆಸ್ಪತ್ರೆಗಳಲ್ಲಿ ಖಾಲಿ ಹುದ್ದೆಗಳ ಭರ್ತಿ ಮಾಡಲು ಯೋಗ್ಯತೆ ಇಲ್ಲದ ಸರ್ಕಾರ ಈ ರೀತಿ ಏಕಾಏಕಿ ವೈದ್ಯರನ್ನು ಸಿಎಚ್‌ಸಿಗಳಿಂದ ತಾಲ್ಲೂಕು ಆಸ್ಪತ್ರೆಗಳಿಗೆ ವರ್ಗಾವಣೆ ಮಾಡಲು ಮುಂದಾಗಿರುವುದು ರಾಜ್ಯ ಕಾಂಗ್ರೆಸ್ ಸರ್ಕಾರ ಆರ್ಥಿಕವಾಗಿ ಎಷ್ಟು ದಿವಾಳಿ ಆಗಿದೆ ಎನ್ನುವುದಕ್ಕೆ ಮತ್ತೊಂದು ತಾಜಾ ಉದಾಹರಣೆಯಾಗಿದೆ ಎಂದು ಅವರು ಆಪಾದಿಸಿದ್ದಾರೆ.

**ಅಭಿವೃದ್ಧಿ ಸಾಧ್ಯವಿಲ್ಲ:** ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ಸರ್ಕಾರ ತೊಲಗುವವರೆಗೂ ಕರ್ನಾಟಕದ ಅಭಿವೃದ್ಧಿ ಸಾಧ್ಯವಿಲ್ಲ, ಕನ್ನಡಿಗರಿಗೆ ನೆಮದಿ ಇಲ್ಲ ಎಂದು ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ತಾನು ಕುರ್ಚಿಯಲ್ಲಿ ಇರುತ್ತೇನೋ ಇಲ್ಲವೋ ಎಂದು ಸ್ಪಷ್ಟನೆ ಕೊಡದೆ ತಮ್ಮನ್ನು ಲೇಮ್‌ಡೆಕ್ ಸಿಎಂ ಮಾಡಿರುವ ಹೈಕಮಾಂಡ್ ಮೇಲೆ ಮುಖ್ಯಮಂತ್ರಿಗಳಿಗೆ ಅಸಮಾಧಾನವಿದೆ. ಕೊಟ್ಟ ಮಾತಿಗೆ ತಪ್ಪಿ, ಕುರ್ಚಿ ಬಿಟ್ಟುಕೊಡದೆ ಸತಾಯಿಸುತ್ತಿರುವ ಮುಖ್ಯಮಂತ್ರಿಗಳ ಮೇಲೆ ಉಪಮುಖ್ಯಮಂತ್ರಿಗಳಿಗೆ ಅಸಮಾಧಾನವಿದೆ ಎಂದು ವ್ಯಂಗ್ಯವಾಡಿದ್ದಾರೆ. ಕೈಗೂ ಸಿಗದ, ಫೋನಿಗೂ ಸಿಗದ ಸಚಿವರ ಮೇಲೆ ಶಾಸಕರಿಗೆ ಅಸಮಾಧಾನವಿದೆ. ಮೂರು ವರ್ಷಗಳಿಂದ ನಯಾ ಪೈಸೆ ಅಭಿವೃದ್ಧಿ ಕೆಲಸ ಮಾಡದ ಶಾಸಕರು, ಸರ್ಕಾರದ ಮೇಲೆ ಕನ್ನಡಿಗರಿಗೆ ಬೇಸರವಿದೆ ಎಂದು ಅವರು ಆರೋಪಿಸಿದ್ದಾರೆ.



ಹಟ್ಟಿ ಚಿನ್ನದ ಗಣಿ ಸಂಸ್ಥೆಯ ವತಿಯಿಂದ ಸುಮಾರ 97 ಲಕ್ಷರೂ.ಗಳ ಲಾಭಾಂಶದ ಚೆಕ್ಕನ್ನು ಸಿಎಂ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಲಾಯಿತು.



ಕೆಎಸ್‌ಎಂಸಿ ಸಂಸ್ಥೆಯ ವತಿಯಿಂದ ಲಾಭಾಂಶದ ಚೆಕ್ಕನ್ನು ಸಿಎಂ ಸಿದ್ದರಾಮಯ್ಯ ಅವರಿಗೆ ಹಸ್ತಾಂತರಿಸಲಾಯಿತು.

# ಸನ್ನಡತೆ ತೋರಿದ 30 ಬಂಧಿಗಳ ಬಿಡುಗಡೆಗೊಳಿಸಿ ಸರ್ಕಾರ ಆದೇಶ

**ಬೆಂಗಳೂರು, ಮಾ.12:** ರಾಜ್ಯದ ವಿವಿಧ ಕೇಂದ್ರ ಕಾರಾಗೃಹಗಳಲ್ಲಿ ಉತ್ತಮ ನಡತೆ ತೋರಿದ ಒಟ್ಟು 30 ಜೀವಾವಧಿ ಶಿಕ್ಷಾ ಬಂಧಿಗಳನ್ನು ಅವಧಿಪೂರ್ವವಾಗಿ ಬಿಡುಗಡೆಗೊಳಿಸಿ ಕರ್ನಾಟಕ ಸರ್ಕಾರವು ಮಹತ್ವದ ಆದೇಶ ಹೊರಡಿಸಿದೆ. ಭಾರತ ಸಂವಿಧಾನದ ಅನುಚ್ಛೇದ 161ರ ಅಡಿಯಲ್ಲಿ ಘನತೆವೆತ್ತ ರಾಜ್ಯಪಾಲರು ನೀಡಿದ ಅನುಮೋದನೆಯ ಮೇರೆಗೆ ಈ ಕ್ರಮ ಕೈಗೊಳ್ಳಲಾಗಿದೆ 54 ಪ್ರಕರಣಗಳನ್ನು ಪರಿಶೀಲಿಸಿದ ಎಲ್‌ಸಿಆರ್ ಸಮಿತಿಯು 31 ಬಂದಿಗಳ ಬಿಡುಗಡೆಗೆ ಶಿಫಾರಸು ಮಾಡಿತ್ತು. ಈ ಪೈಕಿ ಒಬ್ಬ ಮಹಿಳಾ ಬಂದಿ ಪೆರೋಲ್ ರಜೆಯಲ್ಲಿದ್ದಾಗ ಮೃತಪಟ್ಟ ಕಾರಣ, ಅವರನ್ನು ಹೊರತುಪಡಿಸಿ ಉಳಿದ 30 ಬಂದಿಗಳನ್ನು ಬಿಡುಗಡೆ ಮಾಡಲಾಗಿದೆ. ಒಳಾಡಳಿತ ಇಲಾಖೆಯ (ಸೆರೆಮನೆ) ಅಧೀನ ಕಾರ್ಯದರ್ಶಿ ಬಿ.ಕೆ. ಭುವನೇಂದ್ರ ಕುಮಾರ್ ಅವರು ರಾಜ್ಯಪಾಲರ ಆದೇಶದಂತೆ ಈ ಆದೇಶವನ್ನು ಹೊರಡಿಸಿದ್ದಾರೆ.

**ಬಿಡುಗಡೆ ಹೊಂದಿದ ಬಂಧಿಗಳ ವಿವರ:** ಬೆಂಗಳೂರು ಕೇಂದ್ರ ಕಾರಾಗೃಹ – 14, ವಿಜಯಪುರ ಕೇಂದ್ರ ಕಾರಾಗೃಹ 5, ಬಳ್ಳಾರಿ ಕೇಂದ್ರ ಕಾರಾಗೃಹ –3, ಮೈಸೂರು, ಬೆಳಗಾವಿ ಮತ್ತು ಕಲಬುರಗಿ– ತಲಾ 2, ಶಿವಮೊಗ್ಗ (ಪುರುಷ), ಧಾರವಾಡ ಮತ್ತು ಶಿವಮೊಗ್ಗ (ಮಹಿಳಾ) ಕಾರಾಗೃಹ – ತಲಾ 2.

# ಸಫಾರಿ ಸ್ಥಗಿತ, ಪುನರಾರಂಭ ಸಮರ್ಥಿಸಿಕೊಂಡ ಈಶ್ವರ ಖಂಡ್ರೆ



**ಬೆಂಗಳೂರು, ಮಾ.12:** ಕಳೆದ ನವೆಂಬರ್‌ನಲ್ಲಿ ಬಂಡೀಪುರ ಮತ್ತು ನಾಗರಹೊಳೆಯಲ್ಲಿ ಸಫಾರಿಯನ್ನು ತಾತ್ಕಾಲಿಕವಾಗಿ ಬಂದ್ ಮಾಡಿ, ಈಗ ಷರತ್ತುಬದ್ಧವಾಗಿ ಮತ್ತೆ ಆರಂಭ ಮಾಡಿರುವುದನ್ನು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ಸಮರ್ಥಿಸಿಕೊಂಡಿದ್ದಾರೆ.

ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಮಧ್ಯಪ್ರವೇಶಿಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಸಫಾರಿ ಸ್ಥಗಿತಗೊಳಿಸಿದ್ದರಿಂದ 4 ಸಾವಿರಕ್ಕೂ ಹೆಚ್ಚು ಜನರು ಉದ್ಯೋಗ ಕಳೆದುಕೊಂಡಿದ್ದರು. ಸಫಾರಿ ದೇಶಾದ್ಯಂತ ಹಲವು ವರ್ಷದಿಂದ ನಡೆಯುತ್ತಿದೆ. ಒಂದು ಸಮೀಕ್ಷೆಯನ್ನೂ ನಡೆಸದೆ ಸಫಾರಿಯನ್ನು ಏಕಾಏಕಿ ನಿಲ್ಲಿಸಿದ್ದು ಸರಿಯಲ್ಲ ಎಂದರು.

ಇದಕ್ಕೆ ಉತ್ತರಿಸಿದ ಅರಣ್ಯ ಸಚಿವರು, ಸಫಾರಿಯನ್ನು ಏಕಾಏಕಿ ನಿಲ್ಲಿಸಲಿಲ್ಲ. ಕಳೆದ ನವೆಂಬರ್ ತಿಂಗಳಲ್ಲಿ 15 ದಿನಗಳ ಅಂತರದಲ್ಲಿ ಮೂರು ಅಮೂಲ್ಯ ಜೀವಹಾನಿ ಆಗಿತ್ತು, ಒಬ್ಬರು ಶಾಶ್ವತವಾಗಿ ಅಂಗವಿಕಲರಾದರು, ಹುಲಿಗಳು ಕಾಡಿನಿಂದ ಹೊರಗೆ ಬಂದು ದಾಳಿ ಮಾಡುತ್ತಿದ್ದವು. ಜನರ ಅಮೂಲ್ಯ ಜೀವ ರಕ್ಷಣೆ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಯಿತು ಎಂದು ಸ್ಪಷ್ಟಪಡಿಸಿದರು.

ಮಿಗಿಲಾಗಿ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ನಡೆದ ವನ್ಯಜೀವಿ ಮಂಡಳಿಯ ಸಭೆಯಲ್ಲಿ ಈ ಬಗ್ಗೆ ಚರ್ಚಿಸಿ, ಕೇಂದ್ರ ವನ್ಯಜೀವಿ ಸಂಸ್ಥೆಯ ಪ್ರತಿನಿಧಿಯನ್ನೂ ಒಳಗೊಂಡ ತಜ್ಞರ ಸಮಿತಿ ರಚಿಸಿ, ಆ ತಜ್ಞರ ಸಮಿತಿಯ ಪ್ರಾಥಮಿಕ ವರದಿಯ ಆಧಾರದಲ್ಲಿ ಸಫಾರಿ ಪುನಾರಂಭ ಮಾಡಲಾಗಿದೆ ಎಂದು ವಿವರಿಸಿದರು.

**ಬಂಡೀಪುರದಲ್ಲಿ ಹುಲಿಗಳ ಸಂಖ್ಯೆಯಲ್ಲಿ ಏರಿಕೆ**

1972ರಲ್ಲಿ ಬಂಡೀಪುರದಲ್ಲಿ ಕೇವಲ 12 ಹುಲಿಗಳಿದ್ದವು. ಕಳೆದ 3 ವರ್ಷದ ಹಿಂದೆ ಗಣತಿ ನಡೆದಾಗ ಅಲ್ಲಿ 150 ಹುಲಿಗಳು ಇದ್ದವು. ಈಗ ಅವುಗಳ ಸಂಖ್ಯೆ 175 ಹುಲಿ ಇವೆ. ಕಾಡಿನ ಧಾರಣಾ ಸಾಮರ್ಥ್ಯ ತಿಳಿಯಲು ತಜ್ಞರ ಸಮಿತಿಯಿಂದ ವರದಿ ತರಿಸಿಕೊಳ್ಳುತ್ತಿದ್ದೇವೆ.

ಕಾಡು ಹೆಚ್ಚುತ್ತಿಲ್ಲ. ಬದಲಾಗಿ ಕ್ಷೀಣಿಸುತ್ತಿದೆ. ಸಫಾರಿ ಪುನಾರಂಭ ಮಾಡಿದ ಬಳಿಕ ಪ್ರತಿಷ್ಠಾನಕ್ಕೆ ಸಫಾರಿಯಿಂದ ಬರುವ ಆದಾಯದಲ್ಲಿ ಶೇ.35ರಷ್ಟನ್ನು ಕಾಡಿನಂಚಿನ ಗ್ರಾಮದಲ್ಲಿ ಜನಸಂಪರ್ಕ ಸಭೆ ಮಾಡಲು, ಶಿಕ್ಷಣ, ಮೂಲಸೌಕರ್ಯ ಹೆಚ್ಚಳಕ್ಕೆ, ಉದ್ಯೋಗ ಸೃಷ್ಟಿಗೆ ಬಳಸಲು ಸೂಚಿಸಲಾಗಿದೆ ಎಂದು ಸದನಕ್ಕೆ ಈಶ್ವರ ಖಂಡ್ರೆ ತಿಳಿಸಿದರು.

# ಮರ ಕಡಿಯದಂತೆ ಎಚ್ಚರ ವಹಿಸಿ ಅಧಿಕಾರಿಗಳಿಗೆ ಖಂಡ್ರೆ ಸೂಚನೆ

ಮಧ್ಯ ಪ್ರಾಚ್ಯದಲ್ಲಿನ ಸಂಘರ್ಷ ಸನ್ನಿವೇಶದಿಂದಾಗಿ ಉಂಟಾಗಿರುವ ಅನಿಲ ಅಭಾವದಿಂದ ಸೌದೆಗೆ ಬೇಡಿಕೆ ಹೆಚ್ಚಾಗಿದ್ದು, ಕಾಡು, ಕಾಡಿನಂಚಿನಲ್ಲಿ ಹಾಗೂ ಸರ್ಕಾರ ಭೂಮಿಯಲ್ಲಿ ಮರಗಳನ್ನು ಅಕ್ರಮವಾಗಿ ಕಡಿಯದಂತೆ ವಹಿಸಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸ್ಪಷ್ಟ ಸೂಚನೆ ನೀಡಿದ್ದಾರೆ. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಿಗೆ ನೀಡಿರುವ ಲಿಖಿತ ಸೂಚನೆಯಲ್ಲಿ ಅವರು, ಅನಿಲ ಅಭಾವದ ಬಿಸಿ ಕರ್ನಾಟಕಕ್ಕೂ ತಟ್ಟಿದ್ದು, ಹೋಟೆಲ್, ರೆಸಾರ್ಟ್, ಹೋಂಸ್ಟೇಗಳಿಗೆ ವಾಣಿಜ್ಯ ಸಿಲಿಂಡರ್ ದೊರಕದೆ ಸಮಸ್ಯೆ ಆಗಿದ್ದರೆ, ಗೃಹ ಬಳಕೆ ಅಡುಗೆ ಅನಿಲ ಪೂರೈಕೆಯಲ್ಲೂ ವ್ಯತ್ಯಯ ಆಗಿರುವ ಹಿನ್ನೆಲೆಯಲ್ಲಿ ಸೌದೆಗಾಗಿ ಅಕ್ರಮ ಮರ ಕಡಿತಲೆ ಆಗದಂತೆ ಗಸ್ತು, ನಿಗಾ ಹೆಚ್ಚಿಸಲು ಆದೇಶಿಸಿದ್ದಾರೆ. ಅರಣ್ಯ ಇಲಾಖೆಯ ಎಲ್ಲ ವೃತ್ತದ, ಎಲ್ಲ ವಲಯಗಳಲ್ಲೂ ಸೂಕ್ತ ಗಸ್ತು ಮತ್ತು ಮುಂಜಾಗರೂಕತೆ ಕ್ರಮ ಕೈಗೊಳ್ಳಲು ಸೂಚಿಸಿರುವ ಅವರು ಒಂದೊಮ್ಮೆ ಅರಣ್ಯ, ಸರ್ಕಾರಿ ಜಮೀನಿನಲ್ಲಿ ಅಕ್ರಮ ಮರ ಕಡಿತಲೆ ಆದರೆ ಸಂಬಂಧಿತ ವಲಯದ ಅಧಿಕಾರಿ, ಸಿಬ್ಬಂದಿಯನ್ನೇ ಹೊಣೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

# ಕುಮಾರಪರ್ವತ ಚಾರಣಕ್ಕೆ ಆನ್‌ಲೈನ್ ಟಿಕೆಟ್ ಕಡ್ಡಾಯ- ಚಾರಣಿಗರ ಸುರಕ್ಷತೆಗಾಗಿ ಸಮಯ ಕಡಿತ

ಕುಕ್ಕೆ ಸುಬ್ರಹ್ಮಣ್ಯ ಬಳಿಯ ಕುಮಾರ ಪರ್ವತ ಚಾರಣಕ್ಕೆ ಆಗಮಿಸುವವರು ಕಡ್ಡಾಯವಾಗಿ ಆನ್‌ಲೈನ್ ಮೂಲಕವೇ ಟಿಕೆಟ್ ಖರೀದಿಸಬೇಕಾಗುತ್ತದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಖಂಡ್ರೆ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಸದಸ್ಯೆ ಭಾಗೀರಥಿ ಮುರುಳ್ಯ ಅವರ ಪ್ರಶ್ನೆಗೆ ಉತ್ತರಿಸಿದ ಅವರು, ಒಂದೇ ದಿನ 2–3 ಸಾವಿರ ಜನರು ಒಂದೇಕಡೆ ಸೇರಿದರೆ ಅನಾಹುತ ಆಗುತ್ತದೆ. ಹೀಗಾಗಿ ನಿಯಂತ್ರಣ ಕ್ರಮ ಕೈಗೊಂಡು ಪ್ರತಿನಿತ್ಯ 150 ಜನರಿಗೆ ಮಾತ್ರ ಚಾರಣಕ್ಕೆ ಅವಕಾಶ ನೀಡಲಾಗುತ್ತಿದೆ. ಮಳೆಗಾಲದಲ್ಲಿ ಜಾರುವ ಕಾರಣ, ಬೇಸಿಗೆಯಲ್ಲಿ ಕಾಡ್ಗಿಚ್ಚಿನ ಭೀತಿ ಎದುರಾಗುವ ಕಾರಣ ಚಾರಣ ಇರುವುದಿಲ್ಲ ಎಂದು ವಿವರಿಸಿದರು. ಸುಬ್ರಹ್ಮಣ್ಯದಿಂದ ಕುಮಾರಪರ್ವತಕ್ಕೆ 24 ಕಿ.ಮೀ ಚಾರಣ ಪಥವಿದ್ದು, ಹೋಗಿ, ಮರಳಿ ಬರಲು 2 ದಿನ ಆಗುತ್ತಿತ್ತು, ರಾತ್ರಿ ಅಲ್ಲೇ ಉಳಿಯಬೇಕಿತ್ತು. ಅಲ್ಲಿ ವನ್ಯಜೀವಿಗಳ ಸಂಚಾರವೂ ಇರುವ ಕಾರಣ ಚಾರಣಿಗರ ಸುರಕ್ಷತೆಯ ದೃಷ್ಟಿಯಿಂದ 2024ರ ಜೂನ್ 5ರಂದು ಕೊಡಗು ವೃತ್ತದ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಮಾನವ–ವನ್ಯಜೀವಿ ಸಂಘರ್ಷ ಉಪಶಮನ ನಿಧಿ ಸಭೆಯಲ್ಲಿ ರಾತ್ರಿ ತಂಗಲು ನಿರ್ಬಂಧ ವಿಧಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು. ಸುಬ್ರಹ್ಮಣ್ಯ ಮಾರ್ಗವಾಗಿ ಇರುವ ಶೇಷ ಪರ್ವತವು ಕುಮಾರಪರ್ವತದಿಂದ 2 ಕಿ.ಮೀ. ಅಂತರದಲ್ಲಿದ್ದು, ಇದು ಅತ್ಯಂತ ದುರ್ಗಮವಾಗಿರುವ ಕಾರಣ 2025ರ ಡಿಸೆಂಬರ್‌ನಿಂದ ಅದೇ ಚಾರಣ ಮಾರ್ಗದಲ್ಲಿ ಶೇಷಪರ್ವತಕ್ಕೆ 20 ಕಿ.ಮೀ.ಗೆ ಸೀಮಿತಗೊಳಿಸಿ 12 ಗಂಟೆಗಳ ಒಳಗಾಗಿ ಅಂದರೆ ಬೆಳಗ್ಗೆ 6ಕ್ಕೆ ಚಾರಣ ಆರಂಭಿಸಿ, ಸಂಜೆ 6ರೊಳಗೆ ಮರಳಿ ಬರುವಂತೆ ವ್ಯವಸ್ಥೆ ಮಾಡಲಾಗಿದೆ ಎಂದು ತಿಳಿಸಿದರು. ಚಾರಣ ಆರಂಭದ ಸಮಯವನ್ನು ಬೆಳಗ್ಗೆ 6ಗಂಟೆಗೆ ಬದಲಾಗಿ 5.30ಕ್ಕೆ ಆರಂಭಿಸಬೇಕೆಂಬ ಸದಸ್ಯರ ಸಲಹೆಯ ಬಗ್ಗೆ ಪರಿಶೀಲಿಸುವುದಾಗಿ ಈಶ್ವರ ಖಂಡ್ರೆ ತಿಳಿಸಿದರು.

## ಹಾವು ಕಡಿತದಿಂದ ಮೃತಪಟ್ಟವರಿಗೆ ಅರಣ್ಯ ಇಲಾಖೆಯಿಂದಲೂ ಪರಿಹಾರ: ಸಿಎಂ ಜತೆ ಚರ್ಚಿಸಿ ತೀರ್ಮಾನ

ಹಾವು ಕಡಿತದಿಂದ ಮೃತಪಟ್ಟವರಿಗೆ ಅರಣ್ಯ ಇಲಾಖೆಯಿಂದಲೂ ಪರಿಹಾರ ನೀಡುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳುವುದಾಗಿ ಅರಣ್ಯ ಸಚಿವ ಈಶ್ವರ ಖಂಡ್ರೆ ವಿಧಾನಸಭೆಯಲ್ಲಿಂದು ಹೇಳಿದರು. ಪ್ರಶ್ನೋತ್ತರ ಅವಧಿಯಲ್ಲಿ ಕಾಂಗ್ರೆಸ್‌ನ ಪುಟ್ಟರಂಗಶೆಟ್ಟಿ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ವನ್ಯಜೀವಿ ದಾಳಿಯಿಂದ ಮೃತಪಟ್ಟವರಿಗೆ ಅರಣ್ಯ ಇಲಾಖೆಯಿಂದ 20 ಲಕ್ಷ ರೂ. ಪರಿಹಾರ ನೀಡಲಾಗುತ್ತಿದೆ. ಹಾವು ಕಡಿತದಿಂದ ಮೃತಪಟ್ಟರೆ ಕಂದಾಯ ಇಲಾಖೆಯಿಂದ 2 ಲಕ್ಷ ರೂ. ಪರಿಹಾರ ನೀಡಲಾಗುತ್ತಿದೆ ಎಂದರು. ಹಾವು ಕಡಿತದಿಂದ ಮೃತಪಟ್ಟರೆ ಆರ್‌ಟಿಸಿ ಇದ್ದರೆ ಮಾತ್ರ ಪರಿಹಾರ ನೀಡಲಾಗುತ್ತಿದೆ. ಕುರಿಗಾಹಿಗಳು ಆರ್‌ಟಿಸಿ ಇಲ್ಲದವರಿಗೆ ಪರಿಹಾರ ಸಿಗುತ್ತಿಲ್ಲ. ಅರಣ್ಯ ಇಲಾಖೆಯಿಂದ ಹಾವು ಕಡಿತಕ್ಕೊಳಗಾಗಿ ಮೃತಪಟ್ಟವರಿಗೆ ಪರಿಹಾರ ನೀಡಬೇಕು ಎಂದು ಸದಸ್ಯರು ತಿಳಿಸಿದ್ದಾರೆ. ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ತೀರ್ಮಾನ ಮಾಡುವುದಾಗಿ ಅವರು ಹೇಳಿದರು.

# ಸರ್ಕಾರದ ವಿವಿಧ ಇಲಾಖೆಗಳಲ್ಲಿ 1.88 ಲಕ್ಷ ಹುದ್ದೆಗಳು ಖಾಲಿ: ಎನ್.ಎಸ್.ಬೋಸರಾಜು

**ಬೆಂಗಳೂರು, ಮಾ.12:** ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಒಂದು ಲಕ್ಷದ 88 ಸಾವಿರದ 37 ಹುದ್ದೆಗಳು ಖಾಲಿ ಇವೆ ಎಂದು ವಿಧಾನ ಪರಿಷತ್ತಿನ ಸಭಾನಾಯಕರೂ ಆಗಿರುವ ಸಚಿವ ಎನ್.ಎಸ್. ಬೋಸರಾಜು ತಿಳಿಸಿದರು. ಬಿಜೆಪಿಯ ಸದಸ್ಯ ಶಶಿಲ್ ನಮೋಶಿ ಅವರ ಪ್ರಶ್ನೆಗೆ ಮುಖ್ಯಮಂತ್ರಿ ಅವರ ಪರವಾಗಿ ಉತ್ತರಿಸಿದ ಅವರು, ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಿಗೆ 7 ಲಕ್ಷದ 76 ಸಾವಿರದ 414 ಹುದ್ದೆಗಳು ಮಂಜೂರಾಗಿದೆ. 4 ಲಕ್ಷದ 91 ಸಾವಿರದ 533 ಮಂದಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಗ್ರೂಪ್ ಸಿ – ಗ್ರೂಪ್ ಡಿ ವೃಂದದ ಹುದ್ದೆಗಳ ದತ್ತಾಂಶ ನಮೂದು ಸಹಾಯಕರು ಹಾಗೂ ವಾಹನ ಚಾಲಕರ ಒಟ್ಟು 96 ಸಾವಿರದ 844 ಮಂದಿಯನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲಾಗಿದೆ. ಒಟ್ಟು 5 ಲಕ್ಷದ 88 ಸಾವಿರದ 377 ಮಂದಿ ಕೆಲಸ ನಿರ್ವಹಿಸುತ್ತಿದ್ದಾರೆ ಎಂದು ವಿವರಿಸಿದರು.

ಕಳೆದ ಮೂರು ವರ್ಷಗಳಲ್ಲಿ 8 ಸಾವಿರದ 157 ಹುದ್ದೆಗಳಿಗೆ ನೇಮಕಾತಿ ಪೂರ್ಣಗೊಳಿಸಲಾಗಿದೆ. 3 ಸಾವಿರದ 81 ಹುದ್ದೆಗಳ ನೇಮಕಾತಿ ಪ್ರಗತಿಯಲ್ಲಿದೆ.

56 ಸಾವಿರದ 432 ಹುದ್ದೆಗಳಿಗೆ 30 ದಿನಗಳ ಒಳಗಾಗಿ ನೇಮಕಾತಿ ಆರಂಭಿಸಲು ಎಲ್ಲ ಇಲಾಖೆ ಹಾಗೂ ನೇಮಕಾತಿ ಪ್ರಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ . ಆಯ್ಕೆ ಪ್ರಕ್ರಿಯೆಯಲ್ಲಿ ಎಲ್ಲ ಅಭ್ಯರ್ಥಿಗಳಿಗೂ ಒಂದು ಬಾರಿ ಗೆ 5 ವರ್ಷಗಳ ವಯೋಮಿತಿಯನ್ನು ಸಡಿಲಗೊಳಿಸಿರುವುದಾಗಿ ತಿಳಿಸಿದರು.

# ಅಡುಗೆ ಅನಿಲದ ಬಿಕ್ಕಟ್ಟಿಗೆ ಎಥೆನಾಲ್ ಸ್ಟವ್ ರಾಮಬಾಣ: ಮುರುಗೇಶ್ ನಿರಾಣಿ ಸ್ಪಷ್ಟನೆ



ಜಾಗತಿಕ ಯುದ್ಧದ ಪರಿಣಾಮವಾಗಿ ಎಲ್‌ಪಿಜಿ ಪೂರೈಕೆಯಲ್ಲಿ ಉಂಟಾಗಿರುವ ಅಭಾವವನ್ನು ಸಮರ್ಥವಾಗಿ ಎದುರಿಸಲು, ಸ್ವದೇಶಿ ತಂತ್ರಜ್ಞಾನದ 'ಎಥೆನಾಲ್ ಸ್ಟವ್' ಬಳಕೆಗೆ ಸರ್ಕಾರ ಹೆಚ್ಚಿನ ಒತ್ತು ನೀಡಬೇಕು ಎಂದು ಎಂ.ಆರ್.ಎನ್ ಉದ್ಯಮ ಸಮೂಹದ ಸಂಸ್ಥಾಪಕರು ಹಾಗೂ ರಾಜ್ಯ ಬಿಜೆಪಿಯ ಉಪಾಧ್ಯಕ್ಷ ಡಾ. ಮುರುಗೇಶ್ ಆರ್ ನಿರಾಣಿ ಅವರು ಮಹತ್ವದ ಪ್ರಸ್ತಾವನೆಯನ್ನು ಸರ್ಕಾರದ ಮುಂದಿಟ್ಟಿದ್ದಾರೆ.

ಎಥೆನಾಲ್ ಸ್ಟವ್‌ಗಳು ಹೊಸ ಆವಿಷ್ಕಾರವಲ್ಲ, ಇವುಗಳನ್ನು 2004ರಲ್ಲೇ ಅಭಿವೃದ್ಧಿಪಡಿಸಲಾಗಿದ್ದು, ಸೀಮೆಎಣ್ಣೆ ಒಲೆಗಳ ಮಾದರಿಯಲ್ಲೇ ಅತ್ಯಂತ ಸರಳ ಹಾಗೂ ಜನಸ್ನೇಹಿ ವಿನ್ಯಾಸವನ್ನು ಹೊಂದಿವೆ. ಈಗಾಗಲೇ ದೇಶದ ವಿವಿಧೆಡೆ ಸುಮಾರು 24 ಲಕ್ಷಕ್ಕೂ ಅಧಿಕ ಕುಟುಂಬಗಳು ಈ ತಂತ್ರಜ್ಞಾನವನ್ನು ಯಶಸ್ವಿಯಾಗಿ ಅಳವಡಿಸಿಕೊಂಡಿರುವುದು ಇದರ ವಿಶ್ವಾಸಾರ್ಹತೆಗೆ ಸಾಕ್ಷಿಯಾಗಿದೆ.


ವೆಚ್ಚದ ದೃಷ್ಟಿಯಿಂದ ಎಲ್‌ಪಿಜಿಗೆ ಹೋಲಿಸಿದರೆ ಎಥೆನಾಲ್ ತುಸು ದುಬಾರಿ ಎನಿಸಿದರೂ, ಇದು ಸಂಪೂರ್ಣವಾಗಿ ಪರಿಸರಸ್ನೇಹಿ ಇಂಧನವಾಗಿದೆ. ಯಾವುದೇ ಅನಾಹುತಕ್ಕೆ ಎಡೆಮಾಡಿಕೊಡದ ಈ ಸುರಕ್ಷಿತ ವಿಧಾನವು ಭವಿಷ್ಯದ ಸುಸ್ಥಿರ ಇಂಧನ ಬಳಕೆಗೆ ಅತ್ಯುತ್ತಮ ಮಾರ್ಗವಾಗಿದೆ ಎಂದು ಅವರು ವಿವರಿಸಿದ್ದಾರೆ.

ಎಥೆನಾಲ್ ತಯಾರಿಕೆಗೆ ಕಬ್ಬು, ಮೆಕ್ಕೆಜೋಳ, ಕಳಪೆ ಗುಣಮಟ್ಟದ ಅಕ್ಕಿ, ಹುಲ್ಲು ಹಾಗೂ ಸಿಹಿ ಜೋಳದಂತಹ ಕೃಷಿ ಉತ್ಪನ್ನಗಳು ಮತ್ತು ತ್ಯಾಜ್ಯಗಳನ್ನು ಬಳಸಬಹುದಾಗಿದೆ. ಗೃಹಬಳಕೆಯ ಇಂಧನವಾಗಿ ಎಥೆನಾಲ್ ಮನ್ನಣೆ ಪಡೆದರೆ, ಕೃಷಿ ಉತ್ಪನ್ನಗಳಿಗೆ ಸುಸ್ಥಿರ ಮಾರುಕಟ್ಟೆ ಲಭ್ಯವಾಗಿ ರೈತರ ಆದಾಯ ದುಪ್ಪಟ್ಟಾಗಲಿದೆ. ಇದು ಪ್ರಧಾನಮಂತ್ರಿಯವರ 'ಆತ್ಮನಿರ್ಭರ ಭಾರತ' ಸಂಕಲ್ಪಕ್ಕೆ ನೈಜ ಶಕ್ತಿ ತುಂಬಲಿದೆ.

ದೇಶದಲ್ಲಿ ಪ್ರಸ್ತುತ ಎಥೆನಾಲ್ ಉತ್ಪಾದನೆಯು ಹೇರಳವಾಗಿದೆ. ಈ ಸಂಪನ್ಮೂಲವನ್ನು ಸಮರ್ಪಕವಾಗಿ ವಿನಿಯೋಗಿಸಲು ಸರ್ಕಾರವು ಮೊದಲ ಹಂತದಲ್ಲಿ ಹೋಟೆಲ್, ವಸತಿ ನಿಲಯ ಹಾಗೂ ಲಾಡ್ಜ್‌ಗಳಲ್ಲಿ ಎಥೆನಾಲ್ ಸ್ಟವ್ ಬಳಕೆಯನ್ನು ಕಡ್ಡಾಯಗೊಳಿಸುವ ಮೂಲಕ ಜನಸಾಮಾನ್ಯರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು.

ವಿಶ್ವದ ಅನೇಕ ಮುಂದುವರಿದ ರಾಷ್ಟ್ರಗಳು ಈಗಾಗಲೇ ಈ ಪದ್ಧತಿಯನ್ನು ಅಳವಡಿಸಿಕೊಂಡಿದ್ದು, ಭಾರತದಲ್ಲೂ ಈ ಕ್ರಾಂತಿಕಾರಿ ಚಿಂತನೆ ಶೀಘ್ರವಾಗಿ ಸಾಕಾರಗೊಳ್ಳಬೇಕು ಎಂದು ಡಾ.ಮುರುಗೇಶ್ ನಿರಾಣಿ ಅವರು ಆಶಯ ವ್ಯಕ್ತಪಡಿಸಿದ್ದಾರೆ.

# ಮಂಡ್ಯ ಜಿಲ್ಲೆ ಅನುದಾನದ ಲೆಕ್ಕ, ಜನ ಕೇಳಬೇಕೇ ಹೊರತು ಸಂಸದರಲ್ಲ: ಎಚ್‌ಡಿಕೆಗೆ ಕುಟುಕಿದ ಸಚಿವ ಚಲುವರಾಯಸ್ವಾಮಿ



**ಮಂಡ್ಯ, ಮಾ.12:** ರಾಜ್ಯ ಸರ್ಕಾರ ಮಂಡ್ಯ ಜಿಲ್ಲೆಗೆ ಬಿಡುಗಡೆ ಮಾಡಿರುವ 10 ಸಾವಿರ ಕೋಟಿ ಅನುದಾನದ ಲೆಕ್ಕವನ್ನು ಜಿಲ್ಲೆಯ ಜನ ಕೇಳಬೇಕೇ ಹೊರತು ಸಂಸದರಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಹೇಳಿದ್ದಾರೆ.

ಮದ್ದೂರು ತಾಲ್ಲೂಕಿನ ಸೋಮನಹಳ್ಳಿ ಬಳಿ 220 ಕೆ.ವಿ ಸಬ್ ಸ್ಟೇಷನ್ ನಿರ್ಮಾಣ ಕಾಮಗಾರಿಗೆ ಗುರುವಾರ ಚಾಲನೆ ನೀಡಿದ ನಂತರ ಅವರು ಮಾಧ್ಯಮದವರೊಂದಿಗೆ ಮಾತನಾಡಿ, ಅನುದಾನದ ಅಂಕಿ ಅಂಶಗಳನ್ನು ಇಲಾಖಾವಾರು ನೀಡುವಂತೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಲೆಕ್ಕ ಕೇಳಿದ್ದಾರೆ. ಅವರು ನಮ್ಮ ಜಿಲ್ಲೆಯವರಲ್ಲ, ಈ ಜಿಲ್ಲೆಗೆ ಎಂ.ಪಿ. ಮಾತ್ರ. ಕುಮಾರಸ್ವಾಮಿ ಅವರಿಗೆ ಜಿಲ್ಲೆಯ ಜನ ಜವಾಬ್ದಾರಿ ನೀಡಿದ್ದು ಕೆಲಸ ಮಾಡಬೇಕು ಅಷ್ಟೆ ಎಂದು ಕುಟುಕಿದ್ದಾರೆ. ಸಾಕಷ್ಟು ನಿರೀಕ್ಷೆಗಳನ್ನು ಇಟ್ಟುಕೊಂಡು ಜಿಲ್ಲೆಯ ಜನತೆ ಕುಮಾರಸ್ವಾಮಿ ಅವರಿಗೆ ಆಶೀರ್ವಾದ ಮಾಡಿದ್ದಾರೆ. ಜನರ ನಿರೀಕ್ಷೆ ಹುಸಿಯಾಗದಂತೆ ಕೇಂದ್ರ ಸಚಿವರು ಕೆಲಸ ಮಾಡಲಿ. ಲೆಕ್ಕ ಕೊಡುವ ಸಮಯ ಬರುತ್ತದೆ ಆಗ ಅಂಕಿ ಅಂಶಗಳ ಸಮೇತ ನೀಡಲಾಗುವುದು ಎಂದರು.

ಗ್ಯಾಸ್ ಸಮಸ್ಯೆಗೆ ಮೋದಿಯವರೇ ಹೊಣೆ ಅಲ್ಲ. ಟ್ರಂಪ್ ಯಾರ ಮಾತೂ ಕೇಳಲ್ಲ ಅನ್ನೋದು ಎಲ್ಲರಿಗೂ ಗೊತ್ತಿದೆ. ವಿಶ್ವಗುರು ಎನಿಸಿಕೊಂಡಿರುವ ಮೋದಿ ಅವರು ಇಂಥ ಸಂದರ್ಭದಲ್ಲಿ ಸಿಕ್ಕಿ ಹಾಕಿಕೊಳ್ಳುತ್ತಾರೆ ಅಷ್ಟೆ. ಅವರು ಏಕೆ ಮೌನವಾಗಿದ್ದಾರೆ ಎನ್ನುವ ಪ್ರಶ್ನೆ ಬರುತ್ತದೆ. ವಾಣಿಜ್ಯ ಬಳಕೆ ಸಿಲಿಂಡರ್‌ಗೆ ಸಮಸ್ಯೆ ಆಗಿರುವುದು ನಿಜ ಎಂದರು.

ಹೊಸ ಶಾಸಕರು ಸಚಿವ ಸ್ಥಾನ ಕೇಳಿರುವುದರಲ್ಲಿ ತಪ್ಪೇನಿದೆ. ಜಿಲ್ಲಾವಾರು, ಜಾತಿವಾರು ಎಲ್ಲವನ್ನೂ ನೋಡಿ ಸಚಿವ ಸ್ಥಾನ ನೀಡಬೇಕು. ನಮ್ಮ ಪಕ್ಷ ಮುಕ್ತವಾಗಿದೆ. ಸಿಎಂ ಮತ್ತು ಡಿಸಿಎಂ ಇಬ್ಬರೂ ಈ ಬಗ್ಗೆ ತೀರ್ಮಾನ ತೆಗೆದುಕೊಳ್ಳುತ್ತಾರೆ. ಹಳಬರಿಗೆ ಕೋಕ್ ಕೊಡುವ ಬಗ್ಗೆಯೂ ಪಕ್ಷವೇ ನಿರ್ಧರಿಸುತ್ತದೆ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು.



ಚಿಕ್ಕಬಳ್ಳಾಪುರ ಜಿಲ್ಲೆಯ ಪದವೀಧರ ಮತದಾರರ ನೋಂದಣಿಯ ಜಿಲ್ಲಾ ಉಸ್ತುವಾರಿಯನ್ನಾಗಿ ನೇಮಿಸಿರುವ ರಕ್ಷಾ ರಾಮಯ್ಯ ಅವರನ್ನು ಶಶಿಧರ್ ಹುಲಿಕುಂಟೆ ಮಠ್ ಭೇಟಿ ಮಾಡಿ ಚುನಾವಣೆ ಬಗ್ಗೆ ಸುದೀರ್ಘವಾಗಿ ಚರ್ಚಿಸಿ, ಜಿಲ್ಲೆಯಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ಪದವೀಧರರನ್ನು ನೋಂದಾಯಿಸುವ ಮೂಲಕ ತಮ್ಮ ಗೆಲುವಿಗೆ ಸಹಕರಿಸಬೇಕೆಂದು ತಿಳಿಸಿದರು..

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಆಸ್ಪತ್ರೆಗಳಲ್ಲಿ ಔಷಧ ಕೊರತೆ ಚರ್ಚೆಗೆ ಸ್ಪೀಕರ್ ಅವಕಾಶ

**ಬೆಂಗಳೂರು, ಮಾ.12:** ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಔಷಧಿ ಕೊರತೆ ವಿಚಾರವನ್ನು ವಿಧಾನಸಭೆಯಲ್ಲಿಂದು ಪ್ರಸ್ತಾಪಿಸಿ ಚರ್ಚೆಗೆ ಅವಕಾಶ ನೀಡಬೇಕು ಎಂಬ ಪ್ರತಿಪಕ್ಷಗಳ ಆಗ್ರಹಕ್ಕೆ ಸ್ಪಂದಿಸಿದ ಸಭಾಧ್ಯಕ್ಷ ಯು.ಟಿ. ಖಾದರ್ ಚರ್ಚೆಗೆ ನಾಳೆ ಅವಕಾಶ ಕೊಡುವುದಾಗಿ ಹೇಳಿದರು. ಪ್ರಶ್ನೋತ್ತರ ಅವಧಿ ಪೂರ್ಣಗೊಂಡ ನಂತರ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ನಿಲುವಳಿ ಸೂಚನೆಯಡಿ ವಿಷಯ ಪ್ರಸ್ತಾಪಿಸಿ, ರಾಜ್ಯದಲ್ಲಿ ಔಷಧಿಗಳ ಕೊರತೆ ಇದೆ. ಆರೋಗ್ಯ ಸಚಿವರು ಆರೋಗ್ಯವಾಗಿದ್ದಾರೆ. ಆದರೆ ಆರೋಗ್ಯ ಇಲಾಖೆ ಅನಾರೋಗ್ಯವಾಗಿದೆ ಎಂದು ಹೇಳಿದರು.

ಸರ್ಕಾರಿ ಆಸ್ಪತ್ರೆಗಳಲ್ಲಿ ಬಡವರಿಗೆ ಔಷಧಿಗಳು ಸಿಗುತ್ತಿಲ್ಲ. ವೈದ್ಯರು ಸಹ ಪ್ರತಿಭಟನೆ ನಡೆಸಲು ಮುಂದಾಗಿದ್ದರು. ಅದನ್ನು ಸರ್ಕಾರ ತಾತ್ಕಾಲಿಕವಾಗಿ ನಿಲ್ಲಿಸಿದೆ. ಔಷಧಿಗಳ ಕೊರತೆಯಿಂದ ಜನರು ಸಮಸ್ಯೆಗೆ ಸಿಲುಕಿದ್ದಾರೆ ಎಂದು ಹೇಳಿದರು. ಸರ್ಕಾರಿ ಆಸ್ಪತ್ರೆಗಳ ವೈದ್ಯರ ಸಂಘದವರೇ ಸರ್ಕಾರಕ್ಕೆ ಪತ್ರ ಬರೆದು ಆಸ್ಪತ್ರೆಗಳಲ್ಲಿ ಔಷಧಿ ಕೊರತೆಯಿದೆ. ಇದರಿಂದ ರೋಗಿಗಳು, ವೈದ್ಯರು ಹಾಗೂ ಸಿಬ್ಬಂದಿಗಳ ನಡುವೆ ಸಂಘರ್ಷ ನಡೆಯುತ್ತಿದೆ. ಇದನ್ನು ತಪ್ಪಿಸಿ ಎಂದು ಮನವಿ ಮಾಡಿದ್ದಾರೆ ಎಂದು ಹೇಳಿ, ರಾಜ್ಯದಲ್ಲಿ ತುರ್ತು ಪರಿಸ್ಥಿತಿ ಇದೆ. ಹಾಗಾಗಿ ಈ ವಿಚಾರದ ಬಗ್ಗೆ ನಿಲುವಳಿ ಸೂಚನೆಯಡಿ ಚರ್ಚೆಗೆ ಅವಕಾಶ ಮಾಡಿಕೊಡಿ ಎಂದು ಸಭಾಧ್ಯಕ್ಷರಲ್ಲಿ ಮನವಿ ಮಾಡಿದರು. ಇದಕ್ಕೆ ದನಿಗೂಡಿಸಿ ಬಿಜೆಪಿಯ ಡಾ. ಸಿ.ಎನ್. ಅಶ್ವತ್ಥನಾರಾಯಣ ಅವರು, ಸಮಸ್ಯೆ ಗಂಭೀರವಾಗಿದೆ. ಆರೋಗ್ಯ ವ್ಯವಸ್ಥೆ ಹದಗೆಟ್ಟಿದೆ. ವೈದ್ಯರಿಲ್ಲ, ಔಷಧಿಗಳಿಲ್ಲ, ಆಂಬ್ಯುಲೆನ್ಸ್‌ಗಳಿಲ್ಲ. ಹಾಗಾಗಿ ಈ ಬಗ್ಗೆ ಚರ್ಚೆಗೆ ಅವಕಾಶ ಕೊಡಿ ಎಂದರು.

ಈ ವೇಳೆ ಮಧ್ಯ ಪ್ರವೇಶಿಸಿ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಚರ್ಚೆಗೆ ಸಿದ್ಧರಿದ್ದೇವೆ. ಎಲ್ಲ ಮಾಹಿತಿಗಳನ್ನು ಕೊಡುತ್ತೇವೆ ಎಂದು ಹೇಳಿದಾಗ ಸಭಾಧ್ಯಕ್ಷರು, ನಿಲುವಳಿ ಸೂಚನೆಯಡಿ ಈ ವಿಚಾರದ ಚರ್ಚೆಗೆ ಅವಕಾಶ ಇಲ್ಲ. ನಿಯಮ 69ರ ಅಡಿಯಲ್ಲಿ ನಾಳೆ ಚರ್ಚೆಗೆ ಅವಕಾಶ ಕಲ್ಪಿಸುವುದಾಗಿ ತಿಳಿಸಿ, ಮುಂದಿನ ಕಲಾಪವನ್ನು ಕೈಗೆತ್ತಿಕೊಂಡರು.



ನವದೆಹಲಿಯಲ್ಲಿ ಗುರುವಾರ ನಡೆದ ಇಂದಿರಾ ಗಾಂಧಿ ದೆಹಲಿ ಮಹಿಳಾ ತಾಂತ್ರಿಕ ವಿಶ್ವವಿದ್ಯಾಲಯದ 8ನೇ ಘಟಿಕೋತ್ಸವ ಸಮಾರಂಭದ ಉದ್ಘಾಟನೆಯಲ್ಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ದೆಹಲಿ ಶಿಕ್ಷಣ ಸಚಿವ ಆಶಿಶ್ ಸೂದ್ ಮತ್ತು ಉಪಕುಲಪತಿ ಪ್ರೊ. ರಂಜನಾ ಝಾ ಅವರು ಪಾಲ್ಗೊಂಡಿದ್ದರು.

# ಜಿಬಿಎ ವ್ಯಾಪ್ತಿಯಲ್ಲಿ ಹಳೆಯದರ ಜತೆಗೆ 441 ಹೊಸ ಶೌಚಾಲಯ ನಿರ್ಮಾಣ: ಡಿ.ಕೆ.ಶಿವಕುಮಾರ್



**ಬೆಂಗಳೂರು, ಮಾ.12:** ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ 388 ಹಳೆಯ ಶೌಚಾಲಯಗಳ ಜತೆಗೆ ಹೊಸದಾಗಿ 441 ಶೌಚಾಲಯಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯೆ ಆರತಿ ಕೃಷ್ಣ ಅವರು ಜಿಬಿಎ ವ್ಯಾಪ್ತಿಯ ಸಾರ್ವಜನಿಕ ಶೌಚಾಲಯಗಳು ಬಳಕೆಗೆ ಯೋಗ್ಯವಿಲ್ಲ, ಜನಸ್ನೇಹಿಯಾಗಿಲ್ಲ, ಎಐ ಬಳಸಿ ಸ್ವಚ್ಛತೆ ಪರಿಶೀಲನೆ ಮಾಡಬೇಕು ಎಂದು ಕೇಳಿದಾಗ ಶಿವಕುಮಾರ್ ಅವರು ಗುರುವಾರ ಉತ್ತರಿಸಿದರು.

ನಗರದಾದ್ಯಂತ 380 ಸಾರ್ವಜನಿಕ ಶೌಚಾಲಯಗಳಿವೆ. 65 ಶೌಚಾಲಯಗಳನ್ನು ನಿವೃತ್ತ ಪೌರಕಾರ್ಮಿಕರಿಗೆ ನಡೆಸಲು ನೀಡಿದ್ದೇವೆ. 20 ಶೌಚಾಲಯಗಳನ್ನು ವಿಶೇಷ ಚೇತನರು ನಡೆಸುತ್ತಿದ್ದಾರೆ. ಶುಭ್ರ ಬೆಂಗಳೂರು ಯೋಜನೆ ಅಡಿ 60 ಶೌಚಾಲಯಗಳನ್ನು ನಿರ್ಮಾಣ ಮಾಡಲಾಗುವುದು. 191 ಶೌಚಾಲಯಗಳು ಹೊಸದಾಗಿ ನಿರ್ಮಾಣವಾಗುತ್ತಿವೆ. ಸ್ವಚ್ಛ ಭಾರತ ಮಿಷನ್ ಅಡಿ ಕೇಂದ್ರ ಸರ್ಕಾರ 13.5 ಕೋಟಿ ಹಣ ನೀಡಿದ್ದಾರೆ. ಅದರಲ್ಲಿ 90 ಶೌಚಾಲಯ ನಿರ್ಮಿಸುತ್ತಿದ್ದು, ಬ್ರಾಂಡ್ ಬೆಂಗಳೂರು ಯೋಜನೆಯಡಿ 100 ಶೌಚಾಲಯ ನಿರ್ಮಾಣ ಮಾಡಲಾಗುತ್ತಿದೆ. ಇದು ಮಹಿಳೆಯರಿಗಾಗಿ ನಿರ್ಮಾಣ ಮಾಡಲಾಗುತ್ತಿದೆ. 441 ಹೊಸ ಶೌಚಾಲಯಗಳು ಹಾಗೂ 388 ಹಳೆಯ ಶೌಚಾಲಯಗಳಿವೆ. ಇವುಗಳ ಜತೆಗೆ ಯಾವುದಾದರೂ ನಿರ್ದಿಷ್ಟ ಸ್ಥಳಗಳಲ್ಲಿ ಶೌಚಾಲಯಗಳ ಅಗತ್ಯತೆ ಬಗ್ಗೆ ನಮ್ಮ ಗಮನಕ್ಕೆ ತಂದರೆ ಅಲ್ಲೂ ಜಾಗ ಲಭ್ಯತೆ ನೋಡಿಕೊಂಡು, ಶೌಚಾಲಯ ನಿರ್ಮಾಣ ಮಾಡಲಾಗುವುದು ಎಂದು ತಿಳಿಸಿದರು.

# ಮೇ ವೇಳೆಗೆ ಟಿಬಿ ಡ್ಯಾಂನ ಎಲ್ಲ ಗೇಟ್‌ಗಳ ಬದಲಾವಣೆ: ಡಿಕೆಶಿ

**ಬೆಂಗಳೂರು, ಮಾ.12:** ತುಂಗಭದ್ರಾ ಅಣೆಕಟ್ಟೆನ ಎಲ್ಲಾ ಕ್ರಸ್ಟ್ ಗೇಟ್‌ಗಳ ಬದಲಾವಣೆ ಕಾರ್ಯವನ್ನು ಸರ್ಕಾರ ಆದ್ಯತೆ ಮೇರೆಗೆ ಕೈಗೆತ್ತಿಕೊಂಡಿದ್ದು, ಬರುವ ಮೇ ವೇಳೆಗೆ ಪೂರ್ಣಗೊಳಿಸಲಾಗುವುದು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ವಿಧಾನಪರಿಷತ್ತಿಗೆ ಭರವಸೆ ನೀಡಿದರು.

ಶೂನ್ಯ ವೇಳೆಯಲ್ಲಿ ಜೆಡಿಎಸ್‌ನ ಟಿ.ಎ. ಶರವಣ ಅವರ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ಮಾನ್ಯ ಶರವಣ ಅವರು ಬಹಳ ಬುದ್ಧಿವಂತರು ಎಂದು ಭಾವಿಸಿದ್ದೆ. ಅವರು ತುಂಗಭದ್ರಾ ಗೇಟ್ ಅಳವಡಿಕೆ ವಿಚಾರವನ್ನು ಪ್ರಸ್ತಾಪಿಸಿ, ಬೆಂಗಳೂರಿನಲ್ಲಿ ಮನೆ ಹಂಚಿಕೆ, ಕೇರಳದಲ್ಲಿ ಮನೆ ನಿರ್ಮಾಣ ಸೇರಿದಂತೆ ಅನೇಕ ಬೇರೆ ಬೇರೆ ವಿಚಾರಗಳನ್ನು ಎಳೆದು ತಂದಿದ್ದಾರೆ. ಟಿಬಿ ಅಣೆಕಟ್ಟಿನ ಗೇಟ್ ಅಳವಡಿಕೆ ವಿಚಾರ ಬಹಳ ಗಂಭೀರವಾದದು. ಶರವಣ ಹಾಗೂ ಇತರ ಸದಸ್ಯರನ್ನು ತುಂಗಭದ್ರಾ ಅಣೆಕಟ್ಟೆಗೆ ಕಳುಹಿಸಿ ಕೊಡುತ್ತೇನೆ, ಹೋಗಿ ನೋಡಲಿ ಎಂದರು.

ಅಲ್ಲಿ ಕ್ರಸ್ಟ್ ಗೇಟ್ ತುಂಡರಿಸಿದಾಗ, ಅಣೆಕಟ್ಟು ಸಂಪೂರ್ಣ ಅಲ್ಲಾಡಿದಂತೆ ಭಾಸವಾಗಿತ್ತು. ಕೇವಲ 7 ದಿನಗಳಲ್ಲಿ ದುರಸ್ತಿ ಮಾಡಿದೆವು. ಆಗ ಜನಾರ್ದನ ರೆಡ್ಡಿ ಏನು ಹೇಳಿಕೆ ಕೊಟ್ಟಿದ್ದರು ಎಂಬುದು ಗೊತ್ತಿದೆ. ಆಗ ನಾನು ಟೀಕೆಗಳು ಸಾಯುತ್ತವೆ, ಕೆಲಸಗಳು ಉಳಿಯುತ್ತವೆ ಎಂದು ಹೇಳಿದ್ದೆ. ನಂತರ ನಾವು ರಾಜ್ಯದ ಎಲ್ಲಾ ಅಣೆಕಟ್ಟುಗಳ ಅಧ್ಯಯನ ನಡೆಸಿ ಹಳೇ ಗೇಟ್‌ಗಳ ಬದಲಾವಣೆಗೆ ತೀರ್ಮಾನ ಮಾಡಿದೆವು. ಮೊದಲ ಹಂತದಲ್ಲಿ ಟಿಬಿ ಡ್ಯಾಂ ಗೇಟ್ ಬದಲಿಸುತ್ತಿದ್ದೇವೆ. ಪತ್ರಿಕೆಯಲ್ಲಿ ಮಾರ್ಚ್ 10ರ ವರೆಗೆ 14 ಗೇಟ್ ಬದಲಿಸಲಾಗಿದ್ದು, ತಜ್ಞರ ಪ್ರಕಾರ ಒಂದು ಕ್ರಸ್ಟ್ ಗೇಟ್ ಅಳವಡಿಕೆಗೆ 7 ದಿನಗಳ ಕಾಲಾವಕಾಶ ಬೇಕು. ಹಲವು ಗೇಟ್ ಗಳ ಅಳವಡಿಕೆ ಕಾರ್ಯ ನಡೆದರೆ ಈ ಪ್ರಕ್ರಿಯೆ ನಿಗದಿತ ಸಮಯದಲ್ಲಿ ಪೂರ್ಣಗೊಳ್ಳಲಿದೆ ಎಂದು ತಿಳಿಸಿದರು.

ಅಧ್ಯಕ್ಷರೇ ನಾವು ಎಲ್ಲಾ ಗೇಟ್ ಬದಲಿಸುವ ತೀರ್ಮಾನ ಮಾಡಿದ್ದು, 19ನೇ ಸ್ಟಾಪ್‌ಲಾಗ್ ಗೇಟ್ ತೆರವುಗೊಳಿಸಿ ಸ್ಟೀಲ್ ಗೇಟ್ ಅಳವಡಿಕೆಗೆ 2025 ಏಪ್ರಿಲ್ 24ರಂದು ಅಹಮದಾಬಾದಿನ ಹಾರ್ಡ್‌ವೇರ್ ಟೂಲ್ ಅಂಡ್ ಮಷಿನರಿ ಪ್ರಾಜೆಕ್ಟ್ ಸಂಸ್ಥೆ ಜತೆ ಒಪ್ಪಂದ ಮಾಡಿಕೊಳ್ಳಲಾಗಿದೆ. 34.48 ಕೋಟಿ ರೂ. ವೆಚ್ಚದಲ್ಲಿ ಉಳಿದ 32 ಸ್ಪಿಲ್ ವೇ ಗೇಟ್ ಅಳವಡಿಕೆಯನ್ನು 15 ತಿಂಗಳ ಕಾಲಾವಧಿಯಲ್ಲಿ ಪೂರ್ಣಗೊಳಸಲು ಇದೇ ಸಂಸ್ಥೆಯೊಂದಿಗೆ ಜೂನ್ 10, 2025ರಲ್ಲಿ ಒಪ್ಪಂದ ಮಾಡಿಕೊಂಡಿದ್ದೇವೆ. 25 ಗೇಟ್‌ಗಳ ಫ್ಯಾಬ್ರಿಕೇಶನ್ ಕೆಲಸ ಮುಗಿದಿದ್ದು, 2 ಗೇಟ್‌ಗಳ ಕೆಲಸ ನಡೆಯುತ್ತಿದೆ. 26 ಗೇಟ್‌ಗಳನ್ನು ತೆಗೆಯಲಾಗಿದ್ದು, 2 ಗೇಟ್ ಗಳ ತೆರವು ಕಾರ್ಯ ನಡೆಯುತ್ತಿದೆ. ಇದರಲ್ಲಿ 14 ಗೇಟ್‌ಗಳ ಅಳವಡಿಕೆ ಕಾರ್ಯ ಪೂರ್ಣಗೊಂಡಿದ್ದು, 3 ಗೇಟ್‌ಗಳ ಕಾರ್ಯ ಪ್ರಕ್ರಿಯೆಯಲ್ಲಿದೆ. ಮೇ ತಿಂಗಳ ಒಳಗಾಗಿ ಎಲ್ಲಾ ಗೇಟ್ ಬದಲಾವಣೆ ಮುಗಿಸಲು ವ್ಯವಸ್ಥೆ ಮಾಡಲಾಗಿದೆ ಎಂದು ಡಿಕೆಶಿ ವಿವರಿಸಿದರು.

**ನವಲಿ: ಆಂಧ್ರ ಚರ್ಚೆಗೆ ಬರುತ್ತಿಲ್ಲ**

ನವಲಿ ಸಮತೋಲಿತ ಜಲಾಶಯ ನಿರ್ಮಾಣ ವಿಚಾರದಲ್ಲಿ ಆಂಧ್ರಪ್ರದೇಶದವರು ಮಾತುಕತೆಗೆ ಬರುತ್ತಿಲ್ಲ. ಕೆಲವರು ಪರ್ಯಾಯ ಮಾರ್ಗಗಳ ಸಲಹೆ ನೀಡಿದ್ದು, ಆಂಧ್ರ ಸಿಎಂ ಈ ವಿಚಾರವಾಗಿ ಚರ್ಚೆ ಮಾಡಲು ಸಮಯ ನೀಡುತ್ತಿಲ್ಲ. ಈ ಅಣೆಕಟ್ಟು ನಮ್ಮ ಆಸ್ತಿ. ಈ ವಿಚಾರದಲ್ಲಿ ಕೇವಲ ಕರ್ನಾಟಕ ಏಕಾಂಗಿಯಾಗಿ ನಿರ್ಧಾರ ಮಾಡಲು ಸಾಧ್ಯವಿಲ್ಲ. ಮೂರು ರಾಜ್ಯದವರು ಸೇರಿ ತೀರ್ಮಾನ ಮಾಡಬೇಕು. ನೀರು ಹರಿದು ಸಮುದ್ರಕ್ಕೆ ಹೋಗುತ್ತಿದೆ. ಇದನ್ನು ಉಳಿಸಿ ಜನರಿಗೆ ನೀಡಲು ನಿಮ್ಮೆಲ್ಲರ ರಾಜಕೀಯ ಬದ್ಧತೆ, ಶಕ್ತಿ ನೀಡಿದರೆ ವ್ಯವಸ್ಥೆ ಮಾಡಬಹುದು ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

# ಸಾಲ ಮಾಡುವುದರಲ್ಲಿ ಸಾಧನೆ ಅಭಿವೃದ್ಧಿಯಲ್ಲಿ ಆಗಿಲ್ಲ ಬಿ.ವೈ.ವಿಜಯೇಂದ್ರ ಟೀಕೆ



**ಬೆಂಗಳೂರು, ಮಾ.12:** ಈ ಸರಕಾರದ ಬೆಳವಣಿಗೆ, ಸಾಲ ಮಾಡುವುದರಲ್ಲಿ ಸಾಧನೆ ಆಗಿದೆಯೇ ವಿನಾ ರಾಜ್ಯದ ಸರ್ವತೋಮುಖ ಅಭಿವೃದ್ಧಿ ವಿಚಾರದಲ್ಲಿ ಏನೂ ಕೂಡ ಬೆಳವಣಿಗೆ ಆಗಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ. ವೈ.ವಿಜಯೇಂದ್ರ ವಿಧಾನಸಭೆಯಲ್ಲಿಂದು ಟೀಕಿಸಿದರು.

ರಾಜ್ಯ ಬಜೆಟ್ ಮೇಲಿನ ಚರ್ಚೆಯಲ್ಲಿ ಮಾತನಾಡಿದ ಅವರು, ಸಂಬಂಧ ಮಾತನಾಡಿದ ಅವರು, ಜಲ ಸಂಪನ್ಮೂಲ ಇಲಾಖೆಯಲ್ಲಿ 2025–26ರಲ್ಲಿ 22,190 ಕೋಟಿ ಮೀಸಲಿಟ್ಟಿದ್ದರು. 2026–27ರಲ್ಲಿ 22,430 ಕೋಟಿ ರೂ. ಕೊಟ್ಟಿದ್ದಾರೆ. ಇದು ಹೆಸರಿಗೆ ಅಷ್ಟೇ ಎಂದು ತಿಳಿಸಿದರು. ಇದರಲ್ಲಿ 8500 ಕೋಟಿ ಸಂಬಳಕ್ಕೇ ಹೋದರೆ, ಬಡ್ಡಿ ಪಾವತಿಗೆ 4400 ಕೋಟಿ ಹೋಗುತ್ತದೆ. 9290 ಕೋಟಿಯಷ್ಟೇ ಕಾಮಗಾರಿಗೆ ಬಂಡವಾಳ ಹೂಡಿಕೆಯಾಗಿ ಉಳಿಯುತ್ತದೆ ಎಂದು ಗಮನಕ್ಕೆ ತಂದರು.

ಬಿಜೆಪಿ ಸರಕಾರ ಆರಂಭಿಸಿ ಶೇ.70– ಶೇ.80ರಷ್ಟು ಮುಕ್ತಾಯವಾದ ಕಾಮಗಾರಿಗಳನ್ನು ಪೂರೈಸಲು ಸುಮಾರು 90 ಸಾವಿರ ಕೋಟಿ ರೂ. ಬೇಕು. 90 ಸಾವಿರ ಕೋಟಿ ರೂ. ಬಿಡುಗಡೆಗೆ ವಿಳಂಬವಾದರೆ ಅದು 1 ಲಕ್ಷದ 25 ಸಾವಿರ ಕೋಟಿಗೆ ತಲುಪೀತು. ಆದರೆ, ಇವರ ಬಂಡವಾಳ ಮೀಸಲು ಕೇವಲ 9,290 ಕೋಟಿಯಷ್ಟೇ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

2022–23ರಲ್ಲಿ ರಾಜಸ್ವ ವೆಚ್ಚವು 2,15,584 ಕೋಟಿ ಇತ್ತು. 2026–27ರಲ್ಲಿ 3,38,007 ಕೋಟಿ ಇದೆ. ರಾಜ್ಯ ಸರಕಾರ ಮಾಡುವ ಸಾಲವನ್ನು ಅಭಿವೃದ್ಧಿಯ ದೃಷ್ಟಿಯಿಂದ ಸಮಂಜಸವಾಗಿ ಬಳಸಿಕೊಳ್ಳದೇ ಖರ್ಚು ಮಾಡುತ್ತಿದ್ದಾರೆ. ಶಾಸಕರು ಸುಮಾರು 139 ಜನರು ಆಡಳಿತ ಪಕ್ಷದಲ್ಲಿದ್ದರೂ ಇರುವ ಎಲ್ಲರೂ ಕ್ಯಾಬಿನೆಟ್ ರ್‍ಯಾಂಕಿನವರೇ ಎಂದು ತಿಳಿಸಿದರು. ಅದೂ ಸಾಲದೆಂಬಂತೆ ರಾಜ್ಯದ ಗ್ಯಾರಂಟಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಗ್ಯಾರಂಟಿ ಅಧ್ಯಕ್ಷರು, ಜಿಲ್ಲಾ ಮಟ್ಟದ ಅವರಿಗೆ ಕ್ಯಾಬಿನೆಟ್ ದರ್ಜೆ ನೀಡಿದ್ದಾರೆ. ಅವರಿಗೆ ಕಚೇರಿ, ಸಂಬಳ, ಪಿ.ಎ– ಒಟ್ಟಾರೆಯಾಗಿ 144 ಜನರಿಗೆ ಕ್ಯಾಬಿನೆಟ್ ದರ್ಜೆ ಕೊಟ್ಟಿದ್ದಾರೆ. ಪ್ರತಿ ತಿಂಗಳು 3 ರಿಂದ 3.5 ಲಕ್ಷ ಖರ್ಚು ಮಾಡುತ್ತಾರೆ ಎಂದು ತಿಳಿಸಿದರು.

# ತಂತ್ರಜ್ಞಾನದಲ್ಲಿ ನಕಾರಾತ್ಮಕ ಬದಲಾವಣೆ: ಹಣಕಾಸು ವ್ಯವಹಾರ ಕಷ್ಟ

## ಡಿಜಿಟಲ್ ಅರೆಸ್ಟ್: ಪ್ರತಿಷ್ಠಿತ ಸಂಸ್ಥೆಯ ಸಿಇಓ ಮಟ್ಟದ ವ್ಯಕ್ತಿಯಿಂದ 32 ಕೋಟಿ ಸುಲಿಗೆ: ಪರಮೇಶ್ವರ್



**ಬೆಂಗಳೂರು, ಮಾ.12:** ಪ್ರತಿಷ್ಠಿತ ಕಂಪನಿಯ ಸಿಇಒ ಹುದ್ದೆಗೆ ಸಮಾನವಾದ ಹಾಗೂ ತಾಂತ್ರಿಕವಾಗಿ ಪರಿಣಿತರಾಗಿದ್ದ ವ್ಯಕ್ತಿಯೊಬ್ಬರು ಡಿಜಿಟಲ್ ಅರೆಸ್ಟ್ ಜಾಲದಲ್ಲಿ ಸಿಲುಕಿ 32 ಕೋಟಿ ರೂ. ಕಳೆದುಕೊಂಡಿದ್ದಾರೆ ಎಂಬ ಆತಂಕಕಾರಿ ಸಂಗತಿಯನ್ನು ಡಾ.ಜಿ.ಪರಮೇಶ್ವರ್ ಅವರು ವಿಧಾನಪರಿಷತ್‌ಗೆ ತಿಳಿಸಿದರು. ಜೆಡಿಎಸ್ ಶಾಸಕ ಗೋವಿಂದಾಜು ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಡಿಜಿಟಲ್ ಅರೆಸ್ಟ್ ಹಾಗೂ ಸೈಬರ್ ಅಪರಾಧಗಳಿಂದ ದೊಡ್ಡ ಮಟ್ಟದಲ್ಲಿ ವಂಚನೆಯಾಗುತ್ತದೆ ಎಂಬ ಆತಂಕವನ್ನು ಅವರು ವ್ಯಕ್ತಪಡಿಸಿದರು. ಸೈಬರ್ ಅಪರಾಧವನ್ನು ತಡೆಯಲು ನಮ ರಾಜ್ಯದಲ್ಲಿ ಆಗಿರುವಷ್ಟು ಕೆಲಸ ಬೇರೆ ರಾಜ್ಯಗಳಲ್ಲಿ ಆಗಿಲ್ಲ. ಸೈಬರ್ ಅಪರಾಧವನ್ನು ತಡೆಯಲು 33 ಠಾಣೆಗಳನ್ನು ಪ್ರಾರಂಭಿಸಲಾಗಿದೆ. ಕಾನ್ಸ್‌ಟೇಬಲ್‌ನಿಂದ ಇನ್ಸ್‌ಪೆಕ್ಟರ್‌ವರೆಗೂ ತರಬೇತಿ ನೀಡಿ ಆ ಠಾಣೆಗಳಿಗೆ ನಿಯೋಜಿಸಲಾಗುತ್ತಿದೆ ಎಂದು ಹೇಳಿದರು.

ಬೆಂಗಳೂರಿನಲ್ಲಿ ಕುಳಿತ ವ್ಯಕ್ತಿಯೊಬ್ಬರು ಅಮೆರಿಕಾದಲ್ಲಿ ವಂಚನೆ ಮಾಡಿದ್ದಾರೆ. ಈ ರೀತಿಯ ವಂಚನೆಗೆ ಯಾವುದೇ ಗಡಿಯ ಮಿತಿ ಇಲ್ಲ. ತಂತ್ರಜ್ಞಾನದಲ್ಲಿ ದೊಡ್ಡ ಮಟ್ಟದಲ್ಲಿ ನೆಗೆಟಿವ್ ಬದಲಾವಣೆಯಾಗುತ್ತಿದ್ದು, ಯಾವುದೇ ರೀತಿಯ ಹಣಕಾಸಿನ ವ್ಯವಹಾರ ಮಾಡುವುದು ಕಷ್ಟಕರ ಪರಿಸ್ಥಿತಿ ಎದುರಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

**42 ಸಾವಿರ ಖಾತೆ ಜಪ್ತಿ, 500 ಜನರ ಬಂಧನ**

ಸೈಬರ್ ಅಪರಾಧಕ್ಕೆ ಸಂಬಂಧಿಸಿದಂತೆ 42 ಸಾವಿರ ಖಾತೆಗಳನ್ನು ಮುಟ್ಟುಗೋಲು ಹಾಕಲಾಗಿದೆ. 500 ಜನರನ್ನು ಬಂಧಿಲಾಗಿದೆ. ಬ್ಯಾಂಕ್‌ನಲ್ಲಿರುವ ನಮದೇ ಹಣ ಸುರಕ್ಷಿತವಾಗಿದೆಯೋ ಇಲ್ಲವೋ ಎಂಬ ಆತಂಕ ಕಾಡುವಂತಾಗಿದೆ. ಪ್ರಸಕ್ತ ವರ್ಷ 345 ಡಿಜಿಟಲ್ ಅರೆಸ್ಟ್ ಪ್ರಕರಣಗಳು ದಾಖಲಾಗಿದ್ದು, 115 ಕೋಟಿ ರೂ. ವಂಚನೆ ಯಾಗಿದೆ ಎಂದು ಡಾ. ಜಿ. ಪರಮೇಶ್ವರ್ ಹೇಳಿದರು. 2022 ರಿಂದ 2024ರವರೆಗೆ ಸೈಬರ್ ಅಪರಾಧಗಳ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿತ್ತು. ರಾಜ್ಯಸರ್ಕಾರ ಇಂತಹ ಅಪರಾಧಗಳನ್ನು ನಿಯಂತ್ರಿಸಲು ಕೈಗೊಂಡ ದಿಟ್ಟ ಕ್ರಮದಿಂದಾಗಿ ನಿಯಂತ್ರಣವಾಗುತ್ತಿದ್ದು, ಅಪರಾಧಗಳ ಸಂಖ್ಯೆ ಇಳಿಮುಖವಾಗಿದೆ. 2025 ರಲ್ಲಿ 14899 ಸೈಬರ್ ಅಪರಾಧಗಳು ದಾಖಲಾಗಿದ್ದು, 10 ಪ್ರಕರಣಗಳಲ್ಲಿ ಶಿಕ್ಷೆಯಾಗಿದೆ. 9 ಪ್ರಕರಣಗಳು ಖುಲಾಸೆಯಾಗಿವೆ. 2020 ರ ಫೆಬ್ರವರಿಯಲ್ಲಿ 2007 ಪ್ರಕರಣಗಳು ದಾಖಲಾಗಿವೆ ಎಂದು ಅವರು ಮಾಹಿತಿ ನೀಡಿದರು.

ಸುದೀರ್ಘ ಉತ್ತರ ನೀಡಿದ ಅವರು, 2024–25ನೇ ಸಾಲಿಗೆ ಹೋಲಿಸಿದರೆ ಡಿಜಿಟಲ್ ಅರೆಸ್ಟ್ ಪ್ರಕರಣಗಳು ಎಂದು ಹೇಳಿದರು.ಸಂತ್ರಸ್ತರ ದೂರುಗಳನ್ನು ಆಲಿಸಲು ಪ್ರತೀ ತಿಂಗಳ ಮೂರನೇ ಭಾನುವಾರವನ್ನು ಠಾಣಾ ವ್ಯಾಪ್ತಿಯಲ್ಲಿ ನೊಂದವರ ದಿನ

## ಡಿವೈಎಸ್‌ಪಿಗಳಿಗೆ ಎಸ್‌ಪಿ (ನಾನ್ ಐಪಿಎಸ್) ಹುದ್ದೆಗೆ ಮುಂಬಡ್ತಿ ನೀಡಲು ಕ್ರಮ

ಡಿವೈಎಸ್ಪಿ (ಸಿವಿಲ್) ವೃಂದದ ಜ್ಯೇಷ್ಠತಾ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಅರ್ಹತೆ ಮೇರೆಗೆ ಪೊಲೀಸ್ ಅಧೀಕ್ಷಕರ (ನಾನ್ ಐಪಿಎಸ್) ಹುದ್ದಗೆ ಮುಂಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಗೃಹಚಿವ ಡಾ.ಜಿ.ಪರಮೇಶ್ವರ್ ವಿಧಾನಪರಿಷತ್‌ನಲ್ಲಿ ತಿಳಿಸಿದರು. ಪ್ರಶ್ನೋತ್ತರ ವೇಳೆಯಲ್ಲಿ ಶಾಸಕ ಪುಟ್ಟಣ್ಣ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಜೇಷ್ಠತಾ ಪಟ್ಟಿ ಪರಿಷ್ಕರಿಸುವ ವಿಷಯದಲ್ಲಿ ಪರಿಣತಿ ಹೊಂದಿರುವ ನಿವೃತ್ತ ಸಮಾಜ ಕಲ್ಯಾಣಾಧಿಕಾರಿ ಬಿ.ಕೆ.ಚಿನ್ನಮಾರಯ್ಯ ಅವರನ್ನು ಸಲಹೆಗಾರರನ್ನಾಗಿ ನೇಮಿಸಲಾಗಿದೆ. ಅವರ ಸಲಹೆಯಂತೆ ಜ್ಯೇಷ್ಠತಾ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯುತ್ತಿದೆ. ಹತ್ತು ವರ್ಷಗಳಿಂದ ಡಿವೈಎಸ್ಪಿಗಳಿಗೆ ಬಡ್ತಿ ಕೊಟ್ಟಿರಲಿಲ್ಲ. ಆಗ 27 ಡಿವೈಎಸ್ಪಿಗಳಿಗೆ ಐಪಿಎಸ್‌ಗೆ ಬಡ್ತಿ ಸಿಕ್ಕಿತ್ತು. ನೇರ ನೇಮಕಾತಿಯವರಿಗೆ ಹೆಚ್ಚು ಅವಕಾಶ ಸಿಗಲಿ ಎಂಬ ಉದ್ದೇಶದಿಂದ ಮುಂಬಡ್ತಿ ಪ್ರಮಾಣವನ್ನು ಕಡಿಮೆ ಮಾಡಲಾಗಿದೆ.

ನೇರ ನೇಮಕಾತಿಯಲ್ಲಿ ಕನ್ನಡಿಗರಿಗೆ ಹೆಚ್ಚು ಅವಕಾಶ ಸಿಗುತ್ತದೆ. ಹೀಗಾಗಿ ಕನ್ನಡಿಗರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಲಾಗುವುದು. ಹೊರರಾಜ್ಯ ಬಡ್ತಿ ನೀಡುತ್ತಿರುವ ಮಾದರಿಯನ್ನು ಅಧ್ಯಯನ ಮಾಡಿ ಅದು ಒಳ್ಳೆಯದಾಗಿದ್ದರೆ ರಾಜ್ಯದಲ್ಲೂ ಪರಿಗಣಿಸಲಾಗುವುದು ಎಂದು ಹೇಳಿದರು.

# ಬಿಪಿಎಲ್ ಕಾರ್ಡ್: ವಾರ್ಷಿಕ ಆದಾಯ ಮಿತಿ 3 ಲಕ್ಷಕ್ಕೇರಿಸಲು ಸರ್ಕಾರ ಪರಿಶೀಲನೆ: ಸಚಿವ ದಿನೇಶ್ ಗುಂಡೂರಾವ್



**ಬೆಂಗಳೂರು, ಮಾ.12:** ಬಿಪಿಎಲ್ ಕಾರ್ಡ್ ಪಡೆಯಲು ನಿಗದಿಪಡಿಸಲಾಗಿರುವ ವಾರ್ಷಿಕ ಆದಾಯ ಮಿತಿಯನ್ನು 1.20 ಲಕ್ಷ ರೂ.ಗಳಿಂದ 3 ಲಕ್ಷ ರೂ.ಗಳಿಗೆ ಏರಿಸಲು ರಾಜ್ಯ ಸರ್ಕಾರ ಪರಿಶೀಲನೆ ನಡೆಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನಸಭೆಗಿಂದು ತಿಳಿಸಿದ್ದಾರೆ.

ಪ್ರಶ್ನೋತ್ತರದ ಅವಧಿಯಲ್ಲಿ ಬಿಜೆಪಿ ಶಾಸಕ ಡಾ.ಸಿ.ಎನ್. ಅಶ್ವತ್ಥನಾರಾಯಣ್ ಪ್ರಶ್ನೆ ಕೇಳಿ, ಎಂಟು ವರ್ಷಗಳ ಹಿಂದೆ ಆದಾಯ ಮಿತಿಯನ್ನು ನಿಗದಿ ಮಾಡಲಾಗಿದೆ. ಆದರೆ ಈಗ ಆದಾಯದ ಪ್ರಮಾಣ ಏರಿಕೆಯಾಗಿದೆ. ಹಳೆಯ ಮಿತಿಯನ್ನೇ ಮುಂದುವರೆಸುವುದು ಅಗತ್ಯ ಇಲ್ಲ. ನಗರ ಪ್ರದೇಶ ಮತ್ತು ಗ್ರಾಮೀಣ ಭಾಗಕ್ಕೆ ಆದಾಯ ಮಿತಿಯನ್ನು ಏಕರೂಪವಾಗಿ ನಿಗದಿಪಡಿಸಿರುವುದು ಸರಿಯಲ್ಲ ಎಂದರು.

ಕೇಂದ್ರ ಸರ್ಕಾರದ ಆಹಾರ ಭದ್ರತಾ ಕಾಯ್ದೆಯ ಅಡಿ ಗ್ರಾಮೀಣ ಭಾಗದಲ್ಲಿ ಶೇ. 75ರಷ್ಟು, ನಗರ ಪ್ರದೇಶದಲ್ಲಿ ಶೇ. 50ರಷ್ಟು ಬಿಪಿಎಲ್ ಕಾರ್ಡ್‌ಗಳು ಇರಬಹುದು ಎಂದು ತಿಳಿಸಲಾಗಿದೆ. ನಗರ ಪ್ರದೇಶದಲ್ಲಿನ ಅರ್ಹರಿಗೆ ಆದ್ಯತಾ ಕಾರ್ಡು ಸಿಗುತ್ತಿಲ್ಲ ಎಂದು ವಿವರಿಸಿದರು.

ಬಿಜೆಪಿ ಶಾಸಕ ಎನ್.ಗೋಪಾಲಯ್ಯ, ಪ್ರತಿ ಕ್ಷೇತ್ರದಲ್ಲೂ ಆರರಿಂದ ಎಂಟು ಸಾವಿರ ಕಾರ್ಡ್‌ಗಳನ್ನು ರದ್ದುಗೊಳಿಸಲಾಗಿದೆ. ಇದರಿಂದ ಬಡವರಿಗೆ ಅನ್ಯಾಯವಾಗಿದೆ. ಮನೆಮನೆ ಸಮೀಕ್ಷೆ ನಡೆಸದ ಹೊರತು ಕಾರ್ಡ್‌ಗಳನ್ನು ರದ್ದುಗೊಳಿಸಬಾರದು ಎಂದು ಮನವಿ ಮಾಡಿದರು.

ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ. ಸುರೇಶಬಾಬು, ಚಾಲಕ ವೃತ್ತಿ ನಡೆಸುವವರಿಗೆ ಕಡಿಮೆ ಆದಾಯ ಇರುತ್ತದೆ. ಅವರಿಗೂ ಕಾರ್ಡುಗಳನ್ನು ರದ್ದುಗೊಳಿಸಲಾಗಿದೆ. ಪಡಿತರ ಚೀಟಿಗಳು ಕೇವಲ ಆಹಾರ ಪಡೆಯಲು ಸೀಮಿತವಾಗಿಲ್ಲ, ಆರೋಗ್ಯ ಸೇವೆ ಸೇರಿದಂತೆ ವಿವಿಧ ಅಗತ್ಯಗಳಿಗೆ ಬಳಕೆಯಾಗುತ್ತಿವೆ ಎಂದರು.

ಆಹಾರ ಮತ್ತು ನಾಗರಿಕ ಪೂರೈಕೆ ಸಚಿವ ಕೆ.ಎಚ್. ಮುನಿಯಪ್ಪ ಅವರ ಪರವಾಗಿ ಉತ್ತರ ನೀಡಿದ ಸಚಿವ ದಿನೇಶ್ ಗುಂಡೂರಾವ್, ವಾರ್ಷಿಕ ಆದಾಯ ಮಿತಿ ಪರಿಷ್ಕರಣೆಯಾಗಬೇಕು ಎಂಬ ಅಭಿಪ್ರಾಯ ಸರ್ಕಾರದ್ದು ಆಗಿದೆ. ಹಿರಿಯ ಶಾಸಕ ಆರ್.ವಿ.ದೇಶಪಾಂಡೆ ಅವರ ಅಧ್ಯಕ್ಷತೆಯ ಆಡಳಿತ ಸುಧಾರಣಾ ಆಯೋಗ ನೀಡಿರುವ ವರದಿಯಲ್ಲಿ ಬಿಪಿಎಲ್ ಕಾರ್ಡುಗಳನ್ನು ಪಡೆಯಲು ವಾರ್ಷಿಕ ಆದಾಯ ನೀತಿಯನ್ನು ಮೂರು ಲಕ್ಷ ರೂ.ಗಳಿಗೆ ಹೆಚ್ಚಿಸಬೇಕು ಎಂಬ ಶಿಫಾರಸ್ಸು ಇದೆ. ಅದನ್ನು ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದರು. ಕೇಂದ್ರ ಸರ್ಕಾರದ ಮಾನದಂಡದ ಪ್ರಕಾರ ರಾಜ್ಯದಲ್ಲಿ 1.09 ಕೋಟಿ ಬಿಪಿಎಲ್ ಕಾರ್ಡ್‌ಗಳು ಇರಬೇಕು. ಆದರೆ ನಮ್ಮಲ್ಲಿ ಇನ್ನೂ 15–20 ಲಕ್ಷ ಹೆಚ್ಚಿವೆ. ಅವುಗಳಿಗೆ ರಾಜ್ಯ ಸರ್ಕಾರವೇ ಸ್ವಂತ ಖರ್ಚಿನಲ್ಲಿ ಪಡಿತರ ನೀಡುತ್ತಿದೆ ಎಂದು ಹೇಳಿದರು.


ಬಡತನ ರೇಖೆಗಿಂತ ಕೆಳಗಿರುವ ಬಿಪಿಎಲ್ ಕಾರ್ಡ್‌ಗಳನ್ನು ಆದ್ಯತೆ ಕಾರ್ಡುಗಳು ಎಂದು ಪರಿಗಣಿಸಲಾಗಿದೆ. ಇವುಗಳನ್ನು ಪಡೆಯಲು 2017ರಲ್ಲಿ ಮಾನದಂಡಗಳನ್ನು ರೂಪಿಸಲಾಗಿದೆ ಎಂದರು.

ಶಾಸಕರುಗಳು ಈ ವಿಚಾರವಾಗಿ ಪದೇಪದೇ ಪ್ರಶ್ನೆ ಕೇಳಿದಾಗ, ಇದೊಂದು ಗಂಭೀರ ವಿಚಾರವಾಗಿದೆ. ಸಂಬಂಧಪಟ್ಟ ಸಚಿವರಿಂದಲೇ ಉತ್ತರ ಕೊಡಿಸಿ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಸಲಹೆ ನೀಡಿದರು.

# ಹಾರ್ಮುಜ್ ಜಲಸಂಧಿ ದಾಟಿ ಮುಂಬೈ ತಲುಪಿದ ಮೊದಲ ತೈಲ ಟ್ಯಾಂಕರ್

**ವಿದೇಶಾಂಗ ಸಚಿವ ಎಸ್. ಜೈಶಂಕರ್ ಮತ್ತು ಸಚಿವ ಅಬ್ಬಾಸ್ ಅರಫ್ಚಿ ನಡುವಿನ ಉನ್ನತ ಮಟ್ಟದ ಮಾತುಕತೆಯ ನಂತರ ಅವಕಾಶ**

**ಪರ್ಷಿಯನ್ ಕೊಲ್ಲಿಯಲ್ಲಿ 28 ಭಾರತೀಯ ಹಡಗುಗಳು ನಿಕಟ ಮೇಲ್ವಿಚಾರಣೆಯಲ್ಲಿವೆ: ಸರ್ಕಾರ**




**ಮುಂಬೈ, ಮಾ.12:** ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆಯೂ, ಭಾರತೀಯ ಕ್ಯಾಪ್ಟನ್ ನೇತೃತ್ವದ ಲೈಬೀರಿಯಾ ಧ್ವಜವುಳ್ಳ ಕಚ್ಚಾ ತೈಲ ಟ್ಯಾಂಕರ್ ಆಯಕಟ್ಟಿನ ಹಾರ್ಮುಜ್ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿ ಮುಂಬೈ ಬಂದರು ತಲುಪಿದೆ.

ಸೌದಿ ಅರೇಬಿಯಾದ ರಾಸ್ ತನುರಾ ಬಂದರಿನಿಂದ ಕಚ್ಚಾತೈಲವನ್ನು ಹೊತ್ತಿದ್ದ ಶೆನ್ಲಾಂಗ್ ಸೂಯೆಜ್ ಮ್ಯಾಕ್ಸ್ ಟ್ಯಾಂಕರ್‌ಗೆ, ಕಿರಿದಾದ ಜಲಮಾರ್ಗದ ಮೂಲಕ ಹಾದುಹೋಗಲು ಇರಾನ್ ಅನುಮತಿ ನೀಡಿದ ಬಳಿಕ ಬುಧವಾರ ಮುಂಬೈಗೆ ಆಗಮಿಸಿದೆ ಎಂದು ಮುಂಬೈ ಪೋರ್ಟ್ ಟ್ರಸ್ಟ್ ತಿಳಿಸಿದೆ.

ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಮತ್ತು ಅವರ ಇರಾನ್ ಸಹವರ್ತಿ ಅಬ್ಬಾಸ್ ಅರಫ್ಚಿ ನಡುವಿನ ಉನ್ನತ ಮಟ್ಟದ ಮಾತುಕತೆಯ ನಂತರ, ಹಾರ್ಮುಜ್ ಜಲಸಂಧಿಯಲ್ಲಿ ಭಾರತೀಯ ತೈಲ ಟ್ಯಾಂಕರ್‌ಗಳ ಸಂಚಾರಕ್ಕೆ ಇರಾನ್ ಅವಕಾಶ ನೀಡಿದೆ ಎಂದು ಮೂಲಗಳು ತಿಳಿಸಿವೆ. ಈ ಸೂಕ್ಷ್ಮ ಮಾರ್ಗದಲ್ಲಿ ಸಂಚರಿಸುವ ಮುನ್ನ, ಈ ಟ್ಯಾಂಕರ್ ಮಾರ್ಚ್ 1ರಂದು ರಾಸ್ ತನುರಾದಿಂದ ಹೊರಟಿತ್ತು ಎಂದು ಮಾಧ್ಯಮಗಳು ವರದಿ ಮಾಡಿದೆ.

ಹಾರ್ಮುಜ್ ಜಲಸಂಧಿಯು ವಿಶ್ವದ ಅತ್ಯಂತ ನಿರ್ಣಾಯಕ ಕಡಲ ಮಾರ್ಗಗಳಲ್ಲಿ ಒಂದಾಗಿದ್ದು, ಜಾಗತಿಕ ಕಚ್ಚಾತೈಲ ಮತ್ತು ನೈಸರ್ಗಿಕ ಅನಿಲ ಸಾಗಣೆಯ ಗಮನಾರ್ಹ ಪಾಲು ಇದರ ಮೂಲಕವೇ ಹಾದುಹೋಗುತ್ತದೆ. ಫೆಬ್ರವರಿ 28ರಂದು ಇರಾನ್ (ಟೆಹ್ರಾನ್) ವಿರುದ್ಧ ಅಮೆರಿಕ–ಇಸ್ರೇಲ್ ಜಂಟಿ ಸೇನಾ ಕಾರ್ಯಾಚರಣೆ ಆರಂಭವಾದಾಗಿನಿಂದ, ಇರಾನ್ ಈ ಜಲಸಂಧಿಯ ಮೇಲೆ ತನ್ನ ನಿಯಂತ್ರಣವನ್ನು ಬಿಗಿಗೊಳಿಸಿದೆ ಹಾಗೂ ಹಲವಾರು ಹಡಗುಗಳ ಮೇಲೆ ದಾಳಿ ನಡೆಸಿದೆ. ಇದು ಜಾಗತಿಕ ತೈಲ ಪೂರೈಕೆಯಲ್ಲಿನ ವ್ಯತ್ಯಯದ ಆತಂಕವನ್ನು ಹೆಚ್ಚಿಸಿದೆ.

ಈ ಮಾರ್ಗ ಬಹುತೇಕ ಮುಚ್ಚುವಿಕೆಯ ಹಂತ ತಲುಪಿರುವುದು, ವಿಶ್ವದ ಮೂರನೇ ಅತಿದೊಡ್ಡ ತೈಲ ಬಳಕೆದಾರ ದೇಶವಾದ ಭಾರತವು ಪರ್ಯಾಯ ಮಾರ್ಗಗಳನ್ನು ಹುಡುಕುವಂತೆ ಮಾಡಿದೆ. ರಷ್ಯಾದಿಂದ ಕಚ್ಚಾ ತೈಲ ಖರೀದಿಯನ್ನು ಮತ್ತಷ್ಟು ಹೆಚ್ಚಿಸುವುದು ಈ ಪರ್ಯಾಯಗಳಲ್ಲಿ ಸೇರಿದೆ. ಈ ನಡುವೆ, ಪರ್ಷಿಯನ್ ಕೊಲ್ಲಿ ಪ್ರದೇಶದಲ್ಲಿ ಪ್ರಸ್ತುತ 28 ಭಾರತೀಯ ಧ್ವಜವುಳ್ಳ ಹಡಗುಗಳು ಕಾರ್ಯಾಚರಿಸುತ್ತಿವೆ ಎಂದು ಕೇಂದ್ರ ಹಡಗು ಸಚಿವಾಲಯ ಬುಧವಾರ ತಿಳಿಸಿದೆ. ಇವುಗಳಲ್ಲಿ, 677 ಭಾರತೀಯ ನಾವಿಕರನ್ನು ಹೊತ್ತ 24 ಹಡಗುಗಳು ಹಾರ್ಮುಜ್ ಜಲಸಂಧಿಯ ಪಶ್ಚಿಮ ಭಾಗದಲ್ಲಿದ್ದರೆ, 101 ಭಾರತೀಯ ನಾವಿಕರಿರುವ ನಾಲ್ಕು ಹಡಗುಗಳು ಜಲಸಂಧಿಯ ಪೂರ್ವದಲ್ಲಿವೆ.

ಭಾರತೀಯ ಹಡಗುಗಳು ಮತ್ತು ನಾವಿಕರ ಸುರಕ್ಷತೆ ಮತ್ತು ಭದ್ರತೆಯನ್ನು ನಿಕಟವಾಗಿ ಗಮನಿಸಲಾಗುತ್ತಿದೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ಬೆಳವಣಿಗೆಗಳನ್ನು ಪತ್ತೆಹಚ್ಚಲು ಮತ್ತು ಅಗತ್ಯ ಸಹಾಯವನ್ನು ಸಂಯೋಜಿಸಲು ಫೆಬ್ರವರಿ 28ರಿಂದ ಹಡಗು ಸಚಿವಾಲಯ ಹಾಗೂ ಡೈರೆಕ್ಟರೇಟ್ ಜನರಲ್ ಆಫ್ ಶಿಪ್ಪಿಂಗ್‌ನಲ್ಲಿ 24 ಗಂಟೆಗಳ ನಿಯಂತ್ರಣ ಕೊಠಡಿಯು ಕಾರ್ಯಾಚರಿಸುತ್ತಿದೆ.

ಗುಜರಾತ್‌ನ ಕಾಂಡ್ಲಾ ಬಂದರಿಗೆ ತೆರಳುತ್ತಿದ್ದ ಥಾಯ್ ಹಡಗಿನ ಮೇಲೆ ಬುಧವಾರ ಜಲಸಂಧಿಯಲ್ಲಿ ದಾಳಿ ನಡೆದಿದ್ದು, ನವದೆಹಲಿಯು ಇದನ್ನು ತೀವ್ರವಾಗಿ ಖಂಡಿಸಿದೆ. ಫೆಬ್ರವರಿ ಅಂತ್ಯದಲ್ಲಿ ಇರಾನ್ ವಿರುದ್ಧ ಇಸ್ರೇಲ್ ಮತ್ತು ಅಮೆರಿಕ ಸೇನಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದಾಗಿನಿಂದ, ಈ ಕಡಲ ಮಾರ್ಗದಲ್ಲಿ ಇರಾನ್ ಕನಿಷ್ಠ 16 ಹಡಗುಗಳ ಮೇಲೆ ದಾಳಿ ಮಾಡಿದೆ.

ಇರಾನ್ ಸೇನೆಯು ದುಬೈ ಕರಾವಳಿಯ ಬಳಿ ಕಂಟೇನರ್ ಹಡಗಿಗೆ ಅಪ್ಪಳಿಸಿದೆ, ಬಹ್ರೇನ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಬಳಿ ಬೆಂಕಿ ಉಂಟುಮಾಡಿದೆ ಹಾಗೂ ಡ್ರೋನ್ ಮೂಲಕ ಪ್ರಮುಖ ಸೌದಿ ತೈಲಕ್ಷೇತ್ರದ ಮೇಲೆ ಗುರಿಯಿಟ್ಟು ದಾಳಿ ನಡೆಸಿದೆ. ಅಲ್ಲದೆ, ಪರ್ಷಿಯನ್ ಕೊಲ್ಲಿಯಲ್ಲಿರುವ ಬಸ್ರಾ ಬಂದರಿನ ಮೇಲೆ ದಾಳಿ ಮಾಡುವ ಮೂಲಕ ಇರಾಕ್ ತನ್ನೆಲ್ಲಾ ತೈಲ ಟರ್ಮಿನಲ್‌ಗಳ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸುವಂತೆ ಮಾಡಿದೆ. ಈ ಸಂಘರ್ಷದ ಪರಿಣಾಮವಾಗಿ ಜಾಗತಿಕ ತೈಲ ಬೆಲೆಯು ಪ್ರಸ್ತುತ ಮಟ್ಟಕ್ಕಿಂತ ದುಪ್ಪಟ್ಟಾಗಿ, ಬ್ಯಾರಲ್‌ಗೆ 200 ಡಾಲರ್‌ಗೆ ಏರಿಕೆಯಾಗುವ ಸಾಧ್ಯತೆಯಿದೆ ಎಂದು ಟೆಹ್ರಾನ್ ಎಚ್ಚರಿಕೆ ನೀಡಿದೆ.

# ಪ್ರಜಾಪ್ರಭುತ್ವದಲ್ಲಿ ಬಲವಾದ ವಿರೋಧ ಪಕ್ಷ ಅತ್ಯಗತ್ಯ

## ಪ್ರತಿಪಕ್ಷ ನಾಯಕನಿಗೆ ನಾನು ಎಂದಿಗೂ ಅಡ್ಡಿಯಾಗಿಲ್ಲ । ಕಲಾಪಕ್ಕೆ ಮರಳಿದ ಬಳಿಕ ಸ್ಪೀಕರ್ ಓಂ ಬಿರ್ಲಾ ಸ್ಪಷ್ಟನೆ

**ನವದೆಹಲಿ,ಮಾ.12:** ಪ್ರಜಾಪ್ರಭುತ್ವದಲ್ಲಿ ಬಲವಾದ ವಿರೋಧ ಪಕ್ಷ ಅತ್ಯಗತ್ಯ ಮತ್ತು ವಿರೋಧ ಪಕ್ಷದ ನಾಯಕನಿಗೆ ನಾನು ಎಂದಿಗೂ ಅಡ್ಡಿಯಾಗಿಲ್ಲ, ಸಂಸತ್ತಿನ ನಿಯಮಗಳು ಸರ್ವೋಚ್ಚ ಮತ್ತು ಪ್ರಧಾನಿಯೂ ಸೇರಿದಂತೆ ಯಾರೂ ಕಾನೂನಿಗಿಂತ ಮೇಲಲ್ಲ ಎಂದು ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಹೇಳಿದ್ದಾರೆ.

ಅವಿಶ್ವಾಸ ನಿರ್ಣಯದ ಮೇಲಿನ ಚರ್ಚೆಯ ನಂತರ ಇಂದು ಮೊದಲ ಬಾರಿಗೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕಲಾಪಕ್ಕೆ ಮರಳಿದರು. ಈ ವೇಳೆ ಮಾತನಾಡಿದ ಅವರು, ಕಳೆದ ಎರಡು ದಿನಗಳಲ್ಲಿ ಸದನವು 12 ಗಂಟೆಗಳಿಗೂ ಹೆಚ್ಚು ಕಾಲ ಚರ್ಚೆ ನಡೆಸಿ ಎಲ್ಲಾ ಸದಸ್ಯರ ಅಭಿಪ್ರಾಯಗಳು ಮತ್ತು ಕಳವಳಗಳನ್ನು ಬೆಳಕಿಗೆ ತಂದಿದೆ ಎಂದು ಓಂ ಬಿರ್ಲಾ ಹೇಳಿದರು.

ಈ ಸದನವು 1.4 ಶತಕೋಟಿ ಜನರನ್ನು ಪ್ರತಿನಿಧಿಸುತ್ತದೆ. ಪ್ರತಿಯೊಬ್ಬ ಸಂಸದರು ತಮ್ಮ ಜನರ ಸಮಸ್ಯೆಗಳು ಮತ್ತು ನಿರೀಕ್ಷೆಗಳೊಂದಿಗೆ ಇಲ್ಲಿಗೆ ಬರುತ್ತಾರೆ. ಪ್ರತಿಯೊಬ್ಬ ಸಂಸದರು ನಿಯಮಗಳೊಳಗೆ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸುತ್ತಾರೆ ಎಂದು ಖಚಿತಪಡಿಸಿಕೊಳ್ಳಲು ನಾನು ಯಾವಾಗಲೂ ಪ್ರಯತ್ನಿಸಿದ್ದೇನೆ. ಕಡಿಮೆ ಮಾತನಾಡುವ ಪ್ರತಿಯೊಬ್ಬ ಸಂಸದರು ಮಾತನಾಡಲು ನಾನು ಯಾವಾಗಲೂ ಪ್ರೋತ್ಸಾಹಿಸಲು ಪ್ರಯತ್ನಿಸಿದ್ದೇನೆ, ಏಕೆಂದರೆ ಮಾತನಾಡುವುದು ಪ್ರಜಾಪ್ರಭುತ್ವದ ಸಂಕಲ್ಪವನ್ನು ಬಲಪಡಿಸುತ್ತದೆ ಎಂದರು.

ಸುಧೀರ್ಘ ಕಲಾಪವನ್ನು ವೀಕ್ಷಿಸಿದ್ದೇನೆ ಎಲ್ಲ ವಿಮರ್ಶೆಗಳನ್ನು ಸಕರಾತ್ಮಕವಾಗಿ ತೆಗೆದುಕೊಂಡಿದ್ದೇನೆ ಎಂದ ಓಂ ಬಿರ್ಲಾ, ವಿರೋಧ ಪಕ್ಷದ ನಾಯಕನನ್ನು ಮಾತನಾಡದಂತೆ ತಡೆಯಲಾಗಿದೆ ಎನ್ನುವ ಆರೋಪಕ್ಕೆ ಉತ್ತರಿಸಿದರು. "ಯಾರೇ ಆಗಿರಲಿ, ನಿಯಮಗಳ ಪ್ರಕಾರ ಸದನದಲ್ಲಿ



ಮಾತನಾಡುವ ಹಕ್ಕಿದೆ ಎಂದು ನಾನು ಸ್ಪಷ್ಟಪಡಿಸಲು ಬಯಸುತ್ತೇನೆ. ಸದನದ ನಾಯಕರು ಎಲ್ಲಾ ನಿಯಮಗಳಿಗಿಂತ ಮೇಲಿದ್ದಾರೆ ಎಂದು ಕೆಲವರು ನಂಬಿದ್ದರು. ಇದು ಹಾಗಲ್ಲ ಎಂದು ನಾನು ಸ್ಪಷ್ಟಪಡಿಸುತ್ತೇನೆ.

ನಿಯಮಗಳನ್ನು ಪಾಲಿಸುವುದು ಕಡ್ಡಾಯವಾಗಿದೆ ಅದು ಪ್ರಧಾನ ಮಂತ್ರಿಯಾಗಿದ್ದರೂ ಸಹ, ನಿಯಮ 372 ರ ಅಡಿಯಲ್ಲಿ, ಅವರು ಮೊದಲು ಸ್ಪೀಕರ್ ಅವರ ಅನುಮತಿಯನ್ನು ಪಡೆಯಬೇಕು. ಯಾವುದೇ ಸದಸ್ಯರು ಈ ಸದನದ ಶಿಷ್ಟಾಚಾರಕ್ಕೆ ವಿರುದ್ಧವಾಗಿ ಹೋದಾಗ, ನಾನು ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳುತ್ತೇನೆ ನಿಯಮಗಳ ಅಡಿಯಲ್ಲಿ, ಯಾವುದೇ ಸದಸ್ಯರಿಗೆ ಸದನದಲ್ಲಿ ಮಾತನಾಡುವ ಸ್ವಾತಂತ್ರ್ಯವಿದೆ, ಆದರೆ ನಿಯಮಗಳ ಮಿತಿಯೊಳಗೆ ಎಂದರು.

ಚರ್ಚೆಯ ಸಮಯದಲ್ಲಿ, ಕೆಲವರು ಮೈಕ್ರೋಫೋನ್ ಆಫ್ ಮಾಡಿರುವುದಾಗಿ ಆರೋಪಿಸಿದ್ದಾರೆ ಎಂದು ಅವರು, ಸ್ಪೀಕರ್ ಅದನ್ನು ಆಫ್ ಮಾಡಲು ಬಟನ್ ಹೊಂದಿಲ್ಲ. ವಿರೋಧ ಪಕ್ಷದ ಅನೇಕ ಸದಸ್ಯರು ಈ ಕುರ್ಚಿಯ ಮೇಲೆ ಕುಳಿತುಕೊಳ್ಳುತ್ತಾರೆ; ಅವರಿಗೆ ಇದರ ಬಗ್ಗೆ ತಿಳಿದಿದೆ ಎಂದರು.

ಮಹಿಳಾ ಸದಸ್ಯರು ಅವರಿಗೆ ಸೀಮಿತ ಅವಕಾಶಗಳನ್ನು ನೀಡಲಾಗಿದೆ ಎಂಬ ಆರೋಪಗಳನ್ನು ಹೊರಿಸಲಾಗಿದೆ ಎಂದು ಓಂ ಬಿರ್ಲಾ, ನನ್ನ ಅವಧಿಯಲ್ಲಿ, ಎಲ್ಲಾ ಮಹಿಳಾ ಸದಸ್ಯರು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ ಎಂದು ನನಗೆ ಹೆಮ್ಮೆ ಇದೆ. ಬಜೆಟ್ ಚರ್ಚೆಯ ಸಮಯದಲ್ಲಿ, ಕೆಲವು ಮಹಿಳಾ ಸದಸ್ಯರು ಖಜಾನೆ ಪೀಠದ ಕಡೆಗೆ ಹೋಗಿ ಘೋಷಣೆಗಳನ್ನು ಕೂಗಲು ಪ್ರಯತ್ನಿಸಿದರು. ಇದು ಅನಿರೀಕ್ಷಿತ ಘಟನೆಯಾಗಿತ್ತು, ಆದ್ದರಿಂದ ನಾನು ಆಡಳಿತ ಪಕ್ಷದ ನಾಯಕಿಯನ್ನು ಸದನಕ್ಕೆ ಪ್ರವೇಶಿಸದಂತೆ ವಿನಂತಿಸಿದೆ. ಎಲ್ಲರೂ ಮಾತನಾಡಿದ ನಂತರವೇ, ನಾನು ಯಾವಾಗಲೂ ರಾತ್ರಿಯವರೆಗೆ ಕುಳಿತುಕೊಳ್ಳಬೇಕಾಗಿದ್ದರೂ ಸಹ, ಸದನವನ್ನು ಪ್ರವೇಶಿಸಲು ಪ್ರಯತ್ನಿಸುತ್ತೇನೆ. ಒಂದು ವರ್ಷದೊಳಗೆ, ಸದನದಲ್ಲಿ ಮಾತನಾಡಲು ಬಯಸುವ ಎಲ್ಲರಿಗೂ ನಾನು ಅವಕಾಶ ನೀಡಿದ್ದಕ್ಕೆ ನನಗೆ ಸಂತೋಷವಾಗಿದೆ.

ಕೆಲವು ಸದಸ್ಯರು ಅಮಾನತುಗೊಳಿಸುವ ವಿಷಯವನ್ನು ಸಹ ಎತ್ತಿದ ಅವರು, ಪಕ್ಷದ ರೇಖೆಗಳನ್ನು ಮೀರಿ ನಾನು ಇನ್ನೂ ಎಲ್ಲಾ ಸದಸ್ಯರೊಂದಿಗೆ ವೈಯಕ್ತಿಕ ಸಂಬಂಧವನ್ನು ಉಳಿಸಿಕೊಂಡಿದ್ದೇನೆ. ಆದಾಗ್ಯೂ, ಸದನದಲ್ಲಿ ಸುವ್ಯವಸ್ಥೆಯನ್ನು ಕಾಯ್ದುಕೊಳ್ಳುವ ಜವಾಬ್ದಾರಿಯೂ ನನಗಿದೆ. ಈ ಸದನವು ಅಮಾನತುಗೊಳಿಸುವಂತಹ ಕಠಿಣ ನಿರ್ಧಾರಗಳನ್ನು ಏಕೆ ತೆಗೆದುಕೊಳ್ಳಬೇಕಾಯಿತು ಎಂಬುದನ್ನು ನಾವು ಪರಿಗಣಿಸಬೇಕು. ಸದನದ ಘನತೆಯನ್ನು ಕಾಪಾಡಿಕೊಳ್ಳಬೇಕೆಂದು ನಾನು ಆಗಾಗ್ಗೆ ಒತ್ತಾಯಿಸುತ್ತೇನೆ. ಆದರೆ ಸದನದ ಸದಸ್ಯರು ಅದನ್ನು ಪಾಲಿಸದಿದ್ದಾಗ, ಸದನವನ್ನು ಮುಂದೂಡಬೇಕಾಗುತ್ತದೆ ಎಂದು ಸ್ಪಷ್ಟಪಡಿಸಿದರು.




ನವದೆಹಲಿಯಲ್ಲಿ ಗುರುವಾರ ಕೃಷಿ–ಆಹಾರ ವ್ಯವಸ್ಥೆಗಳಲ್ಲಿ ಮಹಿಳೆಯರ ಪಾತ್ರದ ಕುರಿತ ಜಾಗತಿಕ ಸಮ್ಮೇಳನದ ಉದ್ಘಾಟನಾ ಅಧಿವೇಶನದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗವಹಿಸಿದ್ದರು.

# ಕಾಶ್ಮೀರಿ ಪ್ರತ್ಯೇಕತಾವಾದಿ ನಾಯಕ ಶಬೀರ್‌ಗೆ ಸುಪ್ರೀಂ ಕೋರ್ಟ್ ಜಾಮೀನು

**ನವದೆಹಲಿ: ಮಾ.12:** ಭಯೋತ್ಪಾದಕರಿಗೆ ಹಣಕಾಸು ನೆರವು ನೀಡಿದ ಆರೋಪ ಮತ್ತು ಜಮ್ಮು ಮತ್ತು ಕಾಶ್ಮೀರವನ್ನು ಭಾರತದಿಂದ ಬೇರ್ಪಡಿಸುವ ಪಿತೂರಿ ಆರೋಪಕ್ಕೆ ಸಂಬಂಧಿಸಿದಂತೆ ಬಂಧನದಲ್ಲಿರುವ ಕಾಶ್ಮೀರಿ ಪ್ರತ್ಯೇಕತಾವಾದಿ ನಾಯಕ ಶಬೀರ್ ಅಹ್ಮದ್ ಶಾಗೆ ಸುಪ್ರೀಂಕೋರ್ಟ್ ಜಾಮೀನು ನೀಡಿದೆ.

ನ್ಯಾಯಮೂರ್ತಿ ವಿಕ್ರಮ್ ನಾಥ್ ಮತ್ತು ನ್ಯಾಯಮೂರ್ತಿ ಸಂದೀಪ್ ಮೆಹ್ತಾ ಅವರನ್ನೊಳಗೊಂಡ ನ್ಯಾಯಪೀಠವು ಶಾ ಅವರಿಗೆ ಜಾಮೀನು ನೀಡಿದೆ.

ಜಮ್ಮು ಕಾಶ್ಮೀರ ಡೆಮಾಕ್ರಟಿಕ್ ಫ್ರೀಡಂ ಪಾರ್ಟಿಯ ಮುಖ್ಯಸ್ಥರಾಗಿರುವ ಶಾ, ಕಲ್ಲು ತೂರಾಟ ಸೇರಿದಂತೆ ಹಿಂಸಾತ್ಮಕ ಪ್ರತಿಭಟನೆಗಳನ್ನು ಸಂಘಟಿಸಿದ ಆರೋಪವನ್ನೂ ಹೊರಿಸಲಾಗಿತ್ತು.ಅವರ ವಿರುದ್ಧ ರಾಷ್ಟ್ರೀಯ ತನಿಖಾ ಸಂಸ್ಥೆ, ಕಾನೂನುಬಾಹಿರ ಚಟುವಟಿಕೆಗಳು ತಡೆಗಟ್ಟುವಿಕೆ ಕಾಯ್ದೆ ಯುಎಪಿಎ ಅಡಿಯಲ್ಲಿ ಪ್ರಕರಣ ದಾಖಲಿಸಿದೆ.

NIA ಪ್ರಕಾರ, ಯಾಸಿನ್ ಮಲಿಕ್ ಮತ್ತು ಅಬ್ದುಲ್ ರಶೀದ್ ಶೇಖ್ ಸೇರಿದಂತೆ ಹಲವಾರು ಆರೋಪಿಗಳಲ್ಲಿ ಶಬೀರ್ ಅಹ್ಮದ್ ಶಾ ಕೂಡ ಒಬ್ಬರಾಗಿದ್ದಾರೆ, ಅವರು ಕಾಶ್ಮೀರದಲ್ಲಿ ಭಯೋತ್ಪಾದಕ ಸಂಘಟನೆಗಳು ಮತ್ತು ಪ್ರತ್ಯೇಕತಾವಾದಿ ಚಟುವಟಿಕೆಗಳಲ್ಲಿ ತೊಡಗಿರುವ ಕಾನೂನುಬಾಹಿರ ಸಂಘಗಳ ಸದಸ್ಯರಾಗಿದ್ದರು ಎಂದು ಹೇಳಲಾಗಿದೆ.

ಆರೋಪಿಗಳು ಕಣಿವೆಯಲ್ಲಿ ಪ್ರತ್ಯೇಕತಾವಾದಿಗಳ ಸಜ್ಜುಗೊಳಿಸುವಿಕೆಗೆ ಸಂಬಂಧಿಸಿದ ಚಟುವಟಿಕೆಗಳಿಗೆ ಹಣವನ್ನು ಸಂಗ್ರಹಿಸಿ ವರ್ಗಾಯಿಸಿದ್ದಾರೆ ಎಂದು ಆರೋಪಿಸಲಾಗಿದೆ. ಪ್ರತ್ಯೇಕತಾವಾದಿ ಉದ್ದೇಶಗಳನ್ನು ಮುಂದುವರಿಸುವ ಮತ್ತು ಪ್ರದೇಶವನ್ನು ಅಸ್ಥಿರಗೊಳಿಸುವ ಗುರಿಯನ್ನು ಇಂತಹ ಚಟುವಟಿಕೆಗಳು ಹೊಂದಿದ್ದವು



ಎಂದು ತನಿಖೆಯು ಹೇಳುತ್ತದೆ.

ಈ ಹಿಂದೆ, ವಿಶೇಷ ನ್ಯಾಯಾಲಯವು ಶಾ ಅವರ ಜಾಮೀನು ಅರ್ಜಿಯನ್ನು ತಿರಸ್ಕರಿಸಿದ್ದನ್ನು ಪ್ರಶ್ನಿಸಿ ದೆಹಲಿ ಹೈಕೋರ್ಟ್ ಅವರು ಸಲ್ಲಿಸಿದ್ದ ಮೇಲ್ಮನವಿಯನ್ನು ವಜಾಗೊಳಿಸಿತ್ತು . ನ್ಯಾಯಮೂರ್ತಿಗಳಾದ ನವೀನ್ ಚಾವ್ಲಾ ಮತ್ತು ಶಾಲಿಂದರ್ ಕೌರ್ ಅವರ ಹೈಕೋರ್ಟ್ ಪೀಠವು, ಅವರ ವಿರುದ್ಧದ ಆರೋಪಗಳು ಪ್ರಾಥಮಿಕವಾಗಿ ನಿಜವೆಂದು ತೋರುತ್ತದೆ ಮತ್ತು ಯುಎಪಿಎ ಅಡಿಯಲ್ಲಿ ಜಾಮೀನು ನೀಡಲು ಅಗತ್ಯವಾದ ಹೊರೆಯನ್ನು ಅವರು ನಿರ್ವಹಿಸುವಲ್ಲಿ ವಿಫಲರಾಗಿದ್ದಾರೆ ಎಂದು ತೀರ್ಪು ನೀಡಿತ್ತು.

ದೇಶದ ಹಿತಾಸಕ್ತಿ ಮತ್ತು ಸಮಗ್ರತೆಗೆ ಹಾನಿಕಾರಕವಾದ ಪ್ರಚೋದನಕಾರಿ ಭಾಷಣಗಳನ್ನು ನೀಡಲು ವಾಕ್ ಮತ್ತು ಅಭಿವ್ಯಕ್ತಿ ಸ್ವಾತಂತ್ರ್ಯದ ಹಕ್ಕನ್ನು ದುರುಪಯೋಗಪಡಿಸಿಕೊಳ್ಳಬಾರದು ಎಂದು ಹೈಕೋರ್ಟ್ ಕೂಡ ತೀರ್ಪು ನೀಡಿತ್ತು. ಸಾರ್ವಜನಿಕ ಸುವ್ಯವಸ್ಥೆ, ಸಭ್ಯತೆ, ನೈತಿಕತೆ ಮತ್ತು ಅಪರಾಧಕ್ಕೆ ಪ್ರಚೋದನೆಯಂತಹ ಸಮಂಜಸವಾದ ನಿರ್ಬಂಧಗಳಿಗೆ ಹಕ್ಕು ಒಳಪಟ್ಟಿರುತ್ತದೆ ಎಂದು ಅದು ಒತ್ತಿ ಹೇಳಿತ್ತು.

# ಕಲುಷಿತ ಹಾಲು ಸೇವನೆ: ಮೃತರ ಸಂಖ್ಯೆ 13ಕ್ಕೆ ಏರಿಕೆ

**ಅಮರಾವತಿ, ಮಾ.12:** ಆಂಧ್ರ ಪ್ರದೇಶದ ಈಶಾನ್ಯ ಗೋದಾವರಿ ಜಿಲ್ಲೆಯಲ್ಲಿ ಕಲಬೆರಕೆಯ ಕಲುಷಿತ ಹಾಲು ಸೇವನೆಯಿಂದ ಮೃತಪಟ್ಟವರ ಸಂಖ್ಯೆ 13ಕ್ಕೆ ಏರಿಕೆಯಾಗಿದೆ. ಏಳು ಮಂದಿ ಆಂಧ್ರ ಪ್ರದೇಶದ ರಾಜಮಹೇಂದ್ರವರಂ ಜಿಲ್ಲೆಯ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಗುರುವಾರ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮೂತ್ರ ಕಟ್ಟುವಿಕೆ, ವಾಂತಿ, ಹೊಟ್ಟೆ ನೋವು ಹಾಗೂ ಡಯಾಲಿಸಿಸ್ ಅಗತ್ಯವಿರುವ ತೀವ್ರ ಮೂತ್ರಪಿಂಡ ವೈಫಲ್ಯದಂತಹ ರೋಗಲಕ್ಷಣಗಳನ್ನು ಹೊಂದಿದ್ದ ಹಲವಾರು ಸ್ಥಳೀಯ ನಿವಾಸಿಗಳು ಫೆಬ್ರವರಿ 22ರಂದು ಆಸ್ಪತ್ರೆಗಳಿಗೆ ದಾಖಲಾದಾಗ ಈ ಪ್ರಕರಣ ಬೆಳಕಿಗೆ ಬಂದಿದೆ ಎಂದು ಆರೋಗ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಲಾಲಚೆರುವಿನ ಚೌಡೇಶ್ವರನಗರ ಮತ್ತು ಸ್ವರೂಪ್ ನಗರ ಪ್ರದೇಶಗಳಲ್ಲಿ ಕಲಬೆರಕೆ ಮಾಡಿ ಪೂರೈಸಲಾಗಿದ್ದ ಹಾಲನ್ನು ಸೇವಿಸಿದ ಬಳಿಕ ಈ ಪ್ರದೇಶದ ಜನರು ಅಸ್ವಸ್ಥಗೊಂಡಿದ್ದಾರೆ ಎಂದು ಶಂಕಿಸಲಾಗಿದೆ.

ಕಲಬೆರಕೆ ಹಾಲು ಪ್ರಕರಣ ಎಂದು ಶಂಕಿಸಲಾಗಿರುವ ಈ ಘಟನೆಯಲ್ಲಿ ಪೂರ್ವ ಗೋದಾವರಿ ಜಿಲ್ಲೆಯಲ್ಲಿ ಮೃತಪಟ್ಟವರ ಸಂಖ್ಯೆ 13ಕ್ಕೆ ಏರಿಕೆಯಾಗಿದೆ. ಉಳಿದ ಏಳು ಮಂದಿ ರಾಜಮಹೇಂದ್ರವರಂ ಜಿಲ್ಲೆಯ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ರೋಗಲಕ್ಷಣಗಳು ಹಾಲು ಕಲಬೆರಕೆಯಾಗಿರುವುದನ್ನು ಸೂಚಿಸುತ್ತಿದ್ದು, ಇದೇ ಈ ಸಾವುಗಳಿಗೆ ಕಾರಣವಾಗಿರಬಹುದು ಎಂದು ಶಂಕಿಸಲಾಗಿದೆ. ಈ ಕುರಿತು ವಿವಿಧ ಇಲಾಖೆಗಳು ಸಮನ್ವಯದ ಕ್ರಮಕ್ಕೆ ಚಾಲನೆ ನೀಡಿವೆ. ಈ ನಡುವೆ, ಈ ಘಟನೆಯೊಂದಿಗೆ ಸಂಬಂಧ ಹೊಂದಿರುವ ಹಾಲು ಘಟಕವನ್ನು ಆಹಾರ ಸುರಕ್ಷತಾ ಇಲಾಖೆ ಪರಿಶೀಲನೆ ನಡೆಸಿದ್ದು, ಹಾಲು, ಪನ್ನಿರ್, ತುಪ್ಪ, ಕುಡಿಯುವ ನೀರು ಹಾಗೂ ವಿನೇಗರ್ ಮಾದರಿಗಳನ್ನು ನಿಗಾವಹಿಸಲು ಮತ್ತು ಕ್ರಮ ಕೈಗೊಳ್ಳಲು ಸಂಗ್ರಹಿಸಿದೆ.

# ಸಿಪಿಐಎಂನಲ್ಲಿ ಅಸಮಾಧಾನ

**ತಿರುವನಂತಪುರ, ಮಾ.12:** ಕೇರಳದಲ್ಲಿ ಇನ್ನೆರಡು ತಿಂಗಳಲ್ಲಿ ಕೇರಳ ವಿಧಾನಸಭೆಗೆ ಚುನಾವಣೆ ನಡೆಯಲಿದೆ. ಈ ನಡುವೆ ಸಿಪಿಐಎಂ ನಾಯಕರಲ್ಲಿ ಅಸಮಾಧಾನ ಕಂಡುಬಂದಿದೆ. ಸಿಪಿಐ(ಎಂ) ಪಕ್ಷದ ಹಿರಿಯ ನಾಯಕ ಮತ್ತು ಮಾಜಿ ಸಚಿವ ಜಿ. ಸುಧಾಕರನ್ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ತವರು ಜಿಲ್ಲೆ ಅಲಪ್ಪುಳದಿಂದ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಲು ನಿರ್ಧರಿಸಿದ್ದಾರೆ.

ಎರಡು ಬಾರಿ ಸಚಿವರಾಗಿ ಮತ್ತು ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಸುಧಾಕರನ್, ರಾಜ್ಯ ಕಾರ್ಯದರ್ಶಿ ಎಂ. ವಿ. ಗೋವಿಂದನ್ ಸೇರಿದಂತೆ ಪಕ್ಷದ ನಾಯಕರು ತಮ್ಮನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ ಎಂದು ಈಗಾಗಲೇ ಅಸಮಾಧಾನ ವ್ಯಕ್ತಪಡಿಸಿರುವ ಸುಧಾಕರನ್, ಪಕ್ಷದಲ್ಲಿ ಯಾರಿಗೂ ಅನಾನುಕೂಲವಾಗಲು ಬಯಸುವುದಿಲ್ಲ. ಆದ್ದರಿಂದ ಪಕ್ಷವನ್ನು ತೊರೆದು ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸಲು ನಿರ್ಧರಿಸಿದ್ದೇನೆ ಎಂದು ಗುರುವಾರ ಹೇಳಿದ್ದಾರೆ.

ಮಾಜಿ ಆರೋಗ್ಯ ಸಚಿವೆ ಕೆ. ಕೆ. ಶೈಲಜಾ ಅವರಂತಹ ಅನೇಕ ಜನಪ್ರಿಯ ನಾಯಕರನ್ನು ಬದಿಗಿಡುವ ಪ್ರಯತ್ನಗಳ ಬಗ್ಗೆ ಸಿಪಿಐಎಂನಲ್ಲಿ ಈಗಾಗಲೇ ಅಸಮಾಧಾನ ಉಂಟಾಗಿದೆ. ಈ ಬೆಳವಣಿಗೆಗಳು ಚುನಾವಣೆ ವೇಳೆ ಸಿಪಿಐಎಂಗೆ ಭಾರೀ ಹೊಡೆತ ನೀಡುವ ಸಾಧ್ಯತೆಯಿದೆ.

# ಎಲ್‌ಪಿಜಿ ಕೊರತೆ: ಸಂಸತ್ ಹೊರಗೆ ವಿರೋಧ ಪಕ್ಷದ ಸಂಸದರ ಪ್ರತಿಭಟನೆ, ಸರ್ಕಾರದ ತುರ್ತು ಕ್ರಮಕ್ಕೆ ಒತ್ತಾಯ

**ನವದೆಹಲಿ, ಮಾ.12:** ದೇಶದ ಹಲವಾರು ಭಾಗಗಳಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆ ವರದಿಯಾಗಿದ್ದು, ಸರ್ಕಾರವು ಮನೆಗಳು ಮತ್ತು ಸಣ್ಣ ವ್ಯವಹಾರಗಳ ಮೇಲೆ ಪರಿಣಾಮ ಬೀರುತ್ತಿರುವ ಹೆಚ್ಚುತ್ತಿರುವ ಬಿಕ್ಕಟ್ಟನ್ನು ಪರಿಹರಿಸಲು ವಿಫಲವಾಗಿದೆ ಎಂದು ಆರೋಪಿಸಿ ಗುರುವಾರ ಸಂಸತ್ ಭವನದ ಮಕರ ದ್ವಾರದಲ್ಲಿ ವಿರೋಧ ಪಕ್ಷದ ಸದಸ್ಯರು ಪ್ರತಿಭಟನೆ ನಡೆಸಿದರು. ಗ್ರಾಹಕರು ದೀರ್ಘ ಸರತಿ ಸಾಲುಗಳು ಮತ್ತು ಅಡುಗೆ ಅನಿಲ ಲಭ್ಯತೆಯ ಬಗ್ಗೆ ಅನಿಶ್ಚಿತತೆಯನ್ನು ಎದುರಿಸುತ್ತಿರುವ ಪರಿಸ್ಥಿತಿ ಹದಗೆಡುತ್ತಿದೆ ಎಂದು ಅವರು ವಿವರಿಸಿದರು ಎಂದು ಫಲಕಗಳನ್ನು ಹಿಡಿದು ಘೋಷಣೆಗಳನ್ನು ಕೂಗಿದರು.




ಪ್ರತಿಭಟನೆಯ ಸಮಯದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಸಂಸದ ಕೆ.ಸಿ. ವೇಣುಗೋಪಾಲ್, ಕೊರತೆಯು ಸಾಮಾನ್ಯ ನಾಗರಿಕರಲ್ಲಿ ವ್ಯಾಪಕ ತೊಂದರೆಯನ್ನುಂಟುಮಾಡುತ್ತಿದೆ ಎಂದು ಆರೋಪಿಸಿದರು. "ಭಾರತದಾದ್ಯಂತ, ಎಲ್‌ಪಿಜಿ ಕೊರತೆಯು ಬೃಹತ್ ಸರತಿ ಸಾಲುಗಳಿಗೆ ಕಾರಣವಾಗಿದೆ, ಕೋಟ್ಯಂತರ ಸಾಮಾನ್ಯ ನಾಗರಿಕರು ಆಹಾರ ಭದ್ರತಾ ಬಿಕ್ಕಟ್ಟನ್ನು ನೋಡುತ್ತಿದ್ದಾರೆ, ತಿನಿಸುಗಳನ್ನು ಮುಚ್ಚಲು ಒತ್ತಾಯಿಸಲಾಗುತ್ತಿದೆ ಮತ್ತು ಜನರಲ್ಲಿ ವ್ಯಾಪಕ ಭೀತಿ ಹರಡುತ್ತಿದೆ" ಎಂದು ಅವರು ಹೇಳಿದರು. ಸರ್ಕಾರವು ಈ ಸಮಸ್ಯೆಯನ್ನು ನಿರ್ವಹಿಸುವ ರೀತಿಯನ್ನು ವೇಣುಗೋಪಾಲ್ ತೀವ್ರವಾಗಿ ಟೀಕಿಸಿದರು ಮತ್ತು ಪರಿಸ್ಥಿತಿಯು ಉನ್ನತ ಮಟ್ಟದಲ್ಲಿ ಆಡಳಿತಾತ್ಮಕ ವೈಫಲ್ಯವನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು. "ರಾಜಿ ಮಾಡಿಕೊಂಡ ಪ್ರಧಾನಿ ಇದನ್ನು ತಡೆಯುವಲ್ಲಿ ಸಂಪೂರ್ಣವಾಗಿ ಅಸಹಾಯಕರಾಗಿದ್ದಾರೆ ಮತ್ತು ಅವರ ಸರ್ಕಾರಕ್ಕೆ ಸಂಪೂರ್ಣವಾಗಿ ತಿಳಿದಿಲ್ಲ" ಎಂದು ಅವರು ಪ್ರಧಾನಿ ನರೇಂದ್ರ ಮೋದಿಯವರನ್ನು ಉಲ್ಲೇಖಿಸಿ ಹೇಳಿದರು.

ವೇಣುಗೋಪಾಲ್ ಅವರ ಪ್ರಕಾರ, ಈ ಪ್ರತಿಭಟನೆಯು ಸಮಸ್ಯೆಯ ಬಗ್ಗೆ ರಾಷ್ಟ್ರೀಯ ಗಮನ ಸೆಳೆಯುವ ಮತ್ತು ತಕ್ಷಣದ ಸರಿಪಡಿಸುವ ಕ್ರಮಗಳಿಗಾಗಿ ಸರ್ಕಾರವನ್ನು ಒತ್ತಾಯಿಸುವ ಗುರಿಯನ್ನು ಹೊಂದಿತ್ತು. "ಇಂದು ನಾವು ಎದುರಿಸುತ್ತಿರುವ ಈ ಬಿಕ್ಕಟ್ಟಿಗೆ ತುರ್ತು ಪರಿಹಾರವನ್ನು ಒತ್ತಾಯಿಸಿ, ಈ ಸರ್ಕಾರದ ಅಸಮರ್ಥತೆಯನ್ನು ಬಹಿರಂಗಪಡಿಸಲು ವಿರೋಧ ಪಕ್ಷದ ಸಂಸದರು ಸಂಸತ್ತಿನಲ್ಲಿ ಪ್ರತಿಭಟನೆ ನಡೆಸಿದರು" ಎಂದು ಅವರು ಹೇಳಿದರು. ಸಂಸತ್ತಿನ ನಡೆಯುತ್ತಿರುವ ಅಧಿವೇಶನದಲ್ಲಿ ಈ ಪ್ರದರ್ಶನ ನಡೆಯಿತು, ಅಲ್ಲಿ ವಿರೋಧ ಪಕ್ಷಗಳು ಬೆಲೆ ಏರಿಕೆ ಮತ್ತು ಅಗತ್ಯ ವಸ್ತುಗಳ ಮೇಲೆ ಪರಿಣಾಮ ಬೀರುವ ಪೂರೈಕೆ ಅಡಚಣೆಗಳ ಕುರಿತು ಹಲವಾರು ಸಮಸ್ಯೆಗಳನ್ನು ಎತ್ತುತ್ತಿವೆ.

ದ್ರವೀಕೃತ ಪೆಟ್ರೋಲಿಯಂ ಅನಿಲ (ಎಲ್‌ಪಿಜಿ) ಭಾರತದಾದ್ಯಂತ ಲಕ್ಷಾಂತರ ಮನೆಗಳಿಗೆ ಪ್ರಮುಖ ಅಡುಗೆ ಇಂಧನವಾಗಿದೆ, ವಿಶೇಷವಾಗಿ ಇತ್ತೀಚಿನ ವರ್ಷಗಳಲ್ಲಿ ಪ್ರವೇಶವನ್ನು ವಿಸ್ತರಿಸಿದ ಸರ್ಕಾರಿ ಬೆಂಬಲಿತ ವಿತರಣಾ ಯೋಜನೆಗಳ ಮೂಲಕ. ಪೂರೈಕೆಯಲ್ಲಿನ ಯಾವುದೇ ಅಡಚಣೆಯು ದೇಶೀಯ ಅಡುಗೆಮನೆಗಳು, ಸಣ್ಣ ತಿನಿಸುಗಳು ಮತ್ತು ದೈನಂದಿನ ಕಾರ್ಯಾಚರಣೆಗಳಿಗಾಗಿ ಸಿಲಿಂಡರ್ ಮರುಪೂರಣಗಳನ್ನು ಹೆಚ್ಚು ಅವಲಂಬಿಸಿರುವ ಆಹಾರ ಮಾರಾಟಗಾರರ ಮೇಲೆ ಗಮನಾರ್ಹ ಪರಿಣಾಮಗಳನ್ನು ಬೀರಬಹುದು. ಸರ್ಕಾರವು ಪೂರೈಕೆಯನ್ನು ಸ್ಥಿರಗೊಳಿಸಲು ಮತ್ತು ಗ್ರಾಹಕರು ದೀರ್ಘಕಾಲದ ಕೊರತೆಯನ್ನು ಎದುರಿಸದಂತೆ ನೋಡಿಕೊಳ್ಳಲು ಸ್ಪಷ್ಟ ಯೋಜನೆಯನ್ನು ಮಂಡಿಸುವವರೆಗೆ ಸಂಸತ್ತಿನ ಒಳಗೆ ಮತ್ತು ಹೊರಗೆ ಈ ವಿಷಯವನ್ನು ಎತ್ತುವುದನ್ನು

# ಪ.ಬಂಗಾಳದ 22ನೇ ರಾಜ್ಯಪಾಲರಾಗಿ ಆರ್.ಎನ್.ರವಿ ಪ್ರಮಾಣವಚನ



**ಕೋಲ್ಕತ್ತಾ, ಮಾ.12:** ತಮಿಳುನಾಡಿನ ರಾಜ್ಯಪಾಲರಾಗಿದ್ದ ಮಾಜಿ ಐಪಿಎಸ್ ಅಧಿಕಾರಿ ಆರ್.ಎನ್. ರವಿ ಅವರು ಪಶ್ಚಿಮ ಬಂಗಾಳದ 22ನೇ ರಾಜ್ಯಪಾಲರಾಗಿ ಪ್ರಮಾಣವಚನ ಸ್ವೀಕರಿಸಿದರು. ಕೋಲ್ಕತ್ತಾದ ಲೋಕಭವನದಲ್ಲಿ ನಡೆದ ಸಮಾರಂಭದಲ್ಲಿ ಹೈಕೋರ್ಟ್ ನ ಮುಖ್ಯ ನ್ಯಾಯಮೂರ್ತಿ ಸುಜೋಯ್ ಪಾಲ್ ಅವರು ಅವರಿಗೆ ಪ್ರಮಾಣವಚನ ಬೋಧಿಸಿದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ವಿಧಾನಸಭಾ ಸ್ಪೀಕರ್ ಬಿಮನ್ ಬ್ಯಾನರ್ಜಿ, ಹಿರಿಯ ಸಚಿವ ಹಾಗೂ ಕೋಲ್ಕತ್ತಾ ಮೇಯರ್ ಫಿರ್ಹಾದ್ ಹಕೀಮ್ ಹಾಗೂ ಎಡರಂಗದ ಅಧ್ಯಕ್ಷ ಬಿಮನ್ ಬೋಸ್ ಭಾಗಿಯಾಗಿದ್ದರು. ಆದರೆ, ವಿರೋಧ ಪಕ್ಷದ ಬಿಜೆಪಿ ಪಾಳಯದ ಯಾವುದೇ ನಾಯಕರು ಕಾರ್ಯಕ್ರಮದಲ್ಲಿ ಭಾಗವಹಿಸಿರಲಿಲ್ಲ.

ಮುಖ್ಯ ಕಾರ್ಯದರ್ಶಿ ನಂದಿನಿ ಚಕ್ರವರ್ತಿ ಹಾಗೂ ಹಿರಿಯ ಪೊಲೀಸ್ ಅಧಿಕಾರಿಗಳು ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಮಾರ್ಚ್ 5ರಂದು ಸಿ.ವಿ. ಆನಂದ ಬೋಸ್ ರಾಜೀನಾಮೆ ನೀಡಿದ ಬಳಿಕ ಆರ್.ಎನ್. ರವಿ ಅವರನ್ನು ಪಶ್ಚಿಮ ಬಂಗಾಳದ ರಾಜ್ಯಪಾಲರನ್ನಾಗಿ ನೇಮಿಸಲಾಗಿತ್ತು. ಆರ್.ಎನ್. ರವಿ ಅವರು ಈ ಹಿಂದೆ ನಾಗಾಲ್ಯಾಂಡ್, ಮೇಘಾಲಯ ಹಾಗೂ ತಮಿಳುನಾಡು ರಾಜ್ಯಗಳ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದರು.

# ದಕ್ಷಿಣ ಕನ್ನಡದಲ್ಲಿ ಹೆಚ್ಚುತ್ತಿರುವ ಕಡಲ್ಕೊರೆತದ ಗಂಭೀರತೆ ಬಗ್ಗೆ ನಿಯಮ 377ರಡಿ ಸಂಸತ್ತಿನಲ್ಲಿ ಧ್ವನಿಯೆತ್ತಿದ ಸಂಸದ ಕ್ಯಾ.ಚೌಟ

**ನವದೆಹಲಿ,ಟಂ.12:** ಉಳ್ಳಾಲ–ಸೋಮೇಶ್ವರ ಸೇರಿದಂತೆ ದಕ್ಷಿಣ ಕನ್ನಡದಲ್ಲಿ ಹೆಚ್ಚಾಗುತ್ತಿರುವ ಕಡಲ್ಕೊರೆತ ಸಮಸ್ಯೆಯನ್ನು ಗಂಭೀರವಾಗಿ ಕರಾವಳಿ ತೀರದ ಸಂರಕ್ಷಣೆಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಸಂಸದ ಕ್ಯಾ. ಬ್ರಿಜೇಶ್ ಚೌಟ ಅವರು ಲೋಕಸಭೆಯಲ್ಲಿ ಧ್ವನಿಯೆತ್ತಿದ್ದಾರೆ.

ನಿಯಮ 377ರಡಿ ಇಂದು ಈ ಗಂಭೀರ ವಿಷಯ ಪ್ರಸ್ತಾಪಿಸಿರುವ ಸಂಸದರು, ದಕ್ಷಿಣ ಕನ್ನಡ ಜಿಲ್ಲೆಯ ಒಟ್ಟು 36.66 ಕಿ.ಮೀ ಕರಾವಳಿ ತೀರದ ಪೈಕಿ ಸುಮಾರು 17.74 ಕಿ.ಮೀ ಅಂದರೆ ಶೇ.48.40ರಷ್ಟು ಭಾಗವು ಕೊರೆತಕ್ಕೆ ಒಳಗಾಗುತ್ತಿದೆ. ಇದು ಕರ್ನಾಟಕದ ಸರಾಸರಿ ಶೇ. 24ರಷ್ಟು ಮತ್ತು ರಾಷ್ಟ್ರೀಯ ಸರಾಸರಿಗಿಂತ ಅಂದರೆ ಶೇ.33.6ಕ್ಕಿಂತಲೂ ಗಣನೀಯವಾಗಿ ಜಾಸ್ತಿಯಿದೆ. ಹೀಗಿರುವಾಗ, ಜಿಲ್ಲೆಯ ಕೇವಲ ಶೇ.21.9 ರಷ್ಟು ಕರಾವಳಿ ಮಾತ್ರ ಸದ್ಯಕ್ಕೆ ಸುರಕ್ಷಿತವಾಗಿದ್ದು, ಇದು ನೆರೆಯ ಜಿಲ್ಲೆಗಳಿಗೆ ಹೋಲಿಸಿದರೆ ಅತ್ಯಂತ ಕಡಿಮೆ ಪ್ರಮಾಣವಾಗಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ನಿರಂತರವಾಗಿ ಮುಂಗಾರಿನಲ್ಲಿ ಉಂಟಾಗುವ ಅಲೆಗಳ ಅಬ್ಬರ, ಬದಲಾಗುತ್ತಿರುವ ಹವಾಮಾನ



ವೈಪರೀತ್ಯ ಮತ್ತು ಕರಾವಳಿಯಲ್ಲಿನ ಕೆಲವು ಅವೈಜ್ಞಾನಿಕ ಕಾಮಗಾರಿಗಳಿಂದಾಗಿ ಕಡಲ ತೀರವು ಸವಕಳಿಗೆ ಒಳಗಾಗಿ ಭೂಪ್ರದೇಶವು ಸಮುದ್ರಪಾಲಾಗುತ್ತಿದೆ. ಇದರಿಂದಾಗಿ ಕರಾವಳಿ ತೀರ ಭಾಗದ ಮನೆಗಳು, ರಸ್ತೆಗಳು ಮತ್ತು ಸಾರ್ವಜನಿಕ ಆಸ್ತಿಪಾಸ್ತಿಗಳಿಗೆ ಹೆಚ್ಚಿನ ಹಾನಿಯಾಗುತ್ತಿದೆ. ಹೀಗಾಗಿ, ಇದು ಕೇವಲ ಭೌಗೋಳಿಕ ಸಮಸ್ಯೆಯಲ್ಲ; ಬದಲಾಗಿ ಸಮುದ್ರವನ್ನೇ ನಂಬಿ ಬದುಕುತ್ತಿರುವ ಮೀನುಗಾರ ಸಮುದಾಯದ ಜೀವನೋಪಾಯಕ್ಕೆ ಉಂಟಾಗುತ್ತಿರುವ ದೊಡ್ಡ ಅಪಾಯವಾಗಿದೆ ಎಂದು ಕ್ಯಾ.ಚೌಟ ಅವರು ಆತಂಕ ವ್ಯಕ್ತಪಡಿಸಿದ್ದಾರೆ.

ದಕ್ಷಿಣ ಕನ್ನಡದ ಕರಾವಳಿ ತೀರವು ಪ್ರತಿ ವರ್ಷವೂ ತೀವ್ರ ಸ್ವರೂಪದ ಕಡಲ್ಕೊರೆತಕ್ಕೆ ಒಳಗಾಗುತ್ತಿರಬೇಕಾದರೆ ಮತ್ತೆ ಮುಂಗಾರು ಮಳೆ ಪ್ರವೇಶ ಸಮೀಪಿಸುತ್ತಿದೆ. ಈ ಹಿನ್ನಲೆಯಲ್ಲಿ ತುರ್ತಾಗಿ ಮಳೆಯ ಅಬ್ಬರಕ್ಕೂ ಮೊದಲೇ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆಯಿದೆ. ಅದರಂತೆ, ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಹಾಗೂ ಭೂ ವಿಜ್ಞಾನ ಸಚಿವಾಲಯಗಳ ಪರಸ್ಪರ ಸಮನ್ವಯದೊಂದಿಗೆ ದಕ್ಷಿಣ ಕನ್ನಡ ಜಿಲ್ಲೆಗೆ ವಿಶೇಷವಾದ ಕರಾವಳಿ ಸಂರಕ್ಷಣಾ ಯೋಜನೆಯನ್ನು ರೂಪಿಸಬೇಕು. ಜತೆಗೆ, ಕರಾವಳಿ ಸಂರಕ್ಷಣೆಗೆ ತುರ್ತಾಗಿ ಕೈಗೊಳ್ಳಬೇಕಾದ ಮೀಸಲಾಗಿರುವ ಹಣಕಾಸಿನ ನೆರವನ್ನು ತಕ್ಷಣವೇ ಬಿಡುಗಡೆಗೊಳಿಸಬೇಕು. ಆ ಮೂಲಕ ಕರಾವಳಿ ತೀರದ ಕಡಲ್ಕೊರೆತಕ್ಕೆ ಶಾಶ್ವತ ಪರಿಹಾರ ಕೈಗೊಳ್ಳುವ ಮೂಲಕ ಮೀನುಗಾರರ ಬದುಕನ್ನು ಸುರಕ್ಷಿತಗೊಳಿಸಬೇಕು. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಈ ಕೂಡಲೇ ಮಧ್ಯಪ್ರವೇಶ ಮಾಡಿ ಸಮಸ್ಯೆ ಪರಿಹಾರಕ್ಕೆ ಕಾರ್ಯೋನ್ಮುಖವಾಗಬೇಕೆಂದು ಕ್ಯಾ. ಚೌಟ ಅವರು ಸದನದಲ್ಲಿ ಆಗ್ರಹಿಸಿದ್ದಾರೆ.

# ಸಾವರ್ಕರ್ ಕುರಿತ ಹೇಳಿಕೆ: ರಾಹುಲ್ ವಿರುದ್ಧದ ಮಾನನಷ್ಟ ಮೊಕದ್ದಮೆ ರದ್ದು

ನವದೆಹಲಿ, ಮಾ.12: ಭಾರತ್ ಜೋಡೋ ಯಾತ್ರೆಯ ಸಂದರ್ಭದಲ್ಲಿ (2022ರಲ್ಲಿ) ಹಿಂದುತ್ವ ಸಿದ್ಧಾಂತವಾದಿ ವಿನಾಯಕ ದಾಮೋದರ್ ಸಾವರ್ಕರ್ ಕುರಿತು ನೀಡಿದ್ದ ಹೇಳಿಕೆಗೆ ಸಂಬಂಧಿಸಿದಂತೆ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ವಿರುದ್ಧ ದಾಖಲಾಗಿದ್ದ ಮಾನನಷ್ಟ ಮೊಕದ್ದಮೆಯನ್ನು ನಾಸಿಕ್‌ನ ಕ್ರಿಮಿನಲ್ ನ್ಯಾಯಾಲಯ ಮುಕ್ತಾಯಗೊಳಿಸಿದೆ.

ನಾಸಿಕ್ ಮೂಲದ ನಿರ್ಭಯಾ ಫೌಂಡೇಶನ್ ಅಧ್ಯಕ್ಷ ದೇವೇಂದ್ರ ಭುತಡಾ ಅವರು ರಾಹುಲ್ ಗಾಂಧಿ ವಿರುದ್ಧ ದೂರು ದಾಖಲಿಸಿದ್ದರು. 2022ರ ಜೂನ್ 15, 16ರಂದು ಹಿಂಗೋಲಿ ಮತ್ತು ಅಕೋಲಾದಲ್ಲಿ ನಡೆದ ರ್‍ಯಾಲಿಗಳಲ್ಲಿ ರಾಹುಲ್ ಗಾಂಧಿ ನೀಡಿದ್ದ ಹೇಳಿಕೆಗಳು ಮಾನಹಾನಿಕರ ಮತ್ತು ಅವಹೇಳನಕಾರಿಯಾತ್ತು ಎಂದು ಅವರು ಆರೋಪಿಸಿದ್ದರು.

ಸೆಕ್ಷನ್ 499 (ಮಾನನಷ್ಟ) ಮತ್ತು 504 ಅಡಿಯಲ್ಲಿ ಪೊಲೀಸರು ಪ್ರಕರಣ ದಾಖಲಿಸಿದ್ದರು. ನಾಸಿಕ್ ನ್ಯಾಯಾಲಯ ಸೆಪ್ಟೆಂಬರ್ 2024ರಲ್ಲಿ ರಾಹುಲ್ ಗಾಂಧಿಯವರಿಗೆ ಸಮನ್ಸ್ ಜಾರಿ ಮಾಡಿತ್ತು.ನಂತರ ಜಾಮೀನು ಮಂಜೂರು ಮಾಡಿದ್ದ ನ್ಯಾಯಾಲಯ, ವರ್ಚುವಲ್ ಮೂಲಕ ವಿಚಾರಣೆಗೆ ಹಾಜರಾಗಲು ಅನುಮತಿ ನೀಡಿತ್ತು. ಈ ಸಂದರ್ಭದಲ್ಲಿ ರಾಹುಲ್ ಗಾಂಧಿ ತಮ್ಮ ಮೇಲಿನ ಆರೋಪಗಳನ್ನು ನಿರಾಕರಿಸಿದ್ದರು.

ಸೆಪ್ಟೆಂಬರ್ 2024ರಲ್ಲಿ ನ್ಯಾಯಾಲಯವು ಕ್ರಿಮಿನಲ್ ಪ್ರಕ್ರಿಯಾ ಸಂಹಿತೆಯ ಸೆಕ್ಷನ್ 202ರ ಅಡಿಯಲ್ಲಿ ಪ್ರಕರಣದ ತನಿಖೆಗೆ ಆದೇಶಿಸಿತ್ತು. ಪೊಲೀಸರು ತಮ್ಮ ವರದಿಯನ್ನು ಸಲ್ಲಿಸಿದ ನಂತರ, ದೂರುದಾರರು ಪ್ರಕರಣವನ್ನು ಹಿಂಪಡೆಯಲು ಮುಂದಾದರು. ಹಾಗಾಗಿ, ವಿಚಾರಣಾ ನ್ಯಾಯಾಧೀಶರು ಮಾನನಷ್ಟ ಮೊಕದ್ದಮೆ ವಿಚಾರಣೆಯನ್ನು ಮುಕ್ತಾಯಗೊಳಿಸಿದರು.

# ಎಸ್‌ಎನ್‌ಡಿಪಿ ಪ್ರ.ಕಾರ್ಯದರ್ಶಿ ಹುದ್ದೆಯಿಂದ ವೆಳ್ಳಾಪ್ಪಳ್ಳಿ ನಟೇಶನ್ ಅನರ್ಹ

**ತಿರುವನಂತಪುರ, ಮಾ.12:** ಶ್ರೀ ನಾರಾಯಣ ಧರ್ಮ ಪರಿಪಾಲನ ಯೋಗಂ (ಎಸ್‌ಎನ್‌ಡಿಪಿ ಯೋಗಂ)ನ ಪ್ರಧಾನ ಕಾರ್ಯದರ್ಶಿ ಮತ್ತು ಮತ್ತು ಎಸ್‌ಎನ್ ಟ್ರಸ್ಟ್‌ನ ಕಾರ್ಯದರ್ಶಿ ಸ್ಥಾನದಿಂದ ವೆಳ್ಳಾಪ್ಪಳ್ಳಿ ನಟೇಶನ್ ಅವರನ್ನು ಕೇರಳ ಹೈಕೋರ್ಟ್ ಗುರುವಾರ (ಮಾ.12) ಅನರ್ಹಗೊಳಿಸಿದ್ದು, ಕಾರ್ಪೊರೇಟ್ ನಿಯಮಗಳನ್ನು ಉಲ್ಲಂಘಿಸಿದ್ದಕ್ಕಾಗಿ 170 ಪದಾಧಿಕಾರಿಗಳ ಸಂಪೂರ್ಣ ಮಂಡಳಿಯನ್ನು ವಜಾ ಮಾಡಿದೆ ಎಂದು ವರದಿಯಾಗಿದೆ. ಕೇರಳದ ಪ್ರಭಾವಿ ಈಳವ ಸಮುದಾಯದ ಪ್ರಮುಖ ಸಾಮಾಜಿಕ ಸಂಘಟನೆಯಾದ ಎಸ್‌ಎನ್‌ಡಿಪಿ ಯೋಗಂ ಅನ್ನು ನಟೇಶನ್ ಕಳೆದ 25 ವರ್ಷಗಳಿಗೂ ಹೆಚ್ಚು ಸಮಯದಿಂದ ಮುನ್ನಡೆಸಿದ್ದಾರೆ. ಬರಹಗಾರ ಎಂ.ಕೆ. ಸಾನು ಮತ್ತು ಎಸ್‌ಎನ್‌ಡಿಪಿ ಸಂರಕ್ಷಣಾ ಸಮಿತಿಯ ಅಧ್ಯಕ್ಷ ಎಸ್. ಚಂದ್ರಸೇನನ್ ಅವರು ಸಲ್ಲಿಸಿದ ಅರ್ಜಿಗಳಿಗೆ ಸಂಬಂಧಿಸಿದೆ ನ್ಯಾಯಮೂರ್ತಿ ಸಿ.ಟಿ. ರವಿಕುಮಾರ್ ಅವರ ಪೀಠವು ಆದೇಶ ನೀಡಿದೆ. ಈ ಅರ್ಜಿದಾರರು ವ್ಯವಸ್ಥೆಯಲ್ಲಿನ ಗಂಭೀರ ಅಕ್ರಮಗಳನ್ನು ಎತ್ತಿ ತೋರಿಸಿದ್ದರು. ನಟೇಶನ್ ಜೊತೆಗೆ ಮಂಡಳಿಯ ಉಪಾಧ್ಯಕ್ಷನಾಗಿರುವ ಅವರ ಮಗರ ತುಷಾರ್ ವೆಳ್ಳಾಪ್ಪಳ್ಳಿ, ಅಧ್ಯಕ್ಷ ಎಂ.ಎನ್. ಸೋಮನ್, ದೇವಸ್ವಂ ಕಾರ್ಯದರ್ಶಿ ಅರಾಯಕಂಡಿ ಸಂತೋಷ್ ಮತ್ತು ಇತರರು ಅನರ್ಹಗೊಂಡ ಪ್ರಮುಖರು. ಕಾರ್ಪೊರೇಟ್ ವ್ಯವಹಾರಗಳ ಸಚಿವಾಲಯದಅಡಿಯಲ್ಲಿ ನೋಂದಾಯಿಸಲ್ಪಟ್ಟಿರುವ ಎಸ್‌ಎನ್‌ಡಿಪಿ ಯೋಗಂ, 2014 ರಿಂದ, ಅಂದರೆ 9 ವರ್ಷಗಳಿಂದ ತನ್ನ ವಾರ್ಷಿಕ ಹಣಕಾಸು ವರದಿಗಳನ್ನು ಸಲ್ಲಿಸಲು ವಿಫಲವಾಗಿದೆ ಎಂದು ನ್ಯಾಯಾಲಯ ಹೇಳಿದೆ.

# ಜಿಬಿಎ ವ್ಯಾಪ್ತಿಯಲ್ಲಿ ಹಳೆಯದರ ಜತೆಗೆ 441 ಹೊಸ ಶೌಚಾಲಯ ನಿರ್ಮಾಣ: ಡಿ.ಕೆ. ಶಿವಕುಮಾರ್



**ಬೆಂಗಳೂರು, ಮಾ.12:** ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ 388 ಹಳೆಯ ಶೌಚಾಲಯಗಳ ಜತೆಗೆ ಹೊಸದಾಗಿ 441 ಶೌಚಾಲಯ ಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.

ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯೆ ಆರತಿ ಕೃಷ್ಣ ಅವರು ಜಿಬಿಎ ವ್ಯಾಪ್ತಿಯ ಸಾರ್ವಜನಿಕ ಶೌಚಾಲಯಗಳು ಬಳಕೆಗೆ ಯೋಗ್ಯವಿಲ್ಲ, ಜನಸ್ನೇಹಿ ಯಾಗಿಲ್ಲ, ಎಐ ಬಳಸಿ ಸ್ವಚ್ಛತೆ ಪರಿಶೀಲನೆ ಮಾಡಬೇಕು ಎಂದು ಕೇಳಿದಾಗ ಶಿವಕುಮಾರ್ ಅವರು ಗುರುವಾರ ಉತ್ತರಿಸಿದರು.

"ನಗರದಾದ್ಯಂತ 380 ಸಾರ್ವಜನಿಕ ಶೌಚಾಲಯಗಳಿವೆ. 65 ಶೌಚಾಲಯಗಳನ್ನು ನಿವೃತ್ತ ಪೌರ ಕಾರ್ಮಿಕರಿಗೆ ನಡೆಸಲು ನೀಡಿದ್ದೇವೆ. 20 ಶೌಚಾಲಯಗಳನ್ನು ವಿಶೇಷ ಚೇತನರು ನಡೆಸುತ್ತಿದ್ದಾರೆ. ಶುಭ್ರ ಬೆಂಗಳೂರು ಯೋಜನೆ ಅಡಿ 60 ಶೌಚಾಲಯಗಳನ್ನು ನಿರ್ಮಾಣ ಮಾಡಲಾಗುವುದು. 191 ಶೌಚಾಲಯ ಗಳು ಹೊಸದಾಗಿ ನಿರ್ಮಾಣವಾಗುತ್ತಿವೆ. ಸ್ವಚ್ಛ ಭಾರತ ಮಿಷನ್ ಅಡಿ ಕೇಂದ್ರ ಸರ್ಕಾರ 13.5 ಕೋಟಿ ಹಣ ನೀಡಿದ್ದಾರೆ. ಅದರಲ್ಲಿ 90 ಶೌಚಾಲಯ ನಿರ್ಮಿಸುತ್ತಿದ್ದು, ಬ್ರಾಂಡ್ ಬೆಂಗಳೂರು ಯೋಜನೆಯಡಿ 100 ಶೌಚಾಲಯ ನಿರ್ಮಾಣ ಮಾಡಲಾಗುತ್ತಿದೆ. ಇದು ಮಹಿಳೆಯರಿಗಾಗಿ ನಿರ್ಮಾಣ ಮಾಡಲಾಗುತ್ತಿದೆ.

441 ಹೊಸ ಶೌಚಾಲಯಗಳು ಹಾಗೂ 388 ಹಳೆಯ ಶೌಚಾಲಯ ಗಳಿವೆ. ಇವುಗಳ ಜತೆಗೆ ಯಾವು ದಾದರೂ ನಿರ್ದಿಷ್ಟ ಸ್ಥಳಗಳಲ್ಲಿ ಶೌಚಾಲಯಗಳ ಅಗತ್ಯತೆ ಬಗ್ಗೆ ನಮ್ಮ ಗಮನಕ್ಕೆ ತಂದರೆ ಅಲ್ಲೂ ಜಾಗ ಲಭ್ಯತೆ ನೋಡಿಕೊಂಡು, ಶೌಚಾಲಯ ನಿರ್ಮಾಣ ಮಾಡಲಾ ಗುವುದು ಎಂದು ತಿಳಿಸಿದರು.

## ರಾಜ್ಯದಲ್ಲಿ ಅಡುಗೆ ಅನಿಲ ಸುಗಮ ಪೂರೈಕೆಗೆ ಕ್ರಮ

# ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆ ವದಂತಿಗಳಿಗೆ

### ಕಿವಿಗೊಡಬೇಡಿ: ಆಹಾರ, ನಾಗರಿಕ ಸರಬರಾಜು ಇಲಾಖೆ ಸ್ಪಷ್ಟನೆ

**ಬೆಂಗಳೂರು, ಮಾ.12:** ರಾಜ್ಯದಲ್ಲಿ ಇತ್ತೀಚಿನ ದಿನಗಳಲ್ಲಿ ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆಯಲ್ಲಿ ವ್ಯತ್ಯಯವಾಗಬಹುದು ಎಂಬ ಆತಂಕ ಸಾರ್ವಜನಿಕರಲ್ಲಿ ಕಂಡು ಬರುತ್ತಿರುವ ಹಿನ್ನೆಲೆಯಲ್ಲಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯು ಸ್ಪಷ್ಟನೆ ನೀಡಿದೆ.

**ಸಾಕಷ್ಟು ದಾಸ್ತಾನು ಲಭ್ಯತೆ:** ರಾಜ್ಯ ಸರ್ಕಾರವು ಪ್ರಮುಖ ತೈಲ ಕಂಪನಿಗಳಾದ ಐಓಸಿ, ಬಿಪಿಸಿ ಮತ್ತು ಎಚ್.ಪಿ.ಸಿ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿತು. ರಾಜ್ಯದಾದ್ಯಂತ ಎಲ್‌ಪಿಜಿ ಸಿಲಿಂಡರ್‌ಗಳ ಪೂರೈಕೆಯಲ್ಲಿ ಯಾವುದೇ ಕೊರತೆಯಿಲ್ಲ ಮತ್ತು ಮುಂಬರುವ ದಿನಗಳಿಗೂ ಸರಿ ಹೊಂದುವಷ್ಟು ಸಾಕಷ್ಟು ದಾಸ್ತಾನು ಲಭ್ಯವಿದೆ ಎಂದು ತೈಲ ಕಂಪನಿಗಳು ದೃಢಪಡಿಸಿವೆ.

**ಆತಂಕ ಬೇಡ:** ಎಲ್‌ಪಿಜಿ ಸಿಲಿಂಡರ್‌ಗಳ ಕೊರತೆಯ ಬಗ್ಗೆ ಹರಡುತ್ತಿರುವ ಯಾವುದೇ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು. ಸಿಲಿಂಡರ್‌ಗಳ ಕೊರತೆಯಾಗಬಹುದು ಎಂಬ ಆತಂಕದಿಂದ ಸಾರ್ವಜನಿಕರು ಅನಗತ್ಯವಾಗಿ ಸಿಲಿಂಡರ್‌ಗಳನ್ನು ಮುಂಗಡವಾಗಿ ಬುಕ್ ಮಾಡುವುದು ಅಥವಾ ಸಂಗ್ರಹಿಸಿಡುವುದನ್ನು ಮಾಡಬಾರದು. ಮಾರುಕಟ್ಟೆಯಲ್ಲಿ ಕೃತಕ ಅಭಾವ ಸೃಷ್ಟಿಯಾಗದಂತೆ ಸಹಕರಿಸಬೇಕೆಂದು ಕೋರಿದೆ.

**ಆದ್ಯತಾ ವಲಯಗಳಿಗೆ ಪೂರೈಕೆ:** ಸಾರ್ವಜನಿಕ ಹಿತದೃಷ್ಟಿಯಿಂದ ಹಾಗೂ ಅಗತ್ಯ ಸೇವೆಗಳಾದ ಸರ್ಕಾರಿ ಆಸ್ಪತ್ರೆಗಳು ಮತ್ತು ಖಾಸಗಿ ಆರೋಗ್ಯ ಕೇಂದ್ರಗಳು, ವಿದ್ಯಾರ್ಥಿನಿಲಯಗಳು ಮತ್ತು ಅಂಗನವಾಡಿ ಕೇಂದ್ರಗಳು, ಶಾಲೆಗಳು ಮತ್ತು ಕಾಲೇಜುಗಳ ಬಿಸಿಯೂಟ ಯೋಜನೆಗಳು ಮತ್ತು ಕಾರಾಗೃಹಗಳು ಮತ್ತು ಇತರ ಸರ್ಕಾರಿ ಸಂಸ್ಥೆಗಳಿಗೆ, ಎಲ್‌ಪಿಜಿ ಪೂರೈಕೆಯಲ್ಲಿ ಯಾವುದೇ ತೊಂದರೆಯಾಗದಂತೆ ಹಾಗೂ ವ್ಯತ್ಯಯವಾಗದಂತೆ ಕ್ರಮ ವಹಿಸಲು ತೈಲ ಕಂಪನಿಗಳಿಗೆ ಸೂಚಿಸಿದೆ.

**ಕಾನೂನು ಕ್ರಮದ ಎಚ್ಚರಿಕೆ:** ಅನಧಿಕೃತವಾಗಿ ಗ್ಯಾಸ್ ಸಿಲಿಂಡರ್ ಗಳನ್ನು ಸಂಗ್ರಹಿಸಿಡುವುದು, ಕಾಳಸಂತೆ ಯಲ್ಲಿ ಮಾರಾಟ ಮಾಡುವುದು ಅಥವಾ ರೀಫಿಲ್ಲಿಂಗ್ ದಂಧೆಯಲ್ಲಿ ತೊಡಗುವುದು ಕಂಡುಬಂದಲ್ಲಿ ಅಗತ್ಯ ವಸ್ತುಗಳ ಕಾಯ್ದೆ, ಎಲ್.ಪಿ.ಜಿ ಕಂಟ್ರೋಲ್ ಆರ್ಡರ್ ಮತ್ತು ಪೆಟ್ರೋಲಿಯಂ ಪ್ರಾಡಕ್ಟ್ 1999 ರ ಕಾಯ್ದೆಗಳ ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದೆ.

**ಜಿಲ್ಲಾಡಳಿತಕ್ಕೆ ಸೂಚನೆ:** ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ತಮ್ಮ ವ್ಯಾಪ್ತಿಯಲ್ಲಿ ಎಲ್‌ಪಿಜಿ ವಿತರಣಾ ಕೇಂದ್ರಗಳ ಮೇಲೆ ನಿಗಾ ಇಡಲು ಮತ್ತು ಸುಗಮ ಪೂರೈಕೆಯನ್ನು ಖಚಿತಪಡಿಸಿಕೊಳ್ಳಲು ನಿರ್ದೇಶನ ನೀಡಲಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.

## ಸೌದೆ ಒಲೆ ಮೊರೆಹೋದ ಹೋಟೆಲ್, ಬೇಕರಿ ಮಾಲೀಕರು

# ಅಡುಗೆ ಅನಿಲ ಸಿಲಿಂಡರ್ ಸಿಗದೆ ಕೇಟರಿಂಗ್, ಮದುವೆ ಸಮಾರಂಭಗಳಿಗೂ ತೊಂದರೆ



**ಬೆಂಗಳೂರು, ಮಾ.12:** ಪಶ್ಚಿಮ ಏಷ್ಯಾದಲ್ಲಿ ಯುದ್ಧ ನಡೆಯುತ್ತಿರುವ ಹಿನ್ನೆಲೆಯಲ್ಲಿ ಅಡುಗೆ ಅನಿಲ ಸರಬರಾಜಿನಲ್ಲಿ ದಿನದಿಂದ ದಿನಕ್ಕೆ ಕೊರತೆ ತೀವ್ರವಾಗಿದೆ. ಇದರಿಂದ ಹೋಟೆಲ್, ಕೇಟರಿಂಗ್, ಮದುವೆ ಸಮಾರಂಭ ಸೇರಿ ಇತರ ಕಾರ್ಯಕ್ರಮ ಗಳಿಗೆ ತೊಂದರೆ ಯಾಗಿದೆ. ಬೆಂಗಳೂರಿನ ಕೆಲವೆಡೆ ಹೋಟೆಲ್‌ಗಳು ಮತ್ತು ಬೇಕರಿ ಮಾಲೀಕರು ಅಡುಗೆ ತಯಾರಿಸಲು ಸೌದೆ ಒಲೆಗೆ ಮೊರೆ ಹೋಗಿದ್ದಾರೆ.

ದುಡ್ಡು ಕೊಟ್ಟರೂ ಸಿಲಿಂಡರ್‌ಗಳು ಸಿಗದ ಪರಿಸ್ಥಿತಿ ಎದುರಾಗಿದೆ. ಅಡುಗೆ ಅನಿಲ ಸಿಗದೆ ಹೋಟೆಲ್ ಉದ್ಯಮ ಕಂಗಾಲಾಗಿದೆ. ರಾಜ್ಯದ ಹಲವೆಡೆ ಹೋಟೆಲ್‌ಗಳು ಬಂದ್ ಆಗುವ ಪರಿಸ್ಥಿತಿ ಎದುರಾಗಿದ್ದು ಪರಿಸ್ಥಿತಿ ಬಿಗಾಡಾಯಿಸುವ ಹಂತ ತಲುಪಿದೆ.ಈಗ ಮದುವೆ ಸುಗ್ಗಿಯಾಗಿ ರುವುದರಿಂದ ತಿಂಗಳುಗಳ ಮುಂಚಿತವಾಗಿಯೇ ಕಲ್ಯಾಣ ಮಂಟಪ ಬುಕ್ ಮಾಡಿದ್ದರೂ ಸಿಲಿಂಡರ್ ದೊರೆಯದ ಕಾರಣ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿವೆ. ಸಿಲಿಂಡರ್ ಸರಬರಾಜು ಮಾಡು ವಂತೆ ಹೋಟೆಲ್, ಕಲ್ಯಾಣ ಮಂಟಪ ಮಾಲೀಕರು, ಕೇಟರಿಂಗ್ ನಡೆಸುವವರು ಗ್ಯಾಸ್ ಏಜೆನ್ಸಿ ಮಾಲೀಕರಿಗೆ ದುಂಬಾಲು ಬೀಳುತ್ತಿದ್ದಾರೆ.

ಕೇಂದ್ರ ಸರ್ಕಾರ ವಾಣಿಜ್ಯ ಎಲ್‌ಪಿಜಿ ಪೂರೈಕೆಗೆ ಹಲವು ಕ್ರಮ ಕೈಗೊಂಡಿದ್ದರೂ ಪರಿಸ್ಥಿತಿ ಸುಧಾರಿಸುವ ಸಾಧ್ಯತೆ ಕಂಡು ಬರುತ್ತಿಲ್ಲ. ಕೆಲವೊಂದು ಸಣ್ಣ ಪುಟ್ಟ ಹೋಟೆಲ್ ಮತ್ತು ಬೇಕರಿ ಅಂಗಡಿಗಳ ಮಾಲೀಕರು ಸೌದೆ ಒಲೆಗೆ ಮೊರೆ ಹೋಗಿದ್ದಾರೆ. ಕೆಲವೆಡೆ ಸೌದೆ ಬಳಸಿ, ಆಹಾರ ಪದಾರ್ಥಗಳನ್ನು ಸಿದ್ಧಪಡಿಸಿರುವ ದೃಶ್ಯ ಕಂಡು ಬಂದಿದೆ.

ಈಗಾಗಲೇ ಬುಕ್ ಆಗಿರುವ ಮದುವೆ ಹಾಗೂ ಶುಭ ಸಮಾ ರಂಭಗಳಿಗೆ ಸೌದೆ ಬಳಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ನಗರ ಪ್ರದೇಶಗಳಲ್ಲಿ ಈ ಸೌದೆ ಬಳಕೆ ಕಡಿಮೆಯಾಗಿದೆ. ಆದರೆ ಈಗ ಅಡುಗೆ ಅನಿಲ ಪೂರೈಕೆಯಲ್ಲಿ ಭಾರಿ ವ್ಯತ್ಯಯವಾಗಿರುವ ಹಿನ್ನೆಲೆ ಯಲ್ಲಿ ಅನ್ಯಮಾರ್ಗವಿಲ್ಲದೆ ಸೌದೆ ಒಲೆಗೆ ಮೊರೆ ಹೋಗು ವಂತಾಗಿದೆ.

ಪಂಚತಾರಾ ಹೋಟೆಲ್‌ಗಳಿಗೂ ಸಿಲಿಂಡರ್ ಸರಬರಾಜಿನ ಹೊಡೆತ ತಟ್ಟಿದೆ. ಸಿಲಿಂಡರ್ ಗಳಿಲ್ಲದೆ ಅಡುಗೆ ಸಿದ್ಧಪಡಿಸಲು ಬಾಣಸಿಗರು ಪರದಾಡುವಂತಾಗಿದೆ. ಪಂಚತಾರಾ ಹೋಟೆಲ್‌ಗಳಲ್ಲಿ ಸೌದೆ ಒಲೆ ಬಳಸಲು ಸಾಧ್ಯವಾಗುತ್ತಿಲ್ಲ.

ಸೌದೆಗಳನ್ನು ಬಳಸಿದರೆ ದಟ್ಟ ಹೊಗೆ ಆವರಿಸುತ್ತದೆ. ಹೀಗಾಗಿ ಪಂಚತಾರಾ ಹೋಟೆಲ್ ಗಳು ಅಡುಗೆಗೆ ಸೌದೆ ಬಳಸಲು ಹಿಂದೇಟು ಹಾಕುತ್ತಿವೆ. ಪರಿಸ್ಥಿತಿ ಹೀಗೆ ಮುಂದುವರಿದರೆ ಹೋಟೆಲ್ ಉದ್ಯಮದ ಮೇಲೆ ಗಂಭೀರ ಪರಿಣಾಮ ಬೀರಲಿದೆ.

# ಸೌದೆ ಒಲೆ ಬಳಕೆಗೆ ಅವಕಾಶ ನೀಡಲ್ಲ: ಡಿಕೆಶಿ



ಬೇರೆ ವಿಚಾರಗಳಲ್ಲಿ ಮಾತನಾಡುವ ಸಂಸದರು ಅಡುಗೆ ಅನಿಲ ಕೊರತೆ ವಿಚಾರವಾಗಿ ಸಂಸತ್ತಿನಲ್ಲಿ ಮಾತನಾಡಬೇಕು. ರಾಜ್ಯಕ್ಕೆ ನ್ಯಾಯ ಒದಗಿಸಿಕೊಡಬೇಕು" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು. ಸದಾಶಿವನಗರ ನಿವಾಸದ ಬಳಿ ಮಾಧ್ಯಮಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು. "ಅಡುಗೆ ಅನಿಲ ಸಿಲಿಂಡರ್ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತಿದೆ. ಈ ವಿಚಾರವಾಗಿ ಬಿಜೆಪಿಯ ಯಾವುದೇ ಸಂಸದರು ಬಾಯಿ ಬಿಡುತ್ತಿಲ್ಲ. ಹಳ್ಳಿ ಜನರು, ರೈತರು ಹಾಗೂ ಹೋಟೇಲ್‌ಗಳಿಗೆ ಸೌದೆ ಒಲೆ ಬಳಸಲು ಕಟ್ಟಿಗೆ ಬಳಸಿಕೊಳ್ಳಲು ಅವಕಾಶ ನೀಡುವುದಿಲ್ಲ"

"ಈ ಇಂಧನ ಬೆಲೆ ಏರಿಕೆಯಿಂದ ಜನ ಪರದಾಡುತ್ತಿದ್ದಾರೆ. ಇದರಲ್ಲಿ ರಾಜ್ಯ ಸರ್ಕಾರ ಏನೂ ಮಾಡಲು ಆಗುವುದಿಲ್ಲ. ಕೇಂದ್ರ ಸರ್ಕಾರ ಇದಕ್ಕೆ ಹೊಣೆ. ಕೇಂದ್ರದ ವಿದೇಶಾಂಗ ನೀತಿ ಬಗ್ಗೆ ಸ್ಪಷ್ಟವಾಗಿ ಮಾತನಾಡುತ್ತಿಲ್ಲ" ಎಂದು ಆಕ್ರೋಶ ವ್ಯಕ್ತಪಡಿಸಿದರು. "ಈ ವಿಚಾರದಲ್ಲಿ ಕೇಂದ್ರದ ಧೋರಣೆ ಖಂಡನೀಯ. ನಾಗರಕರಿಗೆ ಅನುಕೂಲವಾಗುವಂತೆ ಕೇಂದ್ರ ಸರ್ಕಾರ ನೋಡಿಕೊಳ್ಳಬೇಕು. ಮುಂದೆ ಪರಿಸ್ಥಿತಿ ಹೇಗಿರುತ್ತದೆಯೋ ಹೇಗೋ ಈಗಾಗಲೇ ಗ್ಯಾಸ್‌ಚಾಲಿತ ಆಟೋ ಬಂದ್ ಆಗಿದ್ದು, ಸಮಸ್ಯೆ ಹೆಚ್ಚುತ್ತಿದೆ" ಎಂದು ತಿಳಿಸಿದರು.

### ಅನಿಲ ಸಿಲಿಂಡರ್ ಕೃತಕ ಅಭಾವ ಸೃಷ್ಟಿಸುವವರು ಹಾಗೂ ಕಾಳಸಂತೆ ಮಾರಾಟದ ವಿರುದ್ಧ ಪೊಲೀಸರ ಕಾರ್ಯಾಚರಣೆ

**ಬೆಂಗಳೂರು, ಮಾ.12:** ಮಧ್ಯಪ್ರಾಚ್ಯ ಯುದ್ಧದ ಪರಿಣಾಮ ದೇಶದಲ್ಲಿ ಅನಿಲ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುತ್ತಿರುವುದರಿಂದ ಕಮರ್ಷಿಯಲ್ ಸಿಲಿಂಡರ್‌ಗಳ ಕೃತಕ ಅಭಾವ ಸೃಷ್ಟಿಸುವವರು ಮತ್ತು ಕಾಳಸಂತೆಯಲ್ಲಿ ಮಾರಾಟ ಮಾಡುವವರ ವಿರುದ್ಧ ಪೊಲೀಸರು ಕಾರ್ಯಾಚರಣೆ ಆರಂಭಿಸಿದ್ದಾರೆ.

ಅಂತರಾಷ್ಟ್ರೀಯ ಮಟ್ಟದ ಉದ್ವಿಗ್ನತೆ ಯಿಂದಾಗಿ ದೇಶದಲ್ಲಿ ಅನಿಲ ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಲು ಬೆಂಗಳೂರು ಸೇರಿದಂತೆ ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗಳಿಗೆ ಡಿಜಿ-ಐಜಿಪಿ ಡಾ.ಎಂ.ಎ.ಸಲೀಂ ಅವರು ಸ್ಪಷ್ಟ ನಿರ್ದೇಶನ ನೀಡಿದ್ದಾರೆ.

ಇದರ ಬೆನ್ನಲ್ಲೇ, ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಪ್ರತಿಯೊಂದು ಗ್ಯಾಸ್ ಗೋದಾಮುಗಳಿಗೆ ಹೊಯ್ಸಳ ಸಿಬ್ಬಂದಿ ಭೇಟಿ ನೀಡಿ ತಪಾಸಣೆ ನಡೆಸುತ್ತಿದ್ದಾರೆ. ಪಿಎಸ್‌ಐ ಮಟ್ಟದ ಅಧಿಕಾರಿಗಳು ಖುದ್ದು ತೆರಳಿ ನಗರದ ಎಲ್ಲಾ ಗೋದಾಮುಗಳಲ್ಲಿ ಲಭ್ಯವಿರುವ ಸಿಲಿಂಡರ್‌ಗಳ ಸಂಖ್ಯೆ, ಬಂದಿರುವ ಆರ್ಡರ್‌ಗಳು ಮತ್ತು ವಿತರಣೆಯ ಸಮಗ್ರ ವರದಿ ಸಿದ್ಧಪಡಿಸುವಂತೆ ಆಯುಕ್ತರು ಸೂಚಿಸಿದ್ದಾರೆ.

ಗೋದಾಮಿನಿಂದ ಗ್ರಾಹಕರಿಗೆ ಸಿಲಿಂಡರ್ ತಲುಪುವವರೆಗಿನ ಪ್ರಕ್ರಿಯೆಯ ಮೇಲೆ ನಿರಂತರವಾಗಿ ನಿಗಾ ವಹಿಸುತ್ತಿರುವ ಪೊಲೀಸರು, ನಿಗದಿಗಿಂತ ಹೆಚ್ಚಿನ ದರಕ್ಕೆ ಸಿಲಿಂಡರ್ ಮಾರಾಟ ಮಾಡಿದರೆ, ಕೃತಕ ಅಭಾವ ಸೃಷ್ಟಿಸಿದರೆ ಪ್ರಕರಣ ದಾಖಲಿಸಿ ಕೊಳ್ಳುವುದಾಗಿ ಎಚ್ಚರಿಸಿದ್ದಾರೆ.

ಗ್ಯಾಸ್ ಏಜೆನ್ಸಿಗಳು ಅಕ್ರಮವಾಗಿ ಹೆಚ್ಚಿನ ಹಣ ವಸೂಲಿ ಮಾಡುತ್ತಿದ್ದರೆ ಅಥವಾ ಸಿಲಿಂಡರ್ ಇಲ್ಲವೆಂದು ಸುಳ್ಳು ಹೇಳುತ್ತಿದ್ದರೆ ತಕ್ಷಣವೇ ನಿಮ್ಮ ವ್ಯಾಪ್ತಿಯ ಪೊಲೀಸ್ ಠಾಣೆಗೆ ಮಾಹಿತಿ ನೀಡಿ ಎಂದು ಇದೇ ಸಂದರ್ಭದಲ್ಲಿ ಪೊಲೀಸರು ತಿಳಿಸಿದ್ದಾರೆ.



ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಗುರುವಾರ ಆಂತರಿಕ ಮೀಸಲಾತಿ ವಿಷಯಗಳ ಕುರಿತು ಓಲಾ ಮೀಸಲಾತಿ ಹೋರಾಟ ಸಮಿತಿ ಸದಸ್ಯರು ಧರಣಿ ನಡೆಸಿದರು.

## ಎಚ್‌ಡಿಕೆ ವಿರುದ್ಧ ಎಡಿಜಿಪಿ ಚಂದ್ರಶೇಖರ್ ದೂರು ಪ್ರಕರಣ

# ಸಮಸ್ಯೆ ಇತ್ಯರ್ಥಕ್ಕೆ ಮಧ್ಯಸ್ಥಿಕೆದಾರರನ್ನು ನೇಮಿಸುವಂತೆ ಹೈಕೋರ್ಟ್ ಆದೇಶ




**ಬೆಂಗಳೂರು, ಮಾ.12:** ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಲೋಕಾಯುಕ್ತ ಎಡಿಜಿಪಿ ಎಫ್‌ಐಆರ್ ಹಿನ್ನೆಲೆಯಲ್ಲಿ ಸಮಸ್ಯೆ ಇತ್ಯರ್ಥಕ್ಕೆ ಮಧ್ಯಸ್ಥಿಕೆದಾರರನ್ನು ನೇಮಿಸುವಂತೆ ಹೈಕೋರ್ಟ್ ಸೂಚನೆ ನೀಡಿದೆ. ಎಡಿಜಿಪಿ ಎಂ.ಚಂದ್ರಶೇಖರ್ ದಾಖಲಿಸಿದ್ದ ಪ್ರಕರಣ ರದ್ದು ಕೋರಿ ಎಚ್‌ಡಿಕೆ ಸಲ್ಲಿಸಿದ್ದ ಅರ್ಜಿ ವಿಚಾರಣೆ ಹೈಕೋರ್ಟ್‌ನಲ್ಲಿ ನಡೆಯಿತು. ರಾಜಿ ಸಂಧಾನದ ಮೂಲಕ ಪ್ರಕರಣ ಇತ್ಯರ್ಥಕ್ಕೆ ಹೈಕೋರ್ಟ್ ಸಲಹೆ ಹಿನ್ನೆಲೆಯಲ್ಲಿ ಕ್ಷಮೆಯಾಚನೆಯ ಪ್ರಮಾಣಪತ್ರ ಸಲ್ಲಿಸಬೇಕೆಂದು ಎಡಿಜಿಪಿ ಪರ ವಕೀಲರು ವಾದ ಮಂಡನೆ ಮಾಡಿದರು. ಇದಕ್ಕೆ ಎಚ್‌ಡಿಕೆ ಪರ ವಕೀಲರು ಆಕ್ಷೇಪ ವ್ಯಕ್ತಪಡಿಸಿದರು. ಈ ವೇಳೆ, ಸಮಸ್ಯೆ ಇತ್ಯರ್ಥಕ್ಕೆ ಮಧ್ಯಸ್ಥಿಕೆದಾರರನ್ನು ನೇಮಿಸಲು ಹೈಕೋರ್ಟ್ ಪ್ರಸ್ತಾಪ ಮಾಡಿ, ಈ ಬಗ್ಗೆ ನಿಲುವು ತಿಳಿಸಲು ಎರಡೂ ಕಡೆಯ ವಕೀಲರಿಗೆ ಸೂಚನೆ ನೀಡಿತು. ಅರ್ಜಿ ವಿಚಾರಣೆ ಮಾ.26ಕ್ಕೆ ಮುಂದೂಡಿದ ಹೈಕೋರ್ಟ್, ಅಲ್ಲಿಯವರೆಗೆ ಮಧ್ಯಂತರ ತಡೆಯಾಜ್ಞೆ ವಿಸ್ತರಿಸಿದೆ. ತನ್ನ ವಿರುದ್ಧ ಸುಳ್ಳು ಮತ್ತು ದುರುದ್ದೇಶಪೂರಿತ ಆರೋಪ ಮಾಡಿ, ಬೆದರಿಕೆ ಹಾಕಿದ್ದಾರೆ. ನಕಲಿ ವೈದ್ಯಕೀಯ ದಾಖಲೆ ಪಡೆದು ಕರ್ನಾಟಕ ಕೇಡರ್‌ಗೆ ಸೇರ್ಪಡೆ ಗೊಂಡಿದ್ದಾರೆ ಎಂದು ಕುಮಾರಸ್ವಾಮಿ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದ್ದರು.

ಅಲ್ಲದೇ, ಲಂಚ ಸ್ವೀಕರಿಸುತ್ತಿರುವುದಾಗಿ ಆರೋಪಿಸಿದ್ದು, ಈ ಸಂಬಂಧ ಸಂಜಯನಗರ ಪೊಲೀಸ್ ಠಾಣೆಯಲ್ಲಿ ಎಡಿಜಿಪಿ ಎಂ.ಚಂದ್ರಶೇಖರ್ ದೂರು ದಾಖಲಿಸಿದ್ದಾರೆ. ಈ ಪ್ರಕರಣ ರದ್ದು ಕೋರಿ ಎಚ್‌ಡಿಕೆ ಹೈಕೋರ್ಟ್ ಮೊರೆ ಹೋಗಿದ್ದಾರೆ.

# ಗೃಹಬಳಕೆ ವಿದ್ಯುತ್ ಅನ್ಯ ಉದ್ದೇಶಕ್ಕೆ ಬಳಸದಂತೆ ಜನತೆಗೆ ಬೆಸ್ಕಾಂ ಮನವಿ

**ಬೆಂಗಳೂರು, ಮಾ.12:** ಗೃಹ ಬಳಕೆ ಉದ್ದೇಶಕ್ಕಾಗಿ ಪಡೆದ ವಿದ್ಯುತ್ ಸಂಪರ್ಕವನ್ನು ವಾಣಿಜ್ಯ ಹಾಗೂ ಬೇರೆ ಉದ್ದೇಶಗಳಿಗೆ ಬಳಸಬಾರದು ಎಂದು ಬೆಸ್ಕಾಂ ತನ್ನ ಗ್ರಾಹಕರಿಗೆ ಮನವಿ ಮಾಡಿದೆ. ಗೃಹ ಬಳಕೆಗೆ ಪಡೆದ (ಎಲ್‌ಟಿ 1) ವಿದ್ಯುತ್ ಸಂಪರ್ಕವನ್ನು ಕೆಲವು ಗ್ರಾಹಕರು ಅಂಗಡಿ-ಮುಂಗಟ್ಟು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು, ಅತಿಥಿಗೃಹ, ಮೆಸ್, ಸರ್ವೀಸ್ ಅಪಾರ್ಟ್‌ಮೆಂಟ್, ಪೇಯಿಂಗ್ ಗೆಸ್ಟ್, ಕಚೇರಿ ಮುಂತಾದ ಉದ್ದೇಶಗಳಿಗೆ (ಎಲ್‌ಟಿ 1 ಸಂಪರ್ಕ) ಅನಧಿಕೃತವಾಗಿ ಬಳಸುತ್ತಿರುವುದು ಬೆಸ್ಕಾಂ ಗಮನಕ್ಕೆ ಬಂದಿದ್ದು, ಇಂತಹ ಸಂಪರ್ಕಗಳನ್ನು ತಕ್ಷಣವೇ ಕಡಿತಗೊಳಿಸಿ ಕಾನೂನು ಕ್ರಮ ಜರಗಿಸಲಾಗುವುದು ಎಂದು ಬೆಸ್ಕಾಂ ಎಚ್ಚರಿಸಿದೆ. ಗೃಹ ಬಳಕೆಯ ಉದ್ದೇಶಕ್ಕೆ ಪಡೆದ ವಿದ್ಯುತ್ ಸಂಪರ್ಕವನ್ನು ಅನ್ಯ ಉದ್ದೇಶಕ್ಕೆ ಬಳಸುತ್ತಿರುವ ಗ್ರಾಹಕರು, ತಕ್ಷಣವೇ ಬೆಸ್ಕಾಂ ಉಪ ವಿಭಾಗ ಕಚೇರಿಗೆ ಭೇಟಿ ನೀಡಿ ಸಮರ್ಪಕ ವಿದ್ಯುತ್ ದರ ವರ್ಗದ ಬದಲಾವಣೆಗೆ ಅರ್ಜಿ ಸಲ್ಲಿಸಿ ಸಂಪರ್ಕವನ್ನು ನಿಯಮಾನುಸಾರ ಪಡೆಯುವಂತೆ ಬೆಸ್ಕಾಂ ವಿನಂತಿಸಿದೆ. ಉತ್ಸವ, ಹಬ್ಬ, ಧಾರ್ಮಿಕ ಆಚರಣೆ ಸಂದರ್ಭದಲ್ಲಿ ಕೂಡ ಗೃಹ ಬಳಕೆಯ ವಿದ್ಯುತ್ ಸಂಪರ್ಕವನ್ನು ಬಳಸಿಕೊಳ್ಳದೆ, ಸಂಬಂಧಿತ ಉಪ ವಿಭಾಗ ಕಚೇರಿಗೆ ಅರ್ಜಿ ಸಲ್ಲಿಸಿ ತಾತ್ಕಾಲಿಕ ವಿದ್ಯುತ್ ಸಂಪರ್ಕ ಪಡೆಯಲು ಬೆಸ್ಕಾಂ ಗ್ರಾಹಕರಿಗೆ ಮನವಿ ಮಾಡಿದೆ. ಗೃಹಬಳಕೆಯ ವಿದ್ಯುತ್ ಸಂಪರ್ಕವನ್ನು ಅನ್ಯ ಉದ್ದೇಶಗಳಿಗೆ ಬಳಸುವವರ ವಿರುದ್ಧ ವಿದ್ಯುತ್ ಅಧಿನಿಯಮ, 2003ರ ಕಲಂ 126 ಮತ್ತು 135 ಹಾಗೂ ವಿದ್ಯುತ್ ಸರಬರಾಜು ನಿಯಮಗಳ ಕಲಂ 42 ಮತ್ತು ಅದರ ಉಪಕಲಂಗಳ ಅನ್ವಯ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಬೆಸ್ಕಾಂ ಎಚ್ಚರಿಸಿದೆ.

## ಉತ್ಪಾದಕರಿಗೆ ಬಮುಲ್‌ನಿಂದ ಯುಗಾದಿ ಕೊಡುಗೆ

# ಪ್ರತಿ ಲೀಟರ್ ಹಾಲಿಗೆ 1 ರೂ. ಪ್ರೋತ್ಸಾಹಧನ: ಡಿ.ಕೆ.ಸುರೇಶ್ ಘೋಷಣೆ




**ಬೆಂಗಳೂರು, ಮಾ.12:** ಹಾಲು ಉತ್ಪಾದಕರಿಗೆ ಬಮುಲ್ ಯುಗಾದಿ ಉಡುಗೊರೆ ಪ್ರಕಟಿಸಿದೆ. ಪ್ರತಿ ಲೀಟರ್ ಹಾಲಿಗೆ 1 ರೂ. ಪ್ರೋತ್ಸಾಹಧನವನ್ನು ಬಮೂಲ್ ಅಧ್ಯಕ್ಷ ಡಿ.ಕೆ. ಸುರೇಶ್ ಘೋಷಣೆ ಮಾಡಿದ್ದಾರೆ. ರೈತರಿಂದ 59, 39, 78,492 ಲೀಟರ್ ಹಾಲು ಖರೀದಿಸಿದ್ದೇವೆ. ಈ ಬಾರಿ 500 ಕೋಟಿ ಹೆಚ್ಚುವರಿ ಆದಾಯ ಮಾಡುವ ಗುರಿ ಇದ್ದು, ಕಾರ್ಮಿಕರಿಗೆ ಸುಮಾರು 6 ಕೋಟಿ ರೂಪಾಯಿ ಡಿಎ ಕೊಡಬೇಕು. ನಾವು ಸುಮಾರು 60 ಕೋಟಿ ಲಾಭಗಳಿಸುವ ಮಟ್ಟಿಗೆ ಬಂದಿದ್ದೇವೆ. ಹೀಗಾಗಿ ಸಿಬ್ಬಂದಿಗೆ ಬಾಕಿ ಇದ್ದ ಹಣ ಕೊಡಲು ತೀರ್ಮಾನಿಸಲಾಯಿತು. ಗುತ್ತಿಗೆದಾರರಿಗೆ 5000 ಬೋನಸ್ ಕೊಡುತ್ತೇವೆ. ಗುಣಮಟ್ಟದ ಹಾಲು ಕೊಡುವ ಗುರಿ ಇಟ್ಟುಕೊಂಡು ಕೆಲಸ ಮಾಡುತ್ತಿದ್ದೇವೆ ಎಂದು ಡಿ.ಕೆ. ಸುರೇಶ್ ತಿಳಿಸಿದ್ದಾರೆ.

ಹೈನುಗಾರಿಕೆಯಲ್ಲಿ ತೊಡಗಿರುವ ರೈತರಿಗೆ ಇದು ನಿಜಕ್ಕೂ ಸಿಹಿಸುದ್ದಿ. ಯುಗಾದಿ ಹಬ್ಬದ ಸಂದರ್ಭದಲ್ಲಿ ಬೆಂಗಳೂರು ಹಾಲು ಒಕ್ಕೂಟ (ಬಮುಲ್) ತನ್ನ ವ್ಯಾಪ್ತಿಯ ಹಾಲು ಉತ್ಪಾದಕರಿಗೆ ಪ್ರತಿಲೀಟರ್‌ಗೆ 1 ರೂಪಾಯಿ ಪ್ರೋತ್ಸಾಹಧನ ಹೆಚ್ಚಳ ಮಾಡುವ ಮೂಲಕ ಭರ್ಜರಿ ಉಡುಗೊರೆ ನೀಡಿದೆ.

**ಘೋಷಣೆಯ ಮುಖ್ಯಾಂಶಗಳು**

ಪ್ರೋತ್ಸಾಹಧನ ಹೆಚ್ಚಳ: ಪ್ರಸ್ತುತ ನೀಡಲಾಗುತ್ತಿರುವ ದರಕ್ಕಿಂತ ಹೆಚ್ಚುವರಿಯಾಗಿ ಪ್ರತಿ ಲೀಟರ್ ಹಾಲಿಗೆ 1.00 ರೂ. ಏರಿಕೆ ಮಾಡಲಾಗಿದೆ. ಮೇವಿನ ಬೆಲೆ ಏರಿಕೆ ಮತ್ತು ಬೇಸಿಗೆಯ ಹೈನುಗಾರಿಕೆಯ ಸವಾಲುಗಳ ನಡುವೆ ರೈತರಿಗೆ ಆರ್ಥಿಕ ನೆರವು ನೀಡುವುದು ಇದರ ಉದ್ದೇಶ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಮತ್ತು ರಾಮನಗರ ಜಿಲ್ಲೆಗಳ ಲಕ್ಷಾಂತರ ಹಾಲು ಉತ್ಪಾದಕರಿಗೆ ಈ ನಿರ್ಧಾರದ ಲಾಭ ಸಿಗಲಿದೆ. ಸಾಮಾನ್ಯವಾಗಿ ಬೇಸಿಗೆಯಲ್ಲಿ ಹಾಲಿನ ಉತ್ಪಾದನೆ ಕುಸಿಯುತ್ತದೆ. ಉತ್ಪಾದನೆಯನ್ನು ಉತ್ತೇಜಿಸಲು ಈ ಕ್ರಮ ಕೈಗೊಳ್ಳಲಾಗಿದೆ. ಪಶುಆಹಾರ ಮತ್ತು ಮೇವಿನ ದರ ಹೆಚ್ಚಾಗಿರುವುದರಿಂದ ರೈತರ ಮೇಲಿನ ಹೊರೆ ತಗ್ಗಿಸಲು ಒಕ್ಕೂಟ ಈ ನಿರ್ಧಾರ ಮಾಡಿದೆ. ಯುಗಾದಿ ಉಡುಗೊರೆ: ಹೊಸ ವರ್ಷದ ಆರಂಭದಲ್ಲಿ ರೈತರಲ್ಲಿ ಉತ್ಸಾಹ ತುಂಬಲು ಈ ಬಂಪರ್ ಕೊಡುಗೆ ನೀಡಲಾಗಿದೆ.

# ಸೂಕ್ಷ್ಮ ಸ್ವರೂಪದ, ಗಮನಕ್ಕೆ ಬಾರದ ಆರೋಗ್ಯ ಸಮಸ್ಯೆ ಪರಿಹರಿಸಲು ವಿಶೇಷ ಚಿಕಿತ್ಸಾಲಯ: ಡಾ. ಶರಣ್ ಪ್ರಕಾಶ್ ಪಾಟೀಲ



**ಬೆಂಗಳೂರು, ಮಾ. 12:** ಸೂಕ್ಷ್ಮ ಸ್ವರೂಪದ ಮತ್ತು ಹೆಚ್ಚು ಗಮನಕ್ಕೆ ಬಾರದ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಲು ಫೋರ್ಟಿಸ್ ಹೆಲ್ತ್ ಕೇರ್ ಬೆಂಗಳೂರಿನಲ್ಲಿರುವ ತನ್ನ ಆಸ್ಪತ್ರೆಗಳ ಜಾಲದಲ್ಲಿ ಇಂದು ನಾಲ್ಕು ವಿಶೇಷ ಚಿಕಿತ್ಸಾಲಯಗಳನ್ನು ಪ್ರಾರಂಭಿಸಿದೆ. ರೋಗಿ-ಕೇಂದ್ರಿತ ಮತ್ತು ಸಮಗ್ರ ಆರೋಗ್ಯ ರಕ್ಷಣೆ ಒದಗಿಸುವ ಫೋರ್ಟಿಸ್ ಹೆಲ್ತ್ ಕೇರ್‌ನ ಬದ್ಧತೆಯನ್ನು ಇದು ಬಲಪಡಿಸುತ್ತದೆ. ಮ್ಯಾನ್ ಕ್ಲಿನಿಕ್, ಇನ್ ಕಂಟಿನೆನ್ಸ್ ಕ್ಲಿನಿಕ್, ರೆಸ್ಟೋರೇಟಿವ್ ಗೈನಕಾಲಜಿ ಕ್ಲಿನಿಕ್ ಮತ್ತು ಮೊಬೈಲ್ ಲಿಥೊ ಟ್ರಿಪ್ಸಿ ಸೇವೆಗಳನ್ನು ಹೊಸದಾಗಿ ಪರಿಚಯಿಸಲಾಗಿದೆ.

ಸಾಮಾಜಿಕ ಕಳಂಕ ಅಥವಾ ಸೀಮಿತ ಅರಿವಿನಿಂದಾಗಿ ನಿಯಮಿತ ವಾಗಿ ಚಿಕಿತ್ಸೆ ಪಡೆಯದೆ ಉಳಿಯುವ ಸೂಕ್ಷ್ಮ ಮತ್ತು ಹೆಚ್ಚಾಗಿ ಚರ್ಚಿಸದ ಆರೋಗ್ಯ ಸಮಸ್ಯೆಗಳನ್ನು ಪರಿಹರಿಸಲು ಈ ವಿಶೇಷ ಚಿಕಿತ್ಸಾಲಯಗಳನ್ನು ವಿನ್ಯಾಸಗೊಳಿಸಲಾಗಿದೆ.

ಕರ್ನಾಟಕ ಸರ್ಕಾರದ ವೈದ್ಯಕೀಯ ಶಿಕ್ಷಣ ಸಚಿವ ಶರಣ್ ಪ್ರಕಾಶ್ ಪಾಟೀಲ ಅವರು ಕ್ಲಿನಿಕ್ ಗಳನ್ನು ಉದ್ಘಾಟಿಸಿದರು. ಫೋರ್ಟಿಸ್‌ನ ಪ್ರಮುಖ ವೈದ್ಯರು, ಆಸ್ಪತ್ರೆಯ ಉನ್ನತ ಅಧಿಕಾರಿಗಳು, ಸಿಬ್ಬಂದಿ, ರೋಗಿಗಳು ಮತ್ತು ಗಣ್ಯ ಅತಿಥಿಗಳು ಸಮಾರಂಭದಲ್ಲಿ ಉಪಸ್ಥಿತರಿದ್ದರು.


ನಂತರ ಮಾತನಾಡಿದ ಡಾ. ಶರಣ ಪ್ರಕಾಶ್ ಪಾಟೀಲ್, ಸೂಕ್ಷ್ಮ ಸ್ವರೂಪದ ಮತ್ತು ಹೆಚ್ಚು ಗಮನಕ್ಕೆ ಬಾರದ ಆರೋಗ್ಯ ಸಮಸ್ಯೆಗಳ ಪರಿಹರಿಸಲು ಈ ವಿಶೇಷ ಚಿಕಿತ್ಸಾಲಯಗಳು ನೆರವಾಗಲಿವೆ. ?ಆರೋಗ್ಯ ರಕ್ಷಣೆಯು ತಂತ್ರಜ್ಞಾನದ ವಿಷಯದಲ್ಲಿ ಮಾತ್ರವಲ್ಲದೆ ಸೂಕ್ಷ್ಮ ಮತ್ತು ಚರ್ಚಿಸದ ಆರೋಗ್ಯ ಸಮಸ್ಯೆಗಳನ್ನು ಘನತೆ ಮತ್ತು ಮುಕ್ತತೆಯಿಂದ ಪರಿಹರಿಸುವ ಸಾಮರ್ಥ್ಯದಲ್ಲಿಯೂ ಬದಲಾವಣೆ ಅಳವಡಿಸಿಕೊಳ್ಳಬೇಕು. ಬೆಂಗಳೂರಿನ ಫೋರ್ಟಿಸ್ ಆಸ್ಪತ್ರೆಗಳು ಈ ವಿಶೇಷ ಚಿಕಿತ್ಸಾಲಯಗಳನ್ನು ಪ್ರಾರಂಭಿಸುವುದು ಕಳಂಕ ನಿವಾರಿಸುವ ಮತ್ತು ಜನರು ಹಿಂಜರಿಕೆಯಿಲ್ಲದೆ ಸಕಾಲಿಕ ವೈದ್ಯಕೀಯ ಸಮಾಲೋಚನೆ ಪಡೆಯಲು ಪ್ರೋತ್ಸಾಹಿಸುವ ನಿಟ್ಟಿನಲ್ಲಿನ ಒಂದು ಪ್ರಗತಿಪರ ಹೆಜ್ಜೆಯಾಗಿದೆ. ಇಂತಹ ಉಪಕ್ರಮಗಳು ಜಾಗೃತಿ ಮೂಡಿಸುವಲ್ಲಿ ಮತ್ತು ಜನರಲ್ಲಿ ಸುಧಾರಿತ ಆರೈಕೆಯ ಸೌಲಭ್ಯ ಬಲಪಡಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ? ಎಂದು ಹೇಳಿದರು.

**ಪುರುಷ ಚಿಕಿತ್ಸಾಲಯ:** ಲೈಂಗಿಕ ಸ್ವಾಸ್ಥ್ಯ, ಪ್ರಾಸ್ಟೇಟ್ ಆರೋಗ್ಯ, ಸಂತಾನೋತ್ಪತ್ತಿ ಸಮಸ್ಯೆ, ಹಾರ್ಮೋನುಗಳ ಅಸಮತೋಲನ ಮತ್ತು ಜೀವನಶೈಲಿ-ಸಂಬಂಧಿತ ಪರಿಸ್ಥಿತಿಗಳು ಸೇರಿದಂತೆ ಪುರುಷರ ಆರೋಗ್ಯ ಕಾಳಜಿಗಳಿಗೆ ಗಮನ ಕೇಂದ್ರೀಕರಿಸಲು ಮೀಸಲಾದ ಕೇಂದ್ರ ಇದಾಗಿದೆ. ಗೌಪ್ಯತೆ, ಕ್ಲಿನಿಕಲ್ ಶ್ರೇಷ್ಠತೆ ಮತ್ತು ಸಮಗ್ರ, ಬಹುಬಗೆಯ ಚಿಕಿತ್ಸಾ ವಿಧಾನದ ಮೇಲೆ ಇದು ಒತ್ತು ನೀಡಲಿದೆ. ಅಸಂಯಮ ಚಿಕಿತ್ಸಾಲಯ: ಸ್ತ್ರೀ- ಪುರುಷರು ಹಾಗೂ ವಿವಿಧ ವಯಸ್ಸಿನ ಗುಂಪುಗಳಲ್ಲಿ ಮೂತ್ರ ಮತ್ತು ಕರುಳಿನ ಅಸಂಯಮವನ್ನು ಪರಿಹರಿಸುವ ವಿಶೇಷ ಸೇವೆಗೆ ಇದು ಸಂಬಂಧಿಸಿದೆ. ಮೂತ್ರಶಾಸ್ತ್ರ, ಸ್ತ್ರೀರೋಗ ಶಾಸ್ತ್ರ ಮತ್ತು ಫಿಸಿಯೊ ಥೆರಪಿಯ ಈ ಚಿಕಿತ್ಸಾಲಯವು ಘನತೆ, ಆತ್ಮವಿಶ್ವಾಸ ಮತ್ತು ಜೀವನದ ಗುಣಮಟ್ಟ ಪುನಃಸ್ಥಾಪಿಸುವ ಗುರಿ ಹೊಂದಿರುವ ಸುಧಾರಿತ ರೋಗ ನಿರ್ಣಯ ಮತ್ತು ಕಡಿಮೆ ನೋವಿನ ಸುಲಭದ ಶಸ್ತ್ರಚಿಕಿತ್ಸೆ ನೀಡಲಿದೆ.

**ಪುನಃಸ್ಥಾಪನೆಯ ಸ್ತ್ರೀರೋಗ ಚಿಕಿತ್ಸಾಲಯ:** ಮಹಿಳೆಯರ ಆರೋಗ್ಯ, ಮತ್ತು ಸೌಂದರ್ಯದ ಸ್ತ್ರೀರೋಗ ಸ್ಥಿತಿಗಳಿಗೆ ಮೀಸಲಾಗಿರುವ ಸಮಗ್ರ ಚಿಕಿತ್ಸಾಲಯವು ಸುಧಾರಿತ ಮತ್ತು ವಿವೇಚನಾಯುಕ್ತ ಚಿಕಿತ್ಸಾ ಶಿಷ್ಟಾಚಾರಗಳ ಮೂಲಕ ನೀಡಲಿದೆ.

**ಮೊಬೈಲ್ ಲಿಥೊಟ್ರಿಪ್ಸಿ ಸೇವೆಗಳು:** ಮೂತ್ರಪಿಂಡದ ಕಲ್ಲು ನಿರ್ವಹಣೆಗೆ ತಾಂತ್ರಿಕವಾಗಿ ಮುಂದುವರಿದ, ಕಡಿಮೆ ನೋವಿನ ಸುಲಭದ ಶಸ್ತ್ರಚಿಕಿತ್ಸೆ, ಕಡಿಮೆ ಆಸ್ಪತ್ರೆ ವಾಸ್ತವ್ಯ ಮತ್ತು ಸುಧಾರಿತ ಫಲಿತಾಂಶಗಳೊಂದಿಗೆ ನಿಖರ, ಪರಿಣಾಮಕಾರಿ ಮತ್ತು ರೋಗಿಸ್ನೇಹಿ ಚಿಕಿತ್ಸೆಯನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ.

# ಒಳಮೀಸಲಾತಿ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳದಿದ್ದರೆ ಹೋರಾಟ ವಿಧಾನಸೌಧಕ್ಕೆ ಸ್ಥಳಾಂತರ: ಸ್ವಾಮೀಜಿ ಎಚ್ಚರಿಕೆ



**ಬೆಂಗಳೂರು, ಮಾ.12:** ಕಳೆದ 35 ವರ್ಷಗಳಿಂದ ಹಲವಾರು ಹೋರಾಟಗಾರರು ತಮ್ಮ ಜೀವ-ಜೀವನವನ್ನು ಅರ್ಪಿಸಿ, ಮನೆ-ಮಠವನ್ನು ಬಿಟ್ಟು ಒಳಮೀಸಲಾತಿ ಹೋರಾಟವನ್ನು ಅಂತಿಮ ಘಟ್ಟಕ್ಕೆ ತಂದಿದ್ದಾರೆ.

ಅನೇಕರು ಬದುಕನ್ನು ಮಾತ್ರವಲ್ಲ, ಪ್ರಾಣವನ್ನೂ ಕಳೆದುಕೊಂಡಿದ್ದಾರೆ. ಇದು 2ನೇ ಸ್ವಾತಂತ್ರ್ಯ ಹೋರಾಟವಾಗಿದೆ. ಇಂದು ಅಂತಿಮಘಟ್ಟದ ನಿರ್ಣಾಯಕ ಹೋರಾಟ ನಡೆಯುತ್ತಿದೆ. ಆದರೂ, ಮಾದಿಗ ಸಮುದಾಯಗಳಿಗೆ ದೊರೆಯ ಬೇಕಾದ ಹಕ್ಕುಗಳು ಇನ್ನೂ ದೊರೆತಿಲ್ಲ. ಸರ್ಕಾರ ಒಳಮೀಸಲಾತಿ ವಿಚಾರದಲ್ಲಿ ಸರಿಯಾದ ನಿರ್ಧಾರ ಕೈಗೊಳ್ಳ ದಿದ್ದರೆ, ಹೋರಾಟವು ಫ್ರೀಡಂ ಪಾರ್ಕ್‌ನಿಂದ ವಿಧಾನ ಸೌಧಕ್ಕೆ ಸ್ಥಳಾಂತರಗೊಳ್ಳುತ್ತದೆ ಎಂದು ಸರ್ಕಾರಕ್ಕೆ ಮಾದರ ಚೆನ್ನಯ್ಯ ಸ್ವಾಮೀಜಿ ಎಚ್ಚರಿಕೆ ನೀಡಿದರು.

ನೇಮ್ಮಕಾತಿಂಯುಲ್ಲಿ ಒಳಮೀಸಲಾತಿಗೆ ಆಗ್ರಹಿಸಿ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಒಳಮೀಸಲಾತಿ ಹೋರಾಟ ಸಮಿತಿ ನೇತೃತ್ವದಲ್ಲಿ ನಡೆಯುತ್ತಿರುವ ಬೃಹತ್ ಪ್ರತಿಭಟನೆಯಲ್ಲಿ ಅವರು ಮಾತನಾಡಿ, ಪಕ್ಕದ ಕೇರಳ, ಪಂಜಾಬ್‌ನಲ್ಲಿ ಒಳಮೀಸಲಾತಿ ಜಾರಿಯಾಗಿದೆ. ಈ ರಾಜ್ಯಗಳಲ್ಲಿ ತೊಡಕಾಗದ ಕಾನೂನುಗಳು ಕರ್ನಾಟಕದಲ್ಲಿ ಹೇಗೆ ಅಡ್ಡಿಯಾ ಗುತ್ತವೆ ಎಂದು ಸರ್ಕಾರವನ್ನು ಕೇಳಬೇಕಿದೆ.

ಎಲ್ಲ ಸಮಯದಾಯ ಗಳಿಗೂ ಸಾಮಾಜಿಕ ನ್ಯಾಯ ಸಿಗಬೇಕೆಂದು ಒಳಮೀಸಲಾತಿ ಜಾರಿಗೊಳಿಸು ವುದಾಗಿ ಕಾಂಗ್ರೆಸ್ ಹೇಳಿತ್ತು. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷಗಳು ಕಳೆದರೂ, ಒಳ ಮೀಸಲಾತಿಯನ್ನು ಪರಿಪೂರ್ಣ ವಾಗಿ ಅನುಷ್ಠಾನಕ್ಕೆ ತರಲು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಹಿಂದೇಟು ಹಾಕುತ್ತಿದೆ ಎಂದು ಮಾದರ ಚೆನ್ನಯ್ಯ ಸ್ವಾಮೀಜಿ ಅಸಮಾಧಾನ ವ್ಯಕ್ತಪಡಿಸಿದರು.

ಮಾರಸಂದ್ರ ಮುನಿಯಪ್ಪ ಮಾತನಾಡಿ, ಸಿದ್ದರಾಮಯ್ಯ ಅವರು ಸಮಾಜವಾದದ ಬಗ್ಗೆ ಮಾತನಾಡುತ್ತಾರೆ. ನುಡಿದಂತೆ ನಡೆದಂತೆ ಸರ್ಕಾರವೆಂದು ಹೇಳುತ್ತಾರೆ. ಆದರೆ, ಒಳಮೀಸಲಾತಿ ವಿಚಾರದಲ್ಲಿ ಅವರು ನುಡಿದಂತೆ ನಡೆದಿಲ್ಲ. ಯಾರು ಅವರನ್ನು ತಡೆದಿದ್ದಾರೆ. ಸರ್ಕಾರವು 56,000 ಹುದ್ದೆಗಳನ್ನು ಭರ್ತಿಮಾಡಲು ಹೊರಡಿಸಿರುವ ಅಧಿಸೂಚನೆಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

# ಬಿಕ್ಲು ಶಿವ ಹತ್ಯೆ ಪ್ರಕರಣ: ಶಾಸಕ ಬೈರತಿ ಬಸವರಾಜ್‌ಗೆ ಷರತ್ತುಬದ್ಧ ಜಾಮೀನು ಮಂಜೂರು



**ಬೆಂಗಳೂರು, ಮಾ.12:** ರೌಡಿಶೀಟರ್ ಬಿಕ್ಲು ಶಿವ ಕೊಲೆ ಪ್ರಕರಣದಲ್ಲಿ ಜೈಲು ಪಾಲಾಗಿದ್ದ ಬಿಜೆಪಿ ಶಾಸಕ ಬೈರತಿ ಬಸವರಾಜ್ ಅವರಿಗೆ ಗುರುವಾರ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಬಿಗ್ ರಿಲೀಫ್ ನೀಡಿದ್ದು, ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.ಜಾಮೀನು ಕೋರಿ ಬೈರತಿ ಬಸವರಾಜ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಂತೋಷ್ ಗಜಾನನ ಭಟ್ ಅವರು, ಎರಡು ಲಕ್ಷ ರೂ. ಬಾಂಡ್ ಮತ್ತು ಅಷ್ಟೇ ಮೊತ್ತದ ಇಬ್ಬರ ಶ್ಯೂರಿಟಿ, ಸಾಕ್ಷ್ಯಾಧಾರ ನಾಶಪಡಿಸುವಂತಿಲ್ಲ, ಸಾಕ್ಷಿಗಳನ್ನು ಬೆದರಿಸುವಂತಿಲ್ಲ, ಕೋರ್ಟ್ ಅನುಮತಿಯಿಲ್ಲದೇ ವ್ಯಾಪ್ತಿ ಬಿಟ್ಟು ತೆರಳುವಂತಿಲ್ಲ ಎಂಬ ಷರತ್ತು ವಿಧಿಸಿ ಜಾಮೀನು ಮಂಜೂರು ಮಾಡಿದ್ದಾರೆ.

ಕಳೆದ ವರ್ಷ ಜುಲೈನಲ್ಲಿ ಭಾರತಿ ನಗರದಲ್ಲಿ ಬಿಕ್ಲು ಶಿವನನ್ನು ಶಸ್ತ್ರಸಜ್ಜಿತ ದಾಳಿಕೋರರು ಕೊಚ್ಚಿ ಕೊಲೆ ಮಾಡಿದ್ದರು. ಹಿಂದಿನ ಆಸ್ತಿ ವಿವಾದದ ಹಿನ್ನೆಲೆಯಲ್ಲಿ ಈ ಕೊಲೆ ನಡೆದಿದೆ ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ. ಪ್ರಕರಣದ ಎಫ್‌ಐಆರ್ ನಲ್ಲಿ ಬಿಜೆಪಿ ಶಾಸಕ ಬೈರತಿ ಬಸವರಾಜ್ ಅವರನ್ನು ಐದನೇ ಆರೋಪಿಯನ್ನಾಗಿ ಹೆಸರಿಸಲಾಗಿದ್ದು, ಗ್ಯಾಂಗ್‌ಸ್ಟರ್ ಜಗದೀಶ್ ಪದ್ಮನಾಭ ಅಲಿಯಾಸ್ ಜಗ(45)ನನ್ನು ಪ್ರಮುಖ ಆರೋಪಿಯನ್ನಾಗಿ ಮಾಡಲಾಗಿದೆ.

ಬಿಕ್ಲು ಶಿವ ಕೊಲೆ ಪ್ರಕರಣದ ನಂತರ ಬೈರತಿ ಬಸವರಾಜ್ ಅವರು ಬಂಧನ ಭೀತಿಯಿಂದ ತಲೆಮರೆಸಿಕೊಂಡಿದ್ದರು. ಬಳಿಕ ನಿರೀಕ್ಷಣಾ ಜಾಮೀನು ಕೋರಿ ಹೈಕೋರ್ಟ್‌ಗೆ ಸಲ್ಲಿಸಿದ್ದ ಅರ್ಜಿ ವಜಾಗೊಂಡಿತ್ತು. ನಂತರ ಸುಪ್ರೀಂಕೋರ್ಟ್‌ನಲ್ಲೂ ಸಹ ಜಾಮೀನು ಅರ್ಜಿ ತಿರಸ್ಕೃತಗೊಂಡಿತ್ತು. ಇದರ ಬೆನ್ನಲ್ಲೇ ಬೈರತಿ ಬಸವರಾಜ್ ಫೆಬ್ರವರಿ 13ರಂದು ಬೆಂಗಳೂರಿಗೆ ವಾಪಸಾಗುತ್ತಿದ್ದ ವೇಳೆ ವಿಮಾನ ನಿಲ್ದಾಣದಲ್ಲೇ ಸಿಐಡಿ ಅಧಿಕಾರಿಗಳು ಅವರನ್ನು ಬಂಧಿಸಿದ್ದರು.

# ಅವಸರದ ಅಂಬೇಡ್ಕರ್ ಸಮ್ಮೇಳನದಿಂದ ಹಣ ದುರ್ಬಳಕೆ, ಮುಂದೂಡುವಂತೆ ಭಂತೆ ಧಮ್ಮನಾಗ ಒತ್ತಾಯ

**ಬೀದರ್, ಮಾ.12:** ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಗರದಲ್ಲಿ ಮಾರ್ಚ್ 14, 15ರಂದು ಆಯೋಜಿಸಿರುವ ಡಾ.ಬಿ.ಆರ್. ಅಂಬೇಡ್ಕರ್ ಕುರಿತ ಅಂತರರಾಷ್ಟ್ರೀಯ ಸಮ್ಮೇಳನಕ್ಕೆ ಸರ್ಕಾರ 70 ಲಕ್ಷ ಅನುದಾನ ನೀಡಿದೆ. ಆದರೆ, ಸಮ್ಮೇಳನಕ್ಕೆ ಕೆಲವೇ ದಿನಗಳು ಉಳಿದರೂ ಇದುವರೆಗೆ ಅದರ ಮಾಹಿತಿಯೇ ಹಂಚಿಕೊಂಡಿಲ್ಲ. ಅನುದಾನ ದುರ್ಬಳಕೆಗೆ ಹುನ್ನಾರ ನಡೆದಿದೆ. ಆದಕಾರಣ ಸಮ್ಮೇಳನವನ್ನು ಮುಂದೂಡಬೇಕು ಎಂದು ಬಸವಕಲ್ಯಾಣ ತಾಲೂಕಿನ ಹತ್ಯಾಳದ ಕರ್ನಾಟಕ ಶರಣ್ ಬಹುದೇಶಿಯ ಸೇವಾಭಾವಿ ಸಂಸ್ಥೆಯ ಅಧ್ಯಕ್ಷ ಮತ್ತು ಅಂತರರಾಷ್ಟ್ರೀಯ ಬೌದ್ಧ ಭಿಕ್ಕು ಸಂಘದ ಉಪಾಧ್ಯಕ್ಷ ಭಂತೆ ಧಮ್ಮನಾಗ ಆಗ್ರಹಿಸಿದರು. 'ಡಾ. ಅಂಬೇಡ್ಕರ್ ಅವರ ಚಿಂತನೆಗಳು ಮತ್ತು ಸಮಕಾಲೀನ ಪರಿಹಾರಗಳು' ವಿಷಯದ ಕುರಿತು ಅಂತರರಾಷ್ಟ್ರೀಯ ಸಮ್ಮೇಳನ ಆಯೋಜನೆಗೆ 2023ರಿಂದ ನಿರಂತರವಾಗಿ ನಾನು ಪ್ರಯತ್ನಿಸುತ್ತ ಬಂದಿದ್ದೇನೆ. ಸರ್ಕಾರವು ಅಂಬೇಡ್ಕರ್ ಸಂಶೋಧನಾ ಕೇಂದ್ರದ ವತಿಯಿಂದ 70 ಲಕ್ಷ ಅನುದಾನ 2025ರ ಸೆಪ್ಟೆಂಬರ್‌ನಲ್ಲಿ ಬಿಡುಗಡೆಗೊಳಿಸಿದೆ.


ಆದರೆ, ನನಗೆ ಹಾಗೂ ಅಂಬೇಡ್ಕರವಾದಿ ಸಂಘ-ಸಂಸ್ಥೆಗಳಿಗೆ ಯಾವುದೇ ಮಾಹಿತಿ ನೀಡಿರುವದಿಲ್ಲ. ಯಾವುದೇ ಪೂರ್ವಭಾವಿ ಸಭೆಯನ್ನೂ ಕರೆದಿಲ್ಲ ಎಂದು ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಆರೋಪಿಸಿದರು.

**ಮಾ.14 15ರಂದು ವಿಚಾರ ಸಂಕಿರಣ**

**'ಭಾರತದ ಪ್ರಸ್ತುತ ಸವಾಲುಗಳು ಡಾ. ಬಿ.ಆರ್.ಅಂಬೇಡ್ಕರ್ ಅವರ ಚಿಂತನೆಗಳು ಮತ್ತು ಸಮಕಾಲೀನ ಪರಿಹಾರಗಳು' ಎಂಬ ವಿಷಯದ ಕುರಿತು ಮಾ.14ರಂದು ನಗರದ ಬೆಲ್ದಾಳೆ ಕನ್ವೆನ್ಷನ್ ಹಾಲ್‌ನಲ್ಲಿ ಹಾಗೂ ಮಾ.15ರಂದು ನಗರದ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಎರಡು ದಿನಗಳ ಅಂತರರಾಷ್ಟ್ರೀಯ ಸಮ್ಮೇಳನ ಆಯೋಜಿಸಲಾಗಿದೆ' ಎಂದು ಬೀದರ್ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

ಸಮ್ಮೇಳನದ ಯಶಸ್ವಿಗಾಗಿ ಇ-ಟೆಂಡರ್ ಕರೆದಿಲ್ಲ. ಉಪಸಮಿತಿಗಳನ್ನು ರಚಿಸಿಲ್ಲ. ಸಮ್ಮೇಳನಕ್ಕೆ ಇನ್ನೂ ಕೆಲವೇ ದಿನಗಳು ಬಾಕಿ ಉಳಿದಿವೆ. ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಅನುದಾನ ದುರ್ಬಳಕೆ ಮಾಡಿಕೊಳ್ಳಲು ಹುನ್ನಾರ ನಡೆಸಿದ್ದಾರೆ. ಆದ್ದರಿಂದ ಈ ಅವಸರದ ಸಮ್ಮೇಳನವನ್ನು ಎರಡು ತಿಂಗಳು ಮುಂದೂಡಬೇಕು ಎಂದು ಆಗ್ರಹಿಸಿದರು.

ಈ ಸಮ್ಮೇಳನಕ್ಕೆ ಜಪಾನ್, ಜರ್ಮನಿ, ದಕ್ಷಿಣ ಆಫ್ರಿಕಾ, ಬ್ರಿಟನ್ ಹಾಗೂ ರಷ್ಯಾ ದೇಶದ ಅತಿಥಿಗಳನ್ನು ಆಹ್ವಾನಿಸಿದ್ದೆ. ಸಮ್ಮೇಳನದ ಆಯೋಜನೆಗೆ ಹಗಲಿರುಳು ಶ್ರಮಿಸಿದ್ದೇನೆ. ಆದರೆ, ಇದುವರೆಗೆ ಆಮಂತ್ರಣ



ಪತ್ರಿಕೆ, ಕಟೌಟ್, ಬ್ಯಾನರ್‌ಗಳು ಹಾಗೂ ಪ್ರಚಾರ ಕಾರ್ಯ ಕೈಗೊಂಡಿಲ್ಲ. ಅಂಬೇಡ್ಕರ್ ಅವರ ಚಿಂತನೆಗಳನ್ನು ಗಾಳಿಗೆ ತೂರಿರುವ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ಇಲ್ಲದಿದ್ದರೆ ಜಿಲ್ಲಾಧಿಕಾರಿ ಕಚೇರಿ ಮುಂದೆ ಧರಣಿ ಸತ್ಯಾಗ್ರಹ ಮಾಡಲಾಗುವುದು. ಅದಕ್ಕೂ ಬಗ್ಗದಿದ್ದಲ್ಲಿ ಆತ್ಮಹತ್ಯೆ ಮಾಡಿಕೊಳ್ಳುವೆ. ಸಮಾಜದ ಮುಖಂಡರು ಕುರುಡ, ಕಿವುಡರಾಗಿ ಕುಳಿತುಕೊಳ್ಳದೆ ಹೋರಾಟ ಮಾಡಬೇಕು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಭಂತೆ ಸಂಘಜ್ಯೋತಿ, ಬೌದ್ಧ ಭಿಕ್ಕುಗಳು ಉಪಸ್ಥಿತರಿದ್ದರು.



ಅಮೆರಿಕ-ಇಸ್ರೇಲ್ ಮತ್ತು ಇರಾನ್ ನಡುವಿನ ಸಂಘರ್ಷದ ನಂತರ ವಾಣಿಜ್ಯ ಎಲ್‌ಪಿಜಿ ಪೂರೈಕೆಯಲ್ಲಿನ ಅಡಚಣೆಗಳ ನಡುವೆ ಹುಬ್ಬಳ್ಳಿಯಲ್ಲಿ ಗುರುವಾರ ರೆಸ್ಟೋರೆಂಟ್‌ನ ಹೊರಗೆ ಅಡುಗೆ ಅನಿಲದ ಬದಲಿಗೆ ಉರುವಲು ಬಳಸಿ ಅಡುಗೆ ಮಾಡುವ ಹೋಟೆಲ್‌ನ ಕಾರ್ಮಿಕರು.

# ಸಾಮರ್ಥ್ಯಕ್ಕಿಂತ ಉನ್ನತ ಗುರಿ ಇಟ್ಟುಕೊಳ್ಳಿ: ನ್ಯಾ.ಡಾ.ಶಿವರಾಜ ಪಾಟೀಲ

**ಕಲಬುರಗಿ, ಮಾ.12:** ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯಕ್ಕಿಂತ ಉನ್ನತ ಗುರಿ ಇಟ್ಟುಕೊಳ್ಳಬೇಕು. ಆ ನಿಟ್ಟಿನಲ್ಲಿ ಕಾರ್ಯ ಪ್ರವೃತ್ತರಾಗಬೇಕು. ಆಗ ಒಂದು ಹಂತದ ಗುರಿ ಸಾಧಿಸಲು ಸಾದ್ಯವಾಗುತ್ತದೆ. ಭಾರತದ ನಾಗರಿಕರಾಗಿ ಮೂಲಭೂತ ಕರ್ತವ್ಯ ಗಳನ್ನು ಸಮರ್ಥವಾಗಿ ನಿರ್ವಹಿಸಬೇಕು ಎಂದು ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ಡಾ.ಶಿವರಾಜ ಪಾಟೀಲ ಹೇಳಿದರು.

ನಗರದ ಎಂಜಿನಿಯರ್ಸ್ ಸಂಸ್ಥೆಯ ವಿಶ್ವೇಶ್ವರಯ್ಯ ಭವನದಲ್ಲಿ ನ್ಯಾಯಮೂರ್ತಿ ಶಿವರಾಜ ಪಾಟೀಲ ಪ್ರತಿಷ್ಠಾನ, ಸರ್ವಜ್ಞ ಮತ್ತು ಜಸ್ಟೀಸ್ ಶಿವರಾಜ ಪಾಟೀಲ ಪದವಿ ಪೂರ್ವ ಕಾಲೇಜು ಕಲಬುರಗಿ ಹಾಗೂ ರಾಯಚೂರು ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ, ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರೋತ್ಸಾಹಿಸುವುದರಿಂದ ಅವರು ಉತ್ತಮ ಸಾಧನೆ ಮಾಡಿ ದೇಶದಲ್ಲಿ ಪ್ರಜ್ಞಾವಂತ ನಾಗರಿಕರಾಗಿ ಬೆಳೆಯುತ್ತಾರೆ. ಮಕ್ಕಳಿಗೆ ತಾಯಿಯ ಮಡಿಲು, ಅಪ್ಪನ ಹೆಗಲು, ಶಿಕ್ಷಕನ ಮಾರ್ಗದರ್ಶನ ಶ್ರೇಷ್ಠವಾಗಿದೆ. ಬಡವರಿಗೆ, ಕಷ್ಟದಲ್ಲಿದ್ದವರಿಗೆ ಸಹಾಯ ಮಾಡುವಾಗ, ದಾನ ಮಾಡುವಾಗ, ದಾಸೋಹ ಮಾಡು ವಾಗ ಕೊಡುವ ಕೈ ಮುಂದಾಗಬೇಕು, ತಲೆಬಾಗಬೇಕು. ಭಗವಂತ ಕೊಡುವ ಸಾಮರ್ಥ್ಯ ಕೊಟ್ಟಿದ್ದಾನೆ ಎಂಬ ವಿನಯ ಭಾವನೆ ಇರಬೇಕು ಎಂದರು.



ಹೈಕೋರ್ಟ್ ನ್ಯಾಯಮೂರ್ತಿ ಟಿ.ಎನ್. ಇನವಳ್ಳಿ ಮಾತನಾಡಿ, ಸೌಜನ್ಯ, ಸೌಮ್ಯತೆ, ವಿನಮ್ರತೆ ಇದ್ದರೆ ಯಾವ ಮಟ್ಟಕ್ಕೆ ಏರಬಹುದು ಎಂಬುದಕ್ಕೆ ನ್ಯಾ. ಶಿವರಾಜ ಪಾಟೀಲ ಅವರೇ ನಮಗೆಲ್ಲ ಮಾದರಿಯಾಗಿದ್ದಾರೆ ಎಂದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಿ.ವಿ. ಪರಮಶಿವಮೂರ್ತಿ ಅವರು, ನ್ಯಾ. ಶಿವರಾಜ ಪಾಟೀಲ ಅವರ ಸಮಾಜದ ಬಗೆಗಿನ ಕಳಕಳಿಯ ಒಂದಂಶವಾದರೂ ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಇಳಕಲ್‌ನ ಗುರುಮಹಾಂತ ಸ್ವಾಮೀಜಿ, ನಾಲವಾರದ ಸಿದ್ಧ ತೋಟೇಂದ್ರ ಶಿವಾಚಾರ್ಯರು, ಚಿಂತಕ ರಂಜಾನ್ ದರ್ಗಾ ಮಾತನಾಡಿದರು.

ದ್ವಿತೀಯ ಪಿಯುಸಿ ಪರೀಕ್ಷೆ, ಜೆಇಇ, ನೀಟ್, ಸಿಇಟಿಯಲ್ಲಿ ಅತ್ಯುತ್ತಮ ಅಂಕ ಗಳಿಸಿದ ಬಡಪ್ರತಿಭಾವಂತ ವಿದ್ಯಾರ್ಥಿಗಳಿಗೆ ರೂ.25,000 ವಿದ್ಯಾರ್ಥಿವೇತನ, ರೂ.11,000 ಪ್ರೋತ್ಸಾಹಧನ ಹಾಗೂ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

# ವಿವಾದ ಹುಟ್ಟುಹಾಕಿರುವ ಬೀದರ್‌ನ ಫುಟ್‌ಪಾತ್‌ನಲ್ಲಿ ಫುಡ್‌ಕೋರ್ಟ್!

**ಬೀದರ್, ಮಾ. 12:** ಇಲ್ಲಿನ ಶಿವನಗರ ಸಿಗ್ನಲ್‌ನಲ್ಲಿರುವ ಫುಟ್‌ಪಾತ್‌ನಲ್ಲಿ ಫುಡ್‌ಕೋರ್ಟ್ ಸ್ಥಾಪನೆಯ ವಿಚಾರ ಈಗ ಚರ್ಚೆಯಲ್ಲಿದೆ. ಫುಡ್‌ಕೋರ್ಟ್ ಸ್ಥಾಪಿಸುವ ವಿಷಯ ಮುನ್ನಲೆಗೆ ಬರುತ್ತಿದ್ದಂತೆ ಸ್ಥಳೀಯ ಶಿವನಗರ ನಿವಾಸಿಗಳು ಸಿಡಿದೆದ್ದಿದ್ದಾರೆ. ಯಾವುದೇ ಕಾರಣಕ್ಕೂ ಪಾದಚಾರಿ ಮಾರ್ಗದಲ್ಲಿ ಫುಡ್‌ಕೋರ್ಟ್ ಸ್ಥಾಪಿಸಬಾರದು. ಯಥಾಸ್ಥಿತಿ ಕಾಪಾಡಿಕೊಳ್ಳಬೇಕೆನ್ನುವುದು ಸ್ಥಳೀಯರ ಪ್ರಮುಖ ಬೇಡಿಕೆಯಾಗಿದೆ. ಈ ಸಂಬಂಧ ಸ್ಥಳೀಯರು ಈಗಾಗಲೇ ಜಿಲ್ಲಾಡಳಿತಕ್ಕೆ ಮನವಿ ಕೂಡ ಸಲ್ಲಿಸಿದ್ದಾರೆ. ಅಂದಹಾಗೆ, ಏನಿದು ವಿವಾದ? ಸ್ಥಳೀಯರ ವಿರೋಧಕ್ಕೆ ಕಾರಣವೇನು?

ಈ ಹಿಂದೆ ಹರ್ಷ ಗುಪ್ತಾ ಅವರು ಬೀದರ್ ಜಿಲ್ಲಾಧಿಕಾರಿಯಿದ್ದಾಗ ಶಿವನಗರ ಸಿಗ್ನಲ್‌ನಿಂದ 'ಬೇಟಿ' (ಹೆಣ್ಣು ಮಗುವಿನ ವೃತ್ತ) ವೃತ್ತದ ವರೆಗೆ ಪಾದಚಾರಿ ಮಾರ್ಗವನ್ನು ಅಭಿವೃದ್ಧಿಪಡಿಸಿದ್ದರು. ಅದರಲ್ಲೂ ಶಿವನಗರ ಸಿಗ್ನಲ್‌ನಿಂದ ಹಳೆ ಆರ್‌ಟಿಒ ಕಚೇರಿ ವರೆಗೆ ವಿಸ್ತೀರ್ಣದಲ್ಲಿ 100 ಅಡಿಗೂ ವಿಶಾಲವಾದ ಪಾದಚಾರಿ ಮಾರ್ಗ ನಿರ್ಮಿಸಿದ್ದರು.

ಜೊತೆಗೆ ಆಸನಗಳಿಗೂ ವ್ಯವಸ್ಥೆ ಮಾಡಿದ್ದರು. ಬೆಳಿಗ್ಗೆ ಹಾಗೂ ಸಂಜೆ ವೇಳೆ ವಾಯು ವಿಹಾರದೊಂದಿಗೆ ಕೆಲಹೊತ್ತು ಅಲ್ಲಿ



**ಬೀದರ್‌ನಲ್ಲಿ ಇಷ್ಟೊಂದು ವಿಶಾಲವಾದ ಫುಟ್‌ಪಾತ್ ಬೇರೊಂದು ಸ್ಥಳದಲ್ಲಿ ಇಲ್ಲ. ಸುಮಾರು ಏಳೆಂಟು ಬಡಾವಣೆಯ ಜನ ವಾಯುವಿಹಾರಕ್ಕೆ ನಿತ್ಯ ಇಲ್ಲಿಗೆ ಬಂದು ಹೋಗುತ್ತಾರೆ. ಹೀಗಿರುವಾಗ ಅಲ್ಲಿ ಫುಡ್‌ಕೋರ್ಟ್ ಸ್ಥಾಪನೆ ಸರಿಯಲ್ಲ.**
**-ಅರುಣ್, ಇಇ ಡಿಯುಡಿಸಿ.**

ಕುಳಿತುಕೊಳ್ಳಲು ಜನರಿಗೆ ಅನುಕೂಲವಾಗಲೆನ್ನೆವುದು ಅದರ ಹಿಂದಿನ ಉದ್ದೇಶವಾಗಿತ್ತು.

ಆದರೆ, ವರ್ಷಗಳು ಕಳೆಯುತ್ತಿದ್ದಂತೆ ಪಾದಚಾರಿ ಮಾರ್ಗದಲ್ಲಿ ತರಕಾರಿ, ಹಣ್ಣು ಸೇರಿದಂತೆ ಇತರ ವಸ್ತುಗಳನ್ನು ಮಾರಾಟ ಮಾಡಲಾಗುತ್ತಿದೆ. ರಸ್ತೆಯುದ್ದಕ್ಕೂ ವಾಹನಗಳಲ್ಲಿ ಉಪಾಹಾರ, ಸ್ನ್ಯಾಕ್ಸ್ ತಯಾರಿಸಿ ಮಾರಾಟ ಮಾಡಲಾಗುತ್ತಿದೆ. ಜನರುಕೂಡ ಹೆಚ್ಚಿನ ಸಂಖ್ಯೆಯಲ್ಲಿ ಸೇರುತ್ತಿರುವ ಕಾರಣ ವಾಹನಗಳ ಸುಗಮ ಸಂಚಾರಕ್ಕೆ ತೊಡಕಾಗುತ್ತಿದೆ. ವಾಯು ವಿಹಾರಿಗಳಿಗೆ ಸಮಸ್ಯೆ ಉಂಟಾಗುತ್ತಿದೆ.

ಈ ವಿಷಯ ಮನಗಂಡು ಜಿಲ್ಲಾಡಳಿತವು ಪಾದಚಾರಿಗಳಿಗೆ ಸಮಸ್ಯೆಯಾಗದ ರೀತಿಯಲ್ಲಿ ಕಿರು 'ಫುಡ್ ಕೋರ್ಟ್' ಸ್ಥಾಪಿಸಿ, ವ್ಯಾಪಾರಿಗಳು ಹಾಗೂ ಜನರಿಗೆ ಅನುಕೂಲ ಮಾಡಿಕೊಡಲು ಯೋಚಿಸುತ್ತಿದೆ. ಜೊತೆಗೆ ಇಡೀ ಪಾದಚಾರಿ ಮಾರ್ಗವನ್ನು ಅಭಿವೃದ್ಧಿಪಡಿಸಲು ಮುಂದಾಗಿದೆ.

ಈ ವಿಷಯ ಈಗ ಸ್ಥಳೀಯರ ಅಸಮಾಧಾನಕ್ಕೆ ಕಾರಣವಾಗಿದೆ. ಫುಡ್ ಕೋರ್ಟ್ ಸ್ಥಾಪಿಸುವ ನಿಟ್ಟಿನಲ್ಲಿ ಇನ್ನೂ ಅಂತಿಮ ನಿರ್ಧಾರ ಕೈಗೊಂಡಿಲ್ಲ. ಇನ್ನೂ ಚರ್ಚೆಯ ಹಂತದಲ್ಲಿದೆ ಎಂದು ಜಿಲ್ಲಾಡಳಿತದ ಮೂಲಗಳು ತಿಳಿಸಿವೆ. ಯಾವುದೇ ಕಾರಣಕ್ಕೂ ಫುಡ್‌ಕೋರ್ಟ್ ಸ್ಥಾಪಿಸಬಾರದು. ಬೀದರ್ ನಗರದಲ್ಲಿ ಮಹಾನಗರ ಪಾಲಿಕೆಗೆ ಸೇರಿದ ಜಾಗಗಳಿವೆ. ವಾಯುವಿಹಾರಿಗಳು ಹಾಗೂ ವಾಹನಗಳ ಸಂಚಾರಕ್ಕೆ ತೊಡಕಾಗದ ಸ್ಥಳವನ್ನು ಆಯ್ಕೆ ಮಾಡಿ, ಅಲ್ಲಿ ಫುಡ್‌ಕೋರ್ಟ್ ಸ್ಥಾಪಿಸಿದರೆ ಸೂಕ್ತ ಎಂದು ಶಿವನಗರ ನಿವಾಸಿಗಳ ಅಭಿಪ್ರಾಯ.

**4 ಕೋಟಿ ವೆಚ್ಚದಲ್ಲಿ ಶಿವನಗರ ಫುಟ್‌ಪಾತ್ ಅಭಿವೃದ್ಧಿ ಕಾರ್ಯ ಕೈಗೆತ್ತಿಕೊಳ್ಳಲಾಗಿದೆ. ಫುಟ್‌ಪಾತ್ ಕೆಳಗಿನ ಚರಂಡಿಗೆ ಪ್ಲಾಸ್ಟರ್ ಹೊಸ ನೆಲಹಾಸು ವಿದ್ಯುತ್ ದೀಪಗಳನ್ನು ಅಳವಡಿಸಿ ಫುಟ್‌ಪಾತ್ ಅಭಿವೃದ್ಧಿಪಡಿಸಲಾಗುವುದು. ಫುಡ್‌ಕೋರ್ಟ್ ನಮ್ಮ ಯೋಜನೆಯಲ್ಲಿಲ್ಲ.**
**-ಲೋಕೇಶ್ ವಿ. ಬಿರಾದಾರ .**
**-ಅಶೋಕಕುಮಾರ್ ಕರಂಜಿ, ಸ್ಥಳೀಯ ನಿವಾಸಿ.**

### ಹೂವಿನ ಮಾರುಕಟ್ಟೆಗೆ ಟೆಂಡರ್ ಕರೆಯಲು ಸಿದ್ಧತೆ

# 20 ಎಕರೆ ಜಾಗ ಹಸ್ತಾಂತರ: ಶಿವಾನಂದ ಪಾಟೀಲ್

**ಬೆಂಗಳೂರು/ಚಿಕ್ಕಬಳ್ಳಾಪುರ, ಮಾ.12:** ಕಳೆದ ಬಜೆಟ್‌ನಲ್ಲಿ ಚಿಕ್ಕಬಳ್ಳಾಪುರದಲ್ಲಿ ಹೂವಿನ ಮಾರುಕಟ್ಟೆ ನಿರ್ಮಾಣಕ್ಕೆ 141 ಕೋಟಿ ರೂ ಅನುದಾನವನ್ನು ಮೀಸಲಿರಿಸಲಾಗಿದೆ. ಸಾರ್ವಜನಿಕ-ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ನಿರ್ಮಾಣ ಮಾಡುವ ಗುರಿಯಿದೆ. ಈ ಸಂಬಂಧ ನಬಾರ್ಡ್ ಯೋಜನೆ ಮುಖಾಂತರ ತೋಟಗಾರಿಕೆ ಇಲಾಖೆಯು 20 ಎಕರೆ ಜಾಗ ಹಸ್ತಾಂತರಿಸಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದರು.

ವಿಧಾನ ಪರಿಷತ್‌ನಲ್ಲಿ ಉತ್ತರಿಸಿದ ಸಚಿವರು, ನೀಡಲಾಗಿರುವ 20 ಕೋಟಿ ವೆಚ್ಚದಲ್ಲಿ ಉದ್ದೇಶಿತ ಹೂವಿನ ಮಾರುಕಟ್ಟೆ ನಿರ್ಮಾಣಕ್ಕೆ ಮೂಲಭೂತ ಸೌಕರ್ಯ ಕಲ್ಪಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದ್ದು, ಟೆಂಡರ್ ಕರೆಯಲು ಸಿದ್ದತೆ ನಡೆಸಲಾಗಿದೆ. ಅಲ್ಲದೆ ಹೊಸಕೋಟೆಯಲ್ಲಿ 36 ಎಕರೆ ಜಾಗದಲ್ಲಿ ಪ್ರತ್ಯೇಕ ಹೂವಿನ ಮಾರುಕಟ್ಟೆ ನಿರ್ಮಿಸಲಾಗುತ್ತಿದೆ ಎಂದರು. ಯೋಜನೆಯ ಅನುಷ್ಠಾನ ಕುರಿತಂತೆ ಹಸ್ತಾಂತರಿಸಲಾಗಿರುವ 20 ಎಕರೆ ಜಾಗದಲ್ಲಿ ಶೈತ್ಯಾಗಾರ ಸ್ಥಾಪನೆಗೆ ಸ್ಥಳಾವಕಾಶ ಕಲ್ಪಿಸಲಾಗಿದೆ.

ಮುಂದಿನ ಹಂತದ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಾಗ ಶೈತ್ಯಾಗಾರ ಸ್ಥಾಪನೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು. ಸದನದಲ್ಲಿ ವಿಧಾನ ಪರಿಷತ್ ಸದಸ್ಯ ಗೋವಿಂದರಾಜ್, ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ರಾಜ್ಯದಲ್ಲಿ ಹೆಚ್ಚು ಹೂ ಬೆಳೆಯಲಾಗುತ್ತಿದ್ದು, ಪ್ರತ್ಯೇಕ ಅಂತಾರಾಷ್ಟ್ರೀಯ ಮಟ್ಟದ ಹೂವಿನ ಮಾರುಕಟ್ಟೆ ಹಾಗೂ ಶೈತ್ಯಾಗಾರ ಸ್ಥಾಪಿಸಬೇಕಿದೆ ಎಂದು ಒತ್ತಾಯಿಸಿದರು.

ಸಾವಿರಾರು ಕೋಟಿ ಕೆ.ಜಿ ಹೂಗಳು ಇಂದು ಮೂರು ಜಿಲ್ಲೆಗಳಿಂದ ವಿದೇಶಗಳಿಗೆ ರಫ್ತಾಗುತ್ತಿದೆ. ಈ ಬಗ್ಗೆ



ಚಿಕ್ಕಬಳ್ಳಾಪುರ ನಂದಿಕ್ರಾಸ್ ಬಳಿ ಉದ್ದೇಶಿತ 46 ಎಕರೆಯಲ್ಲಿ ಅಂತರಾಷ್ಟ್ರೀಯ ಮಟ್ಟದ ಹೂವಿನ ಮಾರ್ಕೆಟ್ ಹಾಗೂ ಶೈತ್ಯಾಗಾರ ನಿರ್ಮಾಣ ಮಾಡುವುದಾಗಿ ಕಳೆದ ವರ್ಷದ ಬಜೆಟ್‌ನಲ್ಲಿ ತಿಳಿಸಿದ್ದರೂ ಇನ್ನೂ ಕಾರ್ಯರೂಪಕ್ಕೆ ಬಂದಿಲ್ಲ. 46 ಎಕರೆಯಿಂದ 20 ಎಕರೆ ಇಳಿದಿದೆ. ಅಲ್ಲದೆ, ಕೋಲಾರ ರೈತರು ಹೂ ಮಾರಾಟಕ್ಕೆ ಪ್ರತ್ಯೇಕ ಜಾಗವಿಲ್ಲದೆ ತೊಂದರೆಗೆ ಒಳಗಾಗಿದ್ದಾರೆ.

ಹೀಗಾಗಿ ಕೂಡಲೇ ಈ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಆಗ್ರಹಿಸಿದರು.

### ತೋಟಗಾರಿಕೆ ಕಾಲೇಜಿನಲ್ಲಿ ಮಹಿಳಾ ದಿನಾಚರಣೆ

# ಮಹಿಳೆಯರ ಸಾಮರ್ಥ್ಯ ಎಲ್ಲ ಕ್ಷೇತ್ರಗಳಲ್ಲಿ ಸಾಬೀತಾಗಿದೆ: ಸಂಯೋಜಕಿ ಶೈನಿ ಗುಂಟಿ



**ಬೀದರ್, ಮಾ. 12:** ಮಹಿಳೆಯರು ಸಮಾಜದ ಎಲ್ಲ ಕ್ಷೇತ್ರಗಳಲ್ಲಿ ತಮ್ಮ ಸಾಮರ್ಥ್ಯ ಸಾಬೀತುಪಡಿಸುತ್ತಿದ್ದಾರೆ. ಮಹಿಳಯರು ಶಿಕ್ಷಣ, ರಾಜಕೀಯ, ವಿಜ್ಞಾನ ಮತ್ತು ಮತ್ತು ಕ್ರೀಡಾ ಕ್ಷೇತ್ರಗಳೂ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಮಹತ್ತರ ಸಾಧನೆಗಳನ್ನು ಮಾಡಿದ್ದಾರೆ ಎಂದು ಅಕ್ಕ ಪಡೆಯ ರಾಜ್ಯ ಸಂಯೋಜಕಿ ಶೈನಿ ಪ್ರದೀಪ್ ಗುಂಟಿ ಹೇಳಿದರು.

ನಗರದ ತೋಟಗಾರಿಕೆ ಕಾಲೇಜಿನಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಆಯೋಜಿಸಿದ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರು ಇಂದು ಅಸಮರ್ಥ ಮತ್ತು ಅಸಾಯಕರು ಅಲ್ಲ. ವಿದ್ಯಾವಂತ ರಾಗಿದ್ದಾರೆ. ವಿದ್ಯೆಯಿಂದ ಮಹಿಳೆ ಏನೆಲ್ಲ ಸಾಧಿಸಬಹುದು ಎಂದು ತೋರಿಸಿ ಕೊಟ್ಟಿದ್ದಾರೆ. ಆದ್ದರಿಂದ ಪ್ರತಿಯೊಬ್ಬರೂ ತಮ್ಮ ಹೆಣ್ಣು ಮಕ್ಕಳಿಗೆ ಶಿಕ್ಷಣ ಕೊಡುವುದು ಅಗತ್ಯ ಎಂದರು.

ಇಷ್ಟೆಲ್ಲ ಮುಂದುವರಿದ ಸಮಾಜದಲ್ಲೂ ಕೂಡ ಮಹಿಳೆಯರ ಮೇಲಿನ ಹಿಂಸೆ, ತಾರತಮ್ಯ ಮತ್ತು ಭೇದಭಾವಗಳು ಇಂದಿಗೂ ಉಳಿದುಕೊಂಡಿವೆ. ಇಂಥ ಭಾವನೆಗಳನ್ನು ತೊಡೆದುಹಾಕಲು ಎಲ್ಲರೂ ಒಟ್ಟಾಗಿ ಪ್ರಯತ್ನಿಸಬೇಕು ಎಂದು ತಿಳಿಸಿದ ಅವರು, ಬಹುತೇಕ ಸಂದರ್ಭದಲ್ಲಿ ಮಹಿಳೆಯರಿಗೆ ಮಹಿಳೆಯರೇ ವೈರಿಗಳಾಗಿ ಕಾಡುತ್ತಿರುವುದು ನಮ್ಮ ಕುಟುಂಬಗಳಲ್ಲಿ ಕಾಣುತ್ತೇವೆ. ಈ ಭಾವನೆಯಿಂದ ಹಿರಿಯರು ಮತ್ತು ಮಹಿಳೆಯರು ಹೊರಬಂದು ಮಹಿಳೆಯರಿಗೆ ಸಮಾನ ಹಕ್ಕುಗಳನ್ನು ನೀಡಲು ಪ್ರಯತ್ನಿಸಬೇಕು ಎಂದರು.

ಕಾಲೇಜಿನ ಡೀನ್ ಎಸ್. ವಿ. ಪಾಟೀಲ ಮಾತನಾಡಿ, ಕುಟುಂಬದ ಬೆಳವಣಿಗೆ ಜೊತೆಗೆ ಸಾಮಾಜಿಕ, ಶೈಕ್ಷಣಿಕ, ರಾಜಕೀಯ ಮತ್ತು ಆರ್ಥಿಕ ಕ್ಷೇತ್ರಗಳಲ್ಲಿ ಮಹಿಳೆಯರ ಕೊಡುಗೆ ಅಪಾರವಾದುದು. ಮಹಿಳಾ ಸ್ವಾವಲಂಬನೆ, ಸ್ವಾತಂತ್ರ್ಯ ಹಿಂದಿಗಿಂತ ಇಂದು ಧಾರಾಳವಾಗಿ ದೊರೆಯುತ್ತಿದೆ. ಸ್ವಾತಂತ್ರ್ಯ ಸ್ವೇಚ್ಛಾಚಾರವಾಗಬಾರದು. ಇದರಿಂದ ಸಮಾಜದ ಸ್ವಾಸ್ಥ್ಯ ಹಾಳಾಗುತ್ತದೆ. ಮಹಿಳೆಯಿಂದ ಸಮಾಜಕ್ಕೆ ಗೌರವ ದೊರೆಯುತ್ತದೆ. ಕಳಂಕಿತಳಾದರೆ ಸಮಾಜವೂ ಕಳಂಕಗೊಳ್ಳುತ್ತದೆ ಎಂದು ಎಚ್ಚರಿಕೆ ನೀಡಿದರು.

ಮಹಿಳಾ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಟ್ರೋಫಿ ಪ್ರದಾನ ಮಾಡಲಾಯಿತು. 100 ಮೀ. ಓಟದಲ್ಲಿ ಸುಷ್ಮಾ ಪ್ರಥಮ, ಗುಂಡು ಎಸೆತದಲ್ಲಿ ಸುಶ್ಮಿತಾ ಅಂಬಿಗೇರ ಪ್ರಥಮ ಬಹುಮಾನ ಪಡೆದರು.

ಸಹಾಯಕ ಪ್ರಾಧ್ಯಾಪಕ ರಮೇಶ ನಾಯಕ ಕ್ರೀಡಾ ವರದಿ ವಾಚಿಸಿದರು. ಸಹಾಯಕ ಪ್ರಾಧ್ಯಾಪಕ ವಿಜಯ ಮಾಹಾಂತೇಶ, ಬೋಧಕೇತರ ಸಿಬ್ಬಂದಿ ಶ್ರೀನಿವಾಸ ಎನ್., ಅಂಬ್ರೇಶ, ಕಡ್ಲಿ ವೀರೇಶ, ರಾಜಕುಮಾರ್ ಐ., ಕಾವೇರಿ ಅವಸಂಗರದ, ಕಿರಣ, ರಾಠೋಡ, ಸುನೀತಾ ಎಮ್. ಕೆ., ವಿಶಾಲ ಎನ್., ಶಾರದಾ ಮುಲಗಿ ಹಾಜರಿದ್ದರು. ಕವಿತಾ ರಾಠೋಡ್ ಸ್ವಾಗತಿಸಿದರೆ, ಅನುರಾಧಾ ವಡಗಾವೆ

# ಪುರುಷರ ಸಾಧನೆಗಳಿಗೆ ಮಹಿಳೆಯರ ಸಹಕಾರ ಅಗತ್ಯ: ಶ್ರೀದೇವಿ ಆರ್. ವಿ.



ರಾಯಚೂರು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರದಲ್ಲಿ ಕಲಾಸಂಕುಲ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟ್ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ರಾಜ್ಯ ಕಾರ್ಯದರ್ಶಿ ಶ್ರೀದೇವಿ ಆರ್.ವಿ ಅವರನ್ನು ಸನ್ಮಾನಿಸಲಾಯಿತು.

**ರಾಯಚೂರು, ಮಾ. 12:** ಪುರುಷರ ಸಾಧನೆಗಳಿಗೆ ಮಹಿಳೆಯರ ಸಹಕಾರವಿರುತ್ತದೆ. ಆದ್ದರಿಂದ ಮಹಿಳೆಯರ ಬಗ್ಗೆ ಭೇದ ಸಲ್ಲದು ಎಂದು ರಾಷ್ಟ್ರೀಯ ಮಹಿಳಾ ಕಾಂಗ್ರೆಸ್‌ನ ರಾಜ್ಯ ಘಟಕದ ಕಾರ್ಯದರ್ಶಿ ಶ್ರೀದೇವಿ ಆರ್. ವಿ. ನಾಯಕ ಹೇಳಿದರು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರದಲ್ಲಿ ಕಲಾಸಂಕುಲ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟ್ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ಕುಟುಂಬದಲ್ಲಿ ಮಹಿಳೆಯರನ್ನು ಗೌರವಿಸುವುದು, ಪ್ರತಿಯೊಬ್ಬ ಪುರುಷನ ಜವಾಬ್ದಾರಿ. ಮಹಿಳೆ ತಾಯಿಯಾಗಿ ಮಡದಿಯಾಗಿ ಸಹೋದರಿಯಾಗಿ ಪ್ರತಿಯೊಬ್ಬರ ಜೀವನದಲ್ಲಿ ಇರುವರು. ಮಹಾನ್ ಸಾಧನೆಗಳಿಗೆ ಮಹಿಳೆಯರೇ ಸ್ಫೂರ್ತಿ ಆಗಿರುತ್ತಾರೆ ಎಂದು ಅಭಿಪ್ರಾಯಪಟ್ಟರು.

ದೆಹಲಿಯಲ್ಲಿ ಮೊದಲ ಬಾರಿಗೆ ಮೆಟ್ರೊ ರೈಲನ್ನು ನಡೆಸಿದ ಕನ್ನಡತಿ ಆಶಾಲತಾ ಮಾತನಾಡಿ, ಮಹಿಳೆಯರು ನಮ್ಮ ದೇಶದಲ್ಲಿ ಸಾಕಷ್ಟು ಸಾಧನೆಗಳನ್ನು ಮಾಡಿದ್ದು. ಅದು ವಿಶೇಷವಾಗಿದೆ. ಶೈಕ್ಷಣಿಕವಾಗಿ, ಆರ್ಥಿಕವಾಗಿ, ಸಾಮಾಜಿಕವಾಗಿ, ಮಹಿಳೆಯರು ಸಬಲರಾಗಬೇಕು ಎಂದು ಹೇಳಿದರು.

ನಗರಸಭೆಯ ಮಾಜಿ ಸದಸ್ಯ ನರಸಪ್ಪ ಯಕ್ಲಾಸ್ಪುರ, ಜಿಲ್ಲಾ ಕಾರಾಗೃಹದ ಅಧೀಕ್ಷಕಿ ಅನಿತಾ ಹಿರೇಮನಿ ಮಾತನಾಡಿದರು.

ನಗರಸಭೆ ಮಾಜಿ ಉಪಾಧ್ಯಕ್ಷ ಕೆ ಪಂಪಾಪತಿ, ಕಲಾ ಸಂಕುಲ ಸಂಸ್ಥೆಯ ಅಧ್ಯಕ್ಷೆ ರೇಖಾ ಬಡಿಗೇರ, ಫಾತಿಮಾ ಹುಸೇನ್, ಕಲ್ಯಾಣ ಕರ್ನಾಟಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟಿನ ಗೌರವ ಅಧ್ಯಕ್ಷ ಬಿ. ಬಸವರಾಜ, ರಾಜಶೇಖರ್ ದಿನ್ನಿ, ಅಧ್ಯಕ್ಷ ಅಯ್ಯಣ್ಣ ವಡವಾಟಿ, ಪ್ರಧಾನ ಕಾರ್ಯದರ್ಶಿ ಡಿ. ಶ್ರೀನಿವಾಸ್, ಉಪಾಧ್ಯಕ್ಷ ಸಂಗಮೇಶ್ ಭಂಡಾರಿ, ನರಸಿಂಹಲು ತೋರ್ಸಿ, ಸಂಘಟನಾ ಕಾರ್ಯದರ್ಶಿ ರಮೇಶ್ ಉಪ್ರಾಳ, ಆಲಂಗಣಿ ಗಬ್ಬೂರು, ಸುರೇಶ್ ಸಂಗಾಪುರ ಉಪಸ್ಥಿತರಿದ್ದರು.

ಕಲಾವತಿ ದಯಾನಂದ ಕನ್ನಡ ಗೀತೆಗಳನ್ನು ಹಾಡಿದರು. ರಾಜಸಾಬ್ ನಿರೂಪಿಸಿದರು. ಮಾರುತಿ ಬಡಿಗೇರ ಸ್ವಾಗತಿಸಿದರು. ವಿವಿಧ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕಿಯರಿಗೆ ಮಹಿಳಾ ಸಾಧಕಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಬಜೆಟ್ ಸಮಾಧಾನ ತಂದಿಲ್ಲ: ಡಿಕೆಶಿ ಆಪ್ತ ಶಾಸಕ ಇಕ್ಬಾಲ್ ಹುಸೇನ್ ಅಸಮಾಧಾನ

**ರಾಮನಗರ, ಮಾ.12:** ರಾಜ್ಯ ಬಜೆಟ್ ಸಮಾಧಾನ ತಂದಿಲ್ಲ. ಬಜೆಟ್‌ಗೆ ಮುಂಚೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಕ್ಷೇತ್ರದ ಸಮಸ್ಯೆಗಳ ಬಗ್ಗೆ ಮನವರಿಕೆ ಮಾಡಿಕೊಟ್ಟು, ವಿಶೇಷ ಅನುದಾನಕ್ಕೆ ಮನವಿ ಮಾಡಿದ್ದೆ. ಪಾರದರ್ಶಕವಾಗಿ ಅನುದಾನ ಕೊಡುತ್ತಾರೆಂಬ ನಂಬಿಕೆ ಇತ್ತು. ಈಗ ಅದು ಹುಸಿಯಾಗಿದೆ ಎಂದು ಡಿಸಿಎಂ ಆಪ್ತ ಹಾಗೂ ರಾಮನಗರ ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಅಸಮಾಧಾನ ವ್ಯಕ್ತಪಡಿಸಿದರು.

ತಾಲ್ಲೂಕಿನ ಮೊಟ್ಟೆದೊಡ್ಡಿಯಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ಮಳೆಗೆ ಭಕ್ಷಿಕೆರೆ ಒಡೆದು ಪ್ರವಾಹ ಉಂಟಾಗಿದ್ದರ ಬಗ್ಗೆ ಫೋಟೊ ಸಮೇತ ಮುಖ್ಯಮಂತ್ರಿಗೆ ಮಾಹಿತಿ ನೀಡಿದ್ದೆ. ಕ್ಷೇತ್ರದ ರಸ್ತೆ, ಚರಂಡಿ ಹಾಗೂ ನೀರಾವರಿ ಅಗತ್ಯಗಳ ಕುರಿತು ನಾಲ್ಕೈದು ಬಾರಿ ಮನವಿ ಮಾಡಿದ್ದೆ. ಹಿಂದೆ ಇದ್ದವರು ಕ್ಷೇತ್ರವನ್ನು ಅಭಿವೃದ್ಧಿ ಮಾಡಿಲ್ಲ. ಈಗ, ಮುಖ್ಯಮಂತ್ರಿ ಸಹ ಏನೂ ಕೊಡಲಿಲ್ಲ. ಇದರಿಂದಾಗಿ ನೋವಾಗಿದೆ' ಎಂದರು.

'ಅಭಿವೃದ್ಧಿಗಾಗಿ ನಾವೀಗ ಉಪ



ಮುಖ್ಯಮಂತ್ರಿ ಹಿಂದೆಯೇ ಹೋಗಬೇಕು. ನಮ್ಮ ಕಷ್ಟ-ಸುಖವನ್ನು ಅವರ ಮೇಲೆಯೇ ಹಾಕಬೇಕು. ಹಿಂದೆ ಅವರಿಂದಲೇ ಕೆಲಸ ಮಾಡಿಸಿಕೊಂಡಿದ್ದೆ. ಮುಂದೆಯೂ ಅವರ ಮೇಲೆ ಭಾರ ಹಾಕಬೇಕಾಗುತ್ತದೆ. ನಮ್ಮ ಜಿಲ್ಲೆಯವರೇ ಆದ ಅವರಿಗೂ ಕ್ಷೇತ್ರದ ಜವಾಬ್ದಾರಿ ಇದೆ' ಎಂದು ಹೇಳಿದರು.'ನಮ್ಮ ಗುರುಗಳು ಇನ್ನೂ ಜಪದಿಂದ ಎದ್ದಿಲ್ಲ. ಬಹುಶಃ ಯುಗಾದಿ ಬಳಿಕ ಎಚ್ಚರವಾಗುತ್ತಾರೆ. ಸದ್ಯ ಅಧಿವೇಶನ ನಡೆಯುತ್ತಿದ್ದು, ಯುಗಾದಿ ನಂತರ ಒಳ್ಳೆಯ ಸುದ್ದಿ ಸಿಗಲಿದೆ. ನಮ್ಮ ನಾಯಕ ಡಿ.ಕೆ. ಶಿವಕುಮಾರ್ ಅವರ ಶ್ರಮಕ್ಕೆ ಒಳ್ಳೆಯ ಫಲಿತಾಂಶ ಸಿಕ್ಕೆ ಸಿಗುತ್ತದೆ' ಎಂದು ಮುಖ್ಯಮಂತ್ರಿ ಬದಲಾವಣೆ ಕುರಿತ ಪ್ರಶ್ನೆಗೆ ಪ್ರತಿಕ್ರಿಯಿಸಿದರು.

# ಶ್ರೀಶೈಲ ಮಲ್ಲಿಕಾರ್ಜುನನ ದರ್ಶನಕ್ಕೆ ಬೆಂಕಿಯಂಥ ಬಿಸಿಲು ಲೆಕ್ಕಿಸದೇ ಭಕ್ತರ ಪಾದಯಾತ್ರೆ

**ರಾಯಚೂರು, ಮಾ.12:** ಆಂಧ್ರಪ್ರದೇಶದ ನಂದ್ಯಾಲ ಜಿಲ್ಲೆಯ ನಲ್ಲಮಲ ಅರಣ್ಯದ ಪ್ರದೇಶದಲ್ಲಿರುವ ಶ್ರೀಶೈಲ ಮಲ್ಲಿಕಾರ್ಜುನನ ದರ್ಶನ ಯುಗಾದಿಯ ಹಬ್ಬದ ದಿನದಂದು ಪಡೆಯುವುದು ಅತ್ಯಂತ ಪುಣ್ಯದ ದಿನವೆಂದು ಪರಿಗಣಿಸಲಗುತ್ತದೆ. ಆದ್ದರಿಂದ ವಿಜಯಪುರ, ಬಾಗಲಕೋಟೆ, ಯಾದಗಿರಿ ಹಾಗೂ ಕಲಬುರಗಿ ಜಿಲ್ಲೆಗಳ ಭಕ್ತರ ದಂಡು ಹಗಲು-ರಾತ್ರಿ ಎನ್ನದೇ ಬೆಂಕಿಯಂಥ ಬಿಸಿಲನ್ನೂ ಲೆಕ್ಕಿಸದೇ ಪಾದಯಾತ್ರೆಯಲ್ಲಿ ರಾಯಚೂರು ಮೂಲಕ ಇವರ ಯಾತ್ರೆ ಸಾಗುತ್ತಿದೆ. ಬೆಳಗಿನಜಾವ ಹಾಗೂ ಮುಸ್ಸಂಜೆ ವೇಳೆಯಲ್ಲಿ ಅಧಿಕ ಪ್ರಮಾಣದಲ್ಲಿ ಭಕ್ತರ ದಂಡು ಕಂಡುಬರುತ್ತಿದೆ.

# ಅಮೆರಿಕದ ನೆಲೆಗಳನ್ನು ಮುಚ್ಚದಿದ್ದರೆ ಅವುಗಳ ಮೇಲೆ ದಾಳಿ: ಖಮೇನಿ ಎಚ್ಚರಿಕೆ

**ಟೆಹ್ರಾನ್, ಮಾ.12:** ಇರಾನ್‌ನ ಹೊಸ ಸರ್ವೋಚ್ಚ ನಾಯಕ ಮೊಜ್ತಬಾ ಖಮೇನಿ ಗುರುವಾರ, ಟೆಹ್ರಾನ್ ಈ ಪ್ರದೇಶದಲ್ಲಿನ ಅಮೆರಿಕದ ಸೇನಾ ನೆಲೆಗಳನ್ನು ಮುಚ್ಚದಿದ್ದರೆ ಅವುಗಳ ಮೇಲೆ ದಾಳಿ ಮುಂದುವರಿಸುವುದಾಗಿ ಎಚ್ಚರಿಕೆ ಕೊಟ್ಟಿದ್ದಾರೆ. ಆದರೆ ಇರಾನ್ ತನ್ನ ನೆರೆಹೊರೆಯವರೊಂದಿಗೆ ಸ್ನೇಹ ಸಂಬಂಧವನ್ನು ಬಯಸುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

ರಾಷ್ಟ್ರಕ್ಕೆ ನೀಡಿದ ತಮ್ಮ ಮೊದಲ ದೂರದರ್ಶನ ಸಂದೇಶದಲ್ಲಿ, ಇರಾನ್ ನೆರೆಯ ರಾಷ್ಟ್ರಗಳೊಂದಿಗೆ "ಸ್ನೇಹ"ದಲ್ಲಿ ನಂಬಿಕೆ ಇಟ್ಟಿದೆ ಮತ್ತು ಅವರೊಂದಿಗೆ ಸಂಬಂಧವನ್ನು ಬಲಪಡಿಸಲು ಬಯಸಿದೆ ಎಂದು ಖಮೇನಿ ಹೇಳಿದರು, ಆದರೆ ಈ ಪ್ರದೇಶದಲ್ಲಿನ ಅಮೆರಿಕದ ನೆಲೆಗಳು ಇರಾನ್ ಮೇಲೆ ದಾಳಿ ನಡೆಸುತ್ತಿದ್ದವು, ಅವು ಕಾನೂನುಬದ್ಧ ಗುರಿಗಳಾಗಿ ಉಳಿಯುತ್ತವೆ ಎಂದು ಎಚ್ಚರಿಸಿದರು.

"ಈ ಪ್ರದೇಶದಲ್ಲಿನ ಎಲ್ಲಾ ಅಮೆರಿಕದ ನೆಲೆಗಳನ್ನು ತಕ್ಷಣವೇ ಮುಚ್ಚಬೇಕು, ಇಲ್ಲದಿದ್ದರೆ ಅವುಗಳ ಮೇಲೆ ದಾಳಿ ಮಾಡಲಾಗುತ್ತದೆ" ಎಂದು ಅವರು ಅಧಿಕಾರ ವಹಿಸಿಕೊಂಡ ನಂತರದ ತಮ್ಮ ಮೊದಲ ಸಾರ್ವಜನಿಕ



ಸಂದೇಶದಲ್ಲಿ ಹೇಳಿದರು.

ಪ್ರಮುಖ ಜಾಗತಿಕ ತೈಲ ಹಡಗು ಮಾರ್ಗವಾದ ಹಾರ್ಮುಜ್ ಜಲಸಂಧಿಯು ಇರಾನ್‌ನ ಶತ್ರುಗಳ ವಿರುದ್ಧ "ಒತ್ತಡದ ಸಾಧನ" ವಾಗಿ ಮುಚ್ಚಲ್ಪಡುತ್ತದೆ ಎಂದು ಅವರು ಎಚ್ಚರಿಸಿದ್ದಾರೆ. ಇರಾನ್ ಮೇಲೆ ದಾಳಿ ನಡೆಸಲು ಅಮೆರಿಕವು ತಮ್ಮ ಪ್ರದೇಶಗಳನ್ನು ಬಳಸಿಕೊಂಡಿದೆ ಎಂಬುದನ್ನು ಹಲವಾರು ಗಲ್ಫ್ ರಾಷ್ಟ್ರಗಳು ನಿರಾಕರಿಸಿವೆ ಮತ್ತು ಇರಾನ್ ಪಡೆಗಳು ತಮ್ಮ ನೆಲದಲ್ಲಿರುವ ನಾಗರಿಕ ಮೂಲಸೌಕರ್ಯ ಮತ್ತು ಇಂಧನ ಸೌಲಭ್ಯಗಳನ್ನು ಹೊಡೆದುರುಳಿಸುತ್ತಿವೆ ಎಂದು ಆರೋಪಿಸಿವೆ.

ಇರಾನ್ ಅಮೆರಿಕದ ಮಿಲಿಟರಿ ಸ್ಥಾಪನೆಗಳನ್ನು ಮಾತ್ರ ಗುರಿಯಾಗಿಸಿಕೊಂಡಿದೆ ಎಂದು ಖಮೇನಿ ಹೇಳಿದ್ದರೂ, ಪ್ರಾದೇಶಿಕ ಅಧಿಕಾರಿಗಳು ನಾಗರಿಕ ಮತ್ತು ತೈಲ ಸಂಬಂಧಿತ ಸೌಲಭ್ಯಗಳ ಮೇಲೆ ಹಲವಾರು ದಾಳಿಗಳನ್ನು ವರದಿ ಮಾಡಿದ್ದಾರೆ.

ದೂರದರ್ಶನದ ಸಂದೇಶದಲ್ಲಿ, ಖಮೇನಿ "ಇರಾನಿಯನ್ನರಲ್ಲಿ ಏಕತೆಗಾಗಿ ಮತ್ತು ಇರಾನ್‌ನಲ್ಲಿ ಪ್ರಾಬಲ್ಯ ಸಾಧಿಸುವ ಅಥವಾ ವಿಭಜಿಸುವ ಪ್ರಯತ್ನಗಳು ಎಂದು ಅವರು ವಿವರಿಸಿದ್ದನ್ನು ವಿರೋಧಿಸಿದ್ದಕ್ಕಾಗಿ ದೇಶದ ಸಶಸ್ತ್ರ ಪಡೆಗಳನ್ನು ಶ್ಲಾಘಿಸಿದರು" ಎಂದು ಕರೆ ನೀಡಿದರು. ನಮ್ಮ ದೇಶವು ಒತ್ತಡ ಮತ್ತು ದಾಳಿಯಲ್ಲಿರುವ ಸಮಯದಲ್ಲಿ ಉತ್ತಮ ಕೆಲಸ ಮಾಡುತ್ತಿರುವ ಧೈರ್ಯಶಾಲಿ ಹೋರಾಟಗಾರರಿಗೆ ನಾನು ಧನ್ಯವಾದ ಹೇಳುತ್ತೇನೆ" ಎಂದು ಅವರು ಹೇಳಿದರು, ಇರಾನ್ "ತನ್ನ ಹುತಾತ್ಮರ ರಕ್ತಕ್ಕೆ ಸೇಡು ತೀರಿಸಿಕೊಳ್ಳುತ್ತದೆ" ಎಂದು ಅವರು ಹೇಳಿದರು.

ಸಂಘರ್ಷದಲ್ಲಿ ಗಾಯಗೊಂಡವರಿಗೆ "ಉಚಿತ ವೈದ್ಯಕೀಯ ಚಿಕಿತ್ಸೆ" ನೀಡಲಾಗುವುದು ಮತ್ತು ನಷ್ಟ ಅನುಭವಿಸಿದ ಜನರಿಗೆ ಸರ್ಕಾರ ಆರ್ಥಿಕ ಪರಿಹಾರವನ್ನು ನೀಡುತ್ತದೆ ಎಂದು ಖಮೇನಿ ಹೇಳಿದರು. ಯೆಮೆನ್‌ನಲ್ಲಿನ ಪ್ರತಿರೋಧ ಚಳುವಳಿ ಮತ್ತು ಇರಾಕ್‌ನಲ್ಲಿನ ಸಶಸ್ತ್ರ ಬಣಗಳು ಸೇರಿದಂತೆ ಈ ಪ್ರದೇಶದ ಮಿತ್ರ ಗುಂಪುಗಳು ಇರಾನ್ ಅನ್ನು ಬೆಂಬಲಿಸಲು ಸಿದ್ಧವಾಗಿವೆ ಎಂದು ಅವರು ಹೇಳಿದರು.

"ಯೆಮನ್‌ನಲ್ಲಿನ ಪ್ರತಿರೋಧವು ಸಹ ಕೆಲಸವನ್ನು ಮಾಡುತ್ತದೆ" ಎಂದು ಅವರು ಹೇಳಿದರು, ಇರಾಕಿನ ಸಶಸ್ತ್ರ ಗುಂಪುಗಳು ಸಹ ಸಹಾಯ ಮಾಡಲು ಸಿದ್ಧವಾಗಿವೆ ಎಂದು ಹೇಳಿದರು.

# ಮಧ್ಯಪ್ರಾಚ್ಯದ ಸಂಘರ್ಷ ಶೀಘ್ರ ಅಂತ್ಯ



- ಕದನ ವಿರಾಮದ ಹಂತಕ್ಕೆ ಬಂದ ಅಮೇರಿಕಾ, ಇರಾನ್
- ಹಗೆತನ ಮುಂದುವರಿಸಿದ ಇಸ್ರೇಲ್

**ನವದೆಹಲಿ :** ಕಳೆದ ಹದಿಮೂರು ದಿನಗಳಿಂದ ಇರಾನ್ ವಿರುದ್ಧ ನಡೆಯುತ್ತಿರುವ ಅಮೇರಿಕಾ ಇಸ್ರೇಲ್‌ನ ಯುದ್ಧ ಶೀಘ್ರದಲ್ಲೇ ಅಂತ್ಯವಾಗುವ ಲಕ್ಷಣಗಳು ಗೋಚರವಾಗುತ್ತಿವೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಯುದ್ಧ ನಿಲ್ಲಿಸುವ ಸುಳಿವು ನೀಡಿದ್ದಾರೆ. ಖಾಸಗಿ ಮಾಧ್ಯಮಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ಇರಾನ್ ಜೊತೆಗಿನ ಸಂಘರ್ಷವನ್ನು ನಾನು ಯಾವಾಗ ಬೇಕಾದರೂ ಕೊನೆಗೊಳಿಸಬಹುದು ಇರಾನ್ ನಲ್ಲಿ ಗುರಿಯಾಗಿಸಲು ಏನು ಉಳಿದಿಲ್ಲ ಇರಾನ್‌ನ ಎಲ್ಲ ಸಾಮರ್ಥ್ಯಗಳು ನಾಶವಾಗಿವೆ ಎಂದು ಹೇಳಿದ್ದಾರೆ.

ಆದರೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿಕೆಗೆ ಇಸ್ರೇಲ್ ಭಿನ್ನಾಭಿಪ್ರಾಯ ವ್ಯಕ್ತಪಡಿಸಿದೆ. ಅಗತ್ಯವಿರುವವರೆಗೂ ಯುದ್ಧ ಮುಂದುವರಿಸುತ್ತೇವೆ ಪ್ರಸುತ್ತ ಆಡಳಿತ ವಿರುದ್ಧ ಕ್ರಮ ಕೈಗೊಳ್ಳಲು ಇರಾನ್ ಜನರು ಒತ್ತಾಯಿಸುತ್ತಾರೆ ನಾವು ನಮ್ಮ ಗುರಿಗಳನ್ನು ಮುಂದುವರಿಸುತ್ತೇವೆ ಎಂದು ಇಸ್ರೇಲ್ ರಕ್ಷಣಾ ಸಚಿವ ಇಸ್ರೇಲ್ ಕಾಟ್ಜ್ ಹೇಳಿದ್ದಾರೆ.

ಅಮೆರಿಕಾ ಇಸ್ರೇಲ್ ಭಿನ್ನಾಭಿಪ್ರಾಯಗಳ ನಡುವೆ ಈ ಸಂಘರ್ಷವನ್ನು ಅಂತ್ಯಗೊಳಿಸಲು ಮೂರು ಷರತ್ತುಗಳಿದೆ ಎಂದು ಇರಾನ್ ಹೇಳಿದೆ. ಪಾಕಿಸ್ತಾನ ಮತ್ತು ರಷ್ಯಾ ಜೊತೆಗಿನ ಮಾತುಕತೆಯಲ್ಲಿ ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಮೂರು ಷರತ್ತು ವಿಧಿಸಿದ್ದಾರೆ. ಇರಾನ್‌ನ "ಕಾನೂನುಬದ್ಧ ಹಕ್ಕುಗಳ" ಮಾನ್ಯತೆ ನೀಡಬೇಕು, ಯುದ್ಧ ಹಾನಿಗೆ ಪರಿಹಾರ ಪಾವತಿಯಾಗಬೇಕು, ಭವಿಷ್ಯದ ಆಕ್ರಮಣದ ವಿರುದ್ಧ ದೃಢವಾದ ಅಂತರರಾಷ್ಟ್ರೀಯ ಭರವಸೆಗಳು ಸಿಗಬೇಕು ಈ ಭರವಸೆಗಳು ಸಿಕ್ಕರೆ ಮಾತ್ರ ಕದನ ವಿರಾಮ ಮಾತುಕತೆಗೆ ಸಿದ್ಧ ಎಂದು ಇರಾನ್ ಹೇಳಿದೆ.

ಅಲ್ಲದೇ ಈ ಈ ಬಗ್ಗೆ ನಿರ್ಧಾರವಾಗುವವರೆಗೂ ಮಧ್ಯಪ್ರಾಚ್ಯದಲ್ಲಿರುವ ಅಮೆರಿಕದ ಸೇನಾ ನೆಲೆಗಳ ಮೇಲಿನ ದಾಳಿಗಳು ಮುಂದುವರಿಯಲಿವೆ ಎಂದು ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ಹೇಳಿದೆ. ಇರಾನ್ ಪಡೆಗಳು ಹಾರ್ಮುಜ್ ಜಲಸಂಧಿಯನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡುತ್ತಿವೆ ಶತ್ರುಗಳಿಗೆ ಅದರ ಮೂಲಕ ಹಾದುಹೋಗುವ ಹಕ್ಕಿಲ್ಲ ಇರಾನ್ ತನ್ನ ಸ್ವಾತಂತ್ರ್ಯವನ್ನು ರಕ್ಷಿಸಿಕೊಳ್ಳುತ್ತಿದೆ ಮತ್ತು ಕ್ಷಿಪಣಿ ಮತ್ತು ಡ್ರೋನ್ ದಾಳಿಗಳು ಮುಂದುವರಿಸುತ್ತದೆ ಎಂದು IRGC ಹೇಳಿದೆ.

**ಸಂಘರ್ಷದ ನಡುವೆ ರಾಜತಾಂತ್ರಿಕ ಗೆಲುವು**

ಕದನ ವಿರಾಮದ ಚರ್ಚೆಗಳ ನಡುವೆ ಮಧ್ಯಪ್ರಾಚ್ಯದಲ್ಲಿ ಅನಿಶ್ಚಿತತೆ ಕಾಡುತ್ತಿದೆ. ಹಾರ್ಮುಜ್ ಜಲಸಂಧಿ ಬಂಧ್ ಆಗಿರುವ ಪರಿಣಾಮ ಜಾಗತಿಕ ಮಟ್ಟದಲ್ಲಿ ಕಚ್ಚಾತೈಲದ ಅಭಾವ ಸೃಷ್ಟಿಯಾಗುತ್ತಿದೆ. ಈ ಭಾಗದಲ್ಲಿ ಬಿಗಿಹಿಡಿತ ಸಾಧಿಸಿರುವ ಇರಾನ್ ಈಗ ಭಾರತ ಬೆನ್ನಿಗೆ ನಿಂತಿದೆ.

ಭಾರತದ ಧ್ವಜ ಹೊತ್ತ ತೈಲ ಟ್ಯಾಂಕರ್‌ಗಳಿಗೆ ಜಲಸಂಧಿ ಮೂಲಕ ಪ್ರಯಾಣಿಸಲು ಇರಾನ್ ಅವಕಾಶ ನೀಡಿದೆ. ನಮ್ಮ ವಿದೇಶಾಂಗ ಸಚಿವ ಎಸ್. ಜೈಶಂಕರ್ ಮತ್ತು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ ನಡುವಿನ ಮಾತುಕತೆಯ ಬಳಿ ಮಹತ್ವದ ಬೆಳವಣಿಗೆಯಾಗಿದೆ. ಅಮೆರಿಕ, ಯುರೋಪ್ ಮತ್ತು ಇಸ್ರೇಲ್‌ನ ಹಡಗುಗಳು ನಿರ್ಬಂಧಗಳನ್ನು ಎದುರಿಸುತ್ತಲೇ ಇದ್ದರೂ ಕನಿಷ್ಠ ಎರಡು ಭಾರತೀಯ ಟ್ಯಾಂಕರ್‌ಗಳಾದ ಪುಷ್ಪಕ್ ಮತ್ತು ಪರಿಮಳ್ ಆಯಕಟ್ಟಿನ ನಿರ್ಣಾಯಕ ಜಲಸಂಧಿಯ ಮೂಲಕ ಸುರಕ್ಷಿತವಾಗಿ ಹೊರ ಬಂದಿವೆ

ಎರಡು ದಿನಗಳ ಹಿಂದೆ ಭಾರತಕ್ಕೆ ಬರಬೇಕಿದ್ದ ಬ್ಯಾಂಕಾಕ್ ಹಡಗಿನ ಮೇಲೆ ದಾಳಿ ಮಾಡಿದ್ದ ಇರಾನ್ ಈಗ ಭಾರತ ಹಡಗುಗಳ ಪ್ರಯಾಣಕ್ಕೆ ಅನುಮತಿ ನೀಡಿದೆ.

ಹಾರ್ಮುಜ್ ಜಲಸಂಧಿಯಲ್ಲಿ ಬಿಗಿ ಹಿಡಿತದ ನಡುವೆ ಹಾರ್ಮುಜ್ ಜಲಸಂಧಿ ಕ್ರಾಸ್ ಮಾಡಿ ಭಾರತಕ್ಕೆ ಹಡಗು ಬಂದಿದೆ.

ಲೈಬೀರಿಯನ್ ಧ್ವಜವನ್ನು ಹೊಂದಿರುವ ಟ್ಯಾಂಕರ್ ಶೆನ್ಲಾಂಗ್ ಸೂಯೆಜ್‌ಮ್ಯಾಕ್ಸ್ ಹಾರ್ಮುಜ್ ಜಲಸಂಧಿಯನ್ನು ಯಶಸ್ವಿಯಾಗಿ ದಾಟಿ ನಿನ್ನೆ ಮುಂಬೈ ಬಂದರಿನಲ್ಲಿ ಬಂದಿಳಿದಿದೆ.

ಯುದ್ಧ ಭುಗಿಲೆದ್ದ ನಂತರ ಭಾರತಕ್ಕೆ ಬಂದ ಮೊದಲ ಕಚ್ಚಾ ಸಾಗಣೆ ಇದಾಗಿದ್ದು, ಮಾರ್ಚ್ 1 ರಂದು ರಾಸ್ ತನುರಾ ಬಂದರಿನಿಂದ 135,335 ಮೆಟ್ರಿಕ್ ಟನ್ ಸೌದಿ ಅರೇಬಿಯನ್ ಕಚ್ಚಾತೈಲವನ್ನು ತುಂಬಿದ್ದ ಹಡಗು ಮಾರ್ಚ್ 8 ರಂದು ಜಲಸಂಧಿಯ ಮೂಲಕ ಹೊರಟಿತ್ತು ಎನ್ನಲಾಗಿದೆ.

# ಇರಾನ್ ಪ್ರಜೆಗಳ ಸಾವಿಗೆ ಪ್ರತೀಕಾರದ ಎಚ್ಚರಿಕೆ

**ಟೆಹರಾನ್, ಮಾ.12:** ಇರಾನ್‌ನ ಸರ್ವೋಚ್ಚ ನಾಯಕನಾಗಿ ಅಧಿಕಾರ ವಹಿಸಿಕೊಂಡ ನಂತರ ಜಗತ್ತಿಗೆ ಮೊದಲ ಸಂದೇಶ ರವಾನಿಸಿರುವ ಮೊಜ್ತಬಾ ಖಮೇನಿ, ಅಮೆರಿಕ ಮತ್ತು ಇಸ್ರೇಲ್‌ಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ. ಇತ್ತೀಚಿನ ದಾಳಿಗಳಲ್ಲಿ ಮೃತಪಟ್ಟ ಇರಾನಿಯನ್ನರ ಪ್ರತಿ ಸಾವಿಗೆ ಪ್ರತೀಕಾರ ತೀರಿಸಿಕೊಳ್ಳಲಾಗುತ್ತದೆ. ಅಗತ್ಯವಿದ್ದರೆ ಸಂಘರ್ಷ ಹೊಸ ಮಜಲುಗಳನ್ನು ಪಡೆದುಕೊಳ್ಳುತ್ತದೆ ಎಂದು ಅವರು ಹೇಳಿದ್ದಾರೆ.

ಇರಾನ್ ತನ್ನ ಹುತಾತ್ಮರ ರಕ್ತದ ಸೇಡು ತೀರಿಸಿಕೊಳ್ಳುವುದರಿಂದ ಹಿಂದೆ ಸರಿಯುವುದಿಲ್ಲ. ಇದು ದೇಶಕ್ಕೆ ಪ್ರಮುಖ ಆದ್ಯತೆಯಾಗಿ ಉಳಿದಿದೆ ಎಂದು ಖಮೇನಿ ಹೇಳಿದ್ದಾರೆ. ಪ್ರತೀಕಾರದ ಕ್ರಮದ ಒಂದು ಭಾಗವು ಈಗಾಗಲೇ ಪ್ರಾರಂಭವಾಗಿದೆ. ಆದರೆ ಅದು ಸಂಪೂರ್ಣವಾಗಿ ಪೂರ್ಣಗೊಳ್ಳುವವರೆಗೆ ಅದು ಇರಾನ್‌ನ ಆದ್ಯತೆಯಾಗಿ ಉಳಿಯುತ್ತದೆ ಎಂದರು. ತಮ್ಮ ಸಂದೇಶದಲ್ಲಿ ಮೊಜ್ತಬಾ ಖಮೇನಿ ಇರಾನ್‌ನ ಮಿಲಿಟರಿ ಕಾರ್ಯತಂತ್ರವು ಕೇವಲ ರಕ್ಷಣಾತ್ಮಕವಲ್ಲ ಎಂದು ಹೇಳಿದ್ದಾರೆ. ಅಗತ್ಯವಿದ್ದರೆ, ಪ್ರಸ್ತುತ ಸಂಘರ್ಷದ ಸಮಯದಲ್ಲಿ ಇತರ ಮಜಲು ತೆರೆಯಬಹುದು. ಇದು ಪ್ರದೇಶದಾದ್ಯಂತ ಉದ್ವಿಗ್ನತೆಯನ್ನು ಮತ್ತಷ್ಟು ಹೆಚ್ಚಿಸಬಹುದು ಎಂದು ಅವರು ಎಚ್ಚರಿಸಿದ್ದಾರೆ. ಇರಾನ್ ವಿರುದ್ಧ ದಾಳಿ ನಡೆಸಲಾಗುತ್ತಿರುವ ನೆರೆಯ ರಾಷ್ಟ್ರಗಳಲ್ಲಿರುವ ಅಮೆರಿಕದ ಮಿಲಿಟರಿ ನೆಲೆಗಳನ್ನು ಗುರಿಯಾಗಿಸಿಕೊಂಡು ಇರಾನ್ ದಾಳಿ ಮುಂದುವರಿಸಲಿದೆ ಎಂದರು.

ಖಮೇನಿ ತಮ್ಮ ಹೇಳಿಕೆಯಲ್ಲಿ, ಹಾರ್ಮುಜ್ ಜಲಸಂಧಿಯನ್ನು ಮುಚ್ಚುವ ಒತ್ತಡವನ್ನು ಸಹ ಉಲ್ಲೇಖಿಸಿದ್ದಾರೆ. ಶತ್ರುಗಳ ಮೇಲೆ ಒತ್ತಡ ಹೇರಲು ಇದು ಪರಿಣಾಮಕಾರಿ ಮಾರ್ಗವಾಗಿದೆ. ಆದಾಗ್ಯೂ, ಇರಾನ್ ತನ್ನ ನೆರೆಹೊರೆಯವರೊಂದಿಗೆ ಸ್ನೇಹ ಸಂಬಂಧವನ್ನು ಕಾಪಾಡಿಕೊಳ್ಳಲು ಬಯಸುತ್ತದೆ ಎಂದರು.

ಇದೇ ವೇಳೆ ಇರಾನ್‌ನ ಹೊಸ ಸರ್ವೋಚ್ಚ ನಾಯಕ, ಈ ಪ್ರದೇಶದಲ್ಲಿ ಸಕ್ರಿಯವಾಗಿ ಹೋರಾಡುತ್ತಿರುವವರಿಗೆ ಧನ್ಯವಾದಗಳನ್ನು ಅರ್ಪಿಸಿದರು. ಯೆಮೆನ್‌ನ ಹೌತಿ ಬಂಡುಕೋರರು, ಲೆಬನಾನ್‌ನ ಹಿಜ್ಬೊಲ್ಲಾ ಮತ್ತು ಇರಾಕಿ ಮಿತ್ರ ಗುಂಪುಗಳನ್ನು ಉಲ್ಲೇಖಿಸಿ, ಅವರೆಲ್ಲರೂ ಇರಾನ್ ಜೊತೆ ನಿಂತಿದ್ದಾರೆ ಎಂದರು. ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನತೆ ಹೆಚ್ಚಾಗುತ್ತಿರುವ ನಡುವೆ ಇರಾನ್‌ನ ಹೊಸ ನಾಯಕ ಈ ಹೇಳಿಕೆ ನೀಡಿದ್ದಾರೆ. ಯುಎಸ್ ಮತ್ತು ಇಸ್ರೇಲಿ ದಾಳಿಯಲ್ಲಿ ಹತ್ಯೆಯಾದ ಮೊಜ್ತಬಾ ಖಮೇನಿ ತಂದೆ ಅಯತೊಲ್ಲಾ ಅಲಿ ಖಮೇನಿ ಅವರ ನಂತರ ಸುಪ್ರೀಂ ನಾಯಕರಾಗಿ ನೇಮಕಗೊಂಡಿದ್ದಾರೆ.

# ಇರಾನ್ ಸರ್ಕಾರ ಪತನದ ತಕ್ಷಣದ ಅಪಾಯವಿಲ್ಲ: ಅಮೆರಿಕ ಗುಪ್ತಚರ ವರದಿ

ವಾಷಿಂಗ್ಟನ್: ಇರಾನ್‌ನ ರಾಜಕೀಯ ನಾಯಕತ್ವ ಇನ್ನೂ ಅಖಂಡವಾಗಿದ್ದು, ಸರ್ಕಾರ ಪತನಗೊಳ್ಳುವ ತಕ್ಷಣದ ಅಪಾಯ ಕಾಣಿಸುತ್ತಿಲ್ಲ ಎಂದು ಅಮೆರಿಕದ ಗುಪ್ತಚರ ಸಂಸ್ಥೆಗಳು ಅಂದಾಜಿಸಿವೆ. ಈ ವಿಷಯದ ಬಗ್ಗೆ ತಿಳಿದಿರುವ ಮೂರು ಮೂಲಗಳನ್ನು ಉಲ್ಲೇಖಿಸಿರುವ ವರದಿಯ ಪ್ರಕಾರ, ಇರಾನ್ ನ ಆಡಳಿತ ವ್ಯವಸ್ಥೆ ಇನ್ನೂ ಸ್ಥಿರವಾಗಿದ್ದು, ದೇಶದ ಸಾರ್ವಜನಿಕರ ಮೇಲೆ ಸರ್ಕಾರದ ನಿಯಂತ್ರಣ ಮುಂದುವರಿದಿದೆ ಎಂಬುದನ್ನು ಗುಪ್ತಚರ ವರದಿಗಳು ಸೂಚಿಸುತ್ತಿವೆ.

ಈ ಮೌಲ್ಯಮಾಪನಗಳೊಂದಿಗೆ ಪರಿಚಿತರಾದ ಮೂಲವೊಂದು, ಬಹುಪಾಲು ಗುಪ್ತಚರ ವರದಿಗಳು ಆಡಳಿತವು ಪತನದ ತಕ್ಷಣದ ಅಪಾಯದಲ್ಲಿಲ್ಲ ಎಂಬುದನ್ನು ಸೂಚಿಸುತ್ತಿವೆ. ಜೊತೆಗೆ ಇರಾನ್ ಸರ್ಕಾರ ಸಾರ್ವಜನಿಕರ ಮೇಲೆ ತನ್ನ ನಿಯಂತ್ರಣವನ್ನು ಇನ್ನೂ ಕಾಯ್ದುಕೊಂಡಿದೆ ಎಂದು ಹೇಳಿದೆ.

# ಇರಾಕ್ ಕರಾವಳಿಯಲ್ಲಿ ತೈಲ ಟ್ಯಾಂಕರ್ ಮೇಲೆ ಆತ್ಮಾಹುತಿ ದಾಳಿ: ಭಾರತೀಯ ಪ್ರಜೆ ಸಾವು

ಬಸ್ರಾ (ಇರಾಕ್), ಮಾ.12: ಇರಾಕ್‌ನ ಕರಾವಳಿ ಪಟ್ಟಣದ ಬಸ್ರಾ ಸಮೀಪ ನಡೆದ ದಾಳಿಯಲ್ಲಿ ಒಬ್ಬ ಭಾರತೀಯ ಸಿಬ್ಬಂದಿ ಮೃತಪಟ್ಟಿದ್ದು, ಉಳಿದ 27 ಸಿಬ್ಬಂದಿಯನ್ನು ಸುರಕ್ಷಿತವಾಗಿ ರಕ್ಷಿಸಿ ಬಸ್ರಾಕ್ಕೆ ಕರೆದೊಯ್ಯಲಾಗಿದೆ ಎಂದು ತಿಳಿದುಬಂದಿದೆ.

ಬಸ್ರಾ ಕರಾವಳಿಯ ಸಮೀಪ ತೈಲ ಟ್ಯಾಂಕರ್ ಮೇಲೆ ನಡೆದ ಆತ್ಮಾಹುತಿ ದಾಳಿಯಲ್ಲಿ ಭಾರತೀಯ ಪ್ರಜೆಯೊಬ್ಬರು ಸಾವನ್ನಪ್ಪಿದ್ದಾರೆಂದು ತಿಳಿದುಬಂದಿದೆ.

ಅಮೆರಿಕದ ಕಂಪನಿಗೆ ಸೇರಿದ ಸಫೇಸಿಯಾ ವಿಷ್ಣು ಎಂಬ ತೈಲ ಟ್ಯಾಂಕರ್ ಮೇಲೆ ಇರಾನ್ ಮೂಲದ ಆತ್ಮಾಹುತಿ ದೋಣಿ ಮೂಲಕ ದಾಳಿ ನಡೆದಿದ್ದು, ಈ ವೇಳೆ ಈ ದುರ್ಘಟನೆ ಸಂಭವಿಸಿದೆ ಎಂದು ಮೂಲಗಳು ತಿಳಿಸಿವೆ.

ದಕ್ಷಿಣ ಇರಾಕ್‌ನ ಖೋರ್ ಅಲ್ ಜುಬೈರ್ ಬಂದರು ಸಮೀಪ ಈ ದಾಳಿ ನಡೆದಿದೆ. ಸರಕು ವರ್ಗಾವಣೆ ನಡೆಯುವ ಪ್ರದೇಶದಲ್ಲೇ ದಾಳಿ ನಡೆದಿದೆ ಎಂದು ಇರಾಕ್ ಬಂದರುಗಳ ಸಾಮಾನ್ಯ ಕಂಪನಿಯ ಮಹಾನಿರ್ದೇಶಕ ಫರ್ಹಾನ್ ಅಲ್ ಫರ್ತೂಸಿ ತಿಳಿಸಿದ್ದಾರೆ.

ದಾಳಿಯಲ್ಲಿ ಒಬ್ಬ ಭಾರತೀಯ ಸಿಬ್ಬಂದಿ ಮೃತಪಟ್ಟಿದ್ದು, ಉಳಿದ 27 ಸಿಬ್ಬಂದಿಯನ್ನು ಸುರಕ್ಷಿತವಾಗಿ ರಕ್ಷಿಸಿ ಬಸ್ರಾಕ್ಕೆ ಕರೆದೊಯ್ಯಲಾಗಿದೆ ಎಂದು ತಿಳಿದುಬಂದಿದೆ.

ಇನ್ನು ಮೃತಪಟ್ಟ ಭಾರತೀಯ ಪ್ರಜೆ ಗುರುತನ್ನು ಅಧಿಕಾರಿಗಳು ಇನ್ನೂ ಬಹಿರಂಗಪಡಿಸಿಲ್ಲ. ಈ ಘಟನೆಯ ಬಗ್ಗೆ ಹಡಗು ನಿರ್ವಹಣಾ ಸಂಸ್ಥೆಯ ಮೂಲಗಳು ತೀವ್ರ ವಿಷಾದ ವ್ಯಕ್ತಪಡಿಸಿದ್ದು, ಪಶ್ಚಿಮ ಏಷ್ಯಾದಲ್ಲಿ ಉದ್ಭವಿಸಿರುವ ಉದ್ವಿಗ್ನ ಪರಿಸ್ಥಿತಿಯಲ್ಲಿ ಹಡಗುಗಳಲ್ಲಿ ಕೆಲಸ ಮಾಡುವ ಸಿಬ್ಬಂದಿಗಳ ಭದ್ರತೆಗಾಗಿ ಕ್ರಮ ಕೈಗೊಳ್ಳುವಂತೆ ಭಾರತ ಸರ್ಕಾರವನ್ನು ಆಗ್ರಹಿಸಿವೆ.


ಜಾಗತಿಕ ಮಟ್ಟದಲ್ಲಿ ಸಮುದ್ರ ನಾವಿಕರಲ್ಲಿ ಭಾರತೀಯರ ಪ್ರಮಾಣವು ಸುಮಾರು 15 ಶೇಕಡಾ ಇರುವುದರಿಂದ, ಇಂತಹ ದಾಳಿಗಳಲ್ಲಿ ಭಾರತೀಯರು ಹಾನಿಗೆ ಒಳಗಾಗುವ ಸಾಧ್ಯತೆ ಹೆಚ್ಚಿದೆ ಎಂಬ ಆತಂಕವನ್ನೂ ಮೂಲಗಳು ವ್ಯಕ್ತಪಡಿಸಿವೆ.

ವೆಸೆಲ್ ಫೈಂಡರ್ ವೆಬ್‌ಸೈಟ್‌ನಲ್ಲಿರುವ ಮಾಹಿತಿಯ ಪ್ರಕಾರ, 228.6 ಮೀಟರ್ ಉದ್ದ ಮತ್ತು 32.57 ಮೀಟರ್ ಅಗಲದ ಸಫೇಸಿಯಾ ವಿಷ್ಣು 2007 ರಲ್ಲಿ ನಿರ್ಮಿಸಲಾದ ಕಚ್ಚಾ ತೈಲ ಟ್ಯಾಂಕರ್ ಆಗಿದ್ದು, ಪ್ರಸ್ತುತ ಮಾರ್ಷಲ್ ದ್ವೀಪಗಳ ಧ್ವಜದಡಿಯಲ್ಲಿ ಪ್ರಯಾಣಿಸುತ್ತಿದೆ. ಇದರ ಒಟ್ಟು ತೂಕ ಸುಮಾರು 42,010 ಟನ್ ಆಗಿದೆ.

# ಟಿ20 ವಿಶ್ವಕಪ್‌ನಲ್ಲಿ ವಿವಾದಾತ್ಮಕ ನಿರ್ಧಾರ
## ಕ್ಷಮೆಯಾಚಿಸಿದ ಸೂರ್ಯಕುಮಾರ್ ಯಾದವ್

ಮುಂಬೈ, ಮಾ.12: ದಕ್ಷಿಣ ಆಫ್ರಿಕಾ ವಿರುದ್ಧದ ಟಿ20 ವಿಶ್ವಕಪ್ ಸೂಪರ್ 8 ಪಂದ್ಯಕ್ಕೆ ಆಲ್ ರೌಂಡರ್ ಅಕ್ಷರ್ ಪಟೇಲ್ ಅವರನ್ನು ಕೈಬಿಟ್ಟು, ತಪ್ಪು ಮಾಡಿದೆ ಎಂದು ಭಾರತ ಕ್ರಿಕೆಟ್ ತಂಡದ ನಾಯಕ ಸೂರ್ಯಕುಮಾರ್ ಯಾದವ್ ಒಪ್ಪಿಕೊಂಡಿದ್ದಾರೆ. ಇತ್ತೀಚಿನ ಸಂದರ್ಶನವೊಂದರಲ್ಲಿ ಮಾತನಾಡಿದ ಸೂರ್ಯಕುಮಾರ್, ತಮ್ಮ ನಿರ್ಧಾರದಿಂದ ಅಕ್ಷರ್ ಪಟೇಲ್ ತುಂಬಾ ಅಸಮಾಧಾನಗೊಂಡಿದ್ದರು. ಪಂದ್ಯದ ನಂತರ ವೈಯಕ್ತಿಕವಾಗಿ ಅವರ ಬಳಿ ಕ್ಷಮೆಯಾಚಿಸಿದ್ದಾಗಿ ತಿಳಿಸಿದರು.

ಭಾರತ ಹರಿಣಗಳಿಂದ ಭಾರೀ ಸೋಲನ್ನು ಅನುಭವಿಸಿದ ಕಾರಣದಿಂದ ಸೂರ್ಯ ಕುಮಾರ್ ಯಾದವ್ ಅವರ ನಿರ್ಧಾರ ಭಾರಿ ಚರ್ಚೆಗೆ ಗ್ರಾಸವಾಗಿತ್ತು. ಟೂರ್ನಿಯಲ್ಲಿ ಟೀಂ ಇಂಡಿಯಾದ ಏಕೈಕ ಸೋಲು ಅದು. ಅಕ್ಷರ್ ಪಟೇಲ್



ಗಾಯದ ಸಮಸ್ಯೆಯಿಂದ ನೆದರ್ಲೆಂಡ್ಸ್ ವಿರುದ್ಧದ ಅಂತಿಮ ಲೀಗ್ ಹಂತದ ಪಂದ್ಯದಿಂದ ಹೊರಗುಳಿದಿದ್ದರು. ದಕ್ಷಿಣ ಆಫ್ರಿಕಾ ವಿರುದ್ಧ ವಾಷಿಂಗ್ಟನ್ ಸುಂದರ್ ಅವರನ್ನು ಆಡಿಸಲಾಗಿತ್ತು. ಆದರೆ ಪಂದ್ಯ ಸೋತು ನಂತರ ಅಕ್ಷರ್ ಪಟೇಲ್ ಅವರನ್ನು ತಂಡಕ್ಕೆ ತೆಗೆದುಕೊಳ್ಳದ ಹಿನ್ನೆಲೆಯಲ್ಲಿ ಸೂರ್ಯ ಕುಮಾರ್ ಯಾದವ್ ವಿರುದ್ಧ ತೀವ್ರ ಟೀಕೆಗಳು ವ್ಯಕ್ತವಾಗಿತ್ತು.

ಈ ಕುರಿತು ಮಾತನಾಡಿದ ಸೂರ್ಯ ಕುಮಾರ್ ಯಾದವ್, ಅಕ್ಷರ್ ಪಟೇಲ್ ತುಂಬಾ ಕೋಪಗೊಂಡಿದ್ದರು. ಹರಿಣಗಳ ವಿರುದ್ಧದ ಪಂದ್ಯದಲ್ಲಿ ಅವರು ಇರಬೇಕಿತ್ತು. ಅವರು ಅನುಭವಿ ಆಟಗಾರ, ಫ್ರಾಂಚೈಸಿಯೊಂದರ ನಾಯಕರಾಗಿದ್ದಾರೆ. ಪಂದ್ಯದ ಬಳಿಕ ನಾನು ಕ್ಷಮೆಯಾಚಿಸಿದೆ. ನಾನು ತಪ್ಪು ಮಾಡಿದ್ದೇನೆ, ಕ್ಷಮಿಸಿ ಎಂದು ಅಕ್ಷರ್ ಪಟೇಲ್ ಗೆ ಹೇಳಿದೆ. ಆದರೆ ಇದು ತಂಡದ ನಿರ್ಧಾರವಾಗಿತ್ತು. ಇದರ ಬಗ್ಗೆ ತುಂಬಾ ಚರ್ಚೆಯಾಯಿತು. ಇದರ ಬಗ್ಗೆ ಮಾರನೇ ದಿನ ಮಾತನಾಡಿದ್ದೇವು ಎಂದು ತಿಳಿಸಿದರು. ಈ ಮಧ್ಯೆ ನ್ಯೂಜಿಲೆಂಡ್ ವಿರುದ್ಧದ ಪಂದ್ಯ ಗೆದ್ದ ಬಳಿಕ ಅಕ್ಷರ್ ಪಟೇಲ್ ಮಾರ್ಮಿಕವಾಗಿ ಪೋಸ್ಟ್ ಮಾಡುವ ಮೂಲಕ ಟೀಂ ಇಂಡಿಯಾ ತರಬೇತುದಾರ ಗೌತಮ್ ಗಂಭೀರ್ ವಿರುದ್ಧ ಪರೋಕ್ಷವಾಗಿ ಕಿಡಿಕಾರಿದ್ದರು.

# ಐಪಿಎಲ್ ಸಿದ್ಧತೆ: ವಿರಾಟ್ ಕೊಹ್ಲಿ ಕಠಿಣ ಅಭ್ಯಾಸ

**ಮುಂಬಯಿ, ಮಾ.12:** ಸ್ಟಾರ್ ಬ್ಯಾಟರ್ ವಿರಾಟ್ ಕೊಹ್ಲಿ ಮುಂಬರುವ ಇಂಡಿಯನ್ ಪ್ರೀಮಿಯರ್ ಲೀಗ್ 2026ರ ಸೀಸನ್‌ಗಾಗಿ ಸಿದ್ಧತೆ ಪ್ರಾರಂಭಿಸಿದ್ದಾರೆ. ನೆಟ್‌ನಲ್ಲಿ ಅಭ್ಯಾಸ ಮಾಡುತ್ತಿರುವ ಕೊಹ್ಲಿ ವೀಡಿಯೊಗಳು ಸೋಶಿಯಲ್ ಮೀಡಿಯಾದಲ್ಲಿ ಭಾರಿ ವೈರಲ್ ಆಗಿವೆ. ಇನ್‌ಸ್ಟಾಗ್ರಾಮ್‌ನಲ್ಲಿ ಕೊಹ್ಲಿ ಹಂಚಿಕೊಂಡಿರುವ ರೀಲ್ಸ್‌ನಲ್ಲಿ ಅಭ್ಯಾಸ ನಡೆಸುತ್ತಿರುವುದು ಕಂಡುಬಂದಿದೆ. ಐಪಿಎಲ್‌ನ ಹೊಸ ಸೀಸನ್ ಗೆ ಸಜ್ಜಾಗುತ್ತಿರುವಂತೆ ಬ್ಯಾಟಿಂಗ್ ಮೇಲೆ ಹೆಚ್ಚಿನ ಗಮನ ಕೇಂದ್ರೀಕರಿಸಿದ್ದಾರೆ. ಈ ವಿಡಿಯೋ ಕ್ಲಿಪ್ ಸಾಮಾಜಿಕ ಮಾಧ್ಯಮಗಳಲ್ಲಿ ಭಾರಿ ವೈರಲ್ ಆಗುತ್ತಿದ್ದು, ನೆಟ್ಟಿಗರು ಕೊಹ್ಲಿ ಫಿಟ್ ನೆಸ್ ಕಂಡು ಪುಳಕಿತರಾಗಿದ್ದಾರೆ. ನಾನಾ ರೀತಿಯಲ್ಲಿ ಪ್ರತಿಕ್ರಿಯೆ ನೀಡುತ್ತಿದ್ದಾರೆ. 2026 ಟಿ20 ವಿಶ್ವಕಪ್



ಫೈನಲ್ ವೇಳೆ ಎಂಎಸ್ ಧೋನಿ, ರೋಹಿತ್ ಶರ್ಮಾ ಹಾಜರು; ವಿರಾಟ್ ಕೊಹ್ಲಿ ಗೈರಾಗಿದ್ದು ಏಕೆ? ಐಪಿಎಲ್ ಇತಿಹಾಸದಲ್ಲಿ 267 ಪಂದ್ಯಗಳನ್ನಾಡಿರುವ ಕೊಹ್ಲಿ, 259 ಇನ್ನಿಂಗ್ಸ್‌ಗಳಲ್ಲಿ 8661 ರನ್ ಗಳಿಸಿದ್ದಾರೆ. 39.54 ಸರಾಸರಿ ಯಲ್ಲಿ 132.85 ಸ್ಟ್ರೈಕ್ ರೇಟ್ ಹೊಂದಿದ್ದಾರೆ. ಐಪಿಎಲ್ ಇತಿಹಾಸದಲ್ಲಿ ಎಂಟು ಶತಕಗಳು ಮತ್ತು 63 ಅರ್ಧ ಶತಕಗಳನ್ನು ಸಿಡಿಸಿದ್ದಾರೆ. ಕಳೆದ ಆವೃತ್ತಿಯಲ್ಲಿ 15 ಪಂದ್ಯಗಳಲ್ಲಿ 54.75 ರ ಸರಾಸರಿಯಲ್ಲಿ 657 ರನ್ ಗಳಿಸಿದ ಕೊಹ್ಲಿ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಟ್ರೋಫಿ ಎತ್ತಿಹಿಡಿಯುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

